22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 269 | ನವದೆಹಲಿ | ಬೆಲೆ ₹ 10 | ಏಪ್ರಿಲ್ 4, 2025, ಶುಕ್ರವಾರ

## ಒಳಪುಟಗಳಲ್ಲಿ

ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ: ಮುಂಜಾನೆ 3 ಗಂಟೆಗೆ ನಿರ್ಧಾರ - ಪು4

ಯಡಿಯೂರಪ್ಪ ಕುಟುಂಬ ರಾಜ್ಯಾಧ್ಯಕ್ಷ ಸ್ಥಾನದಿಂದ ಮುಕ್ತಿ ಆಗೋವರೆಗೂ ಬಿಜೆಪಿಗೆ ಹೋಗಲ್ಲ: ಯತ್ನಾಳ್ ಶಪಥ - ಪು.5

ಜಾಗ ಕಬಳಿಸಲು ಮುಸ್ಲಿಮರ ಯತ್ನ- ದಾಖಲೆ ಪರಿಶೀಲಿಸಲು ಆಯುಕ್ತರಿಗೆ ಕೆ.ಎಸ್.ಈಶ್ವರಪ್ಪ ಒತ್ತಾಯ- ಪು.6

# ನೀರಾವರಿ ಯೋಜನೆಗಳಿಗೆ ಅನುಮತಿ: ಕೇಂದ್ರಕ್ಕೆ ಸಿಎಂ ಮನವಿ

**ನವದೆಹಲಿ, ಏ.3: ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರನ್ನು ಭೇಟಿಮಾಡಿ ರಾಜ್ಯದಲ್ಲಿ ನನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳಿಗೆ ಅನುಮತಿ ನೀಡುವಂತೆ ಮನವಿ ಮಾಡಿದ್ದಾರೆ.**



ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನವದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರೊಂದಿಗೆ ಕೇಂದ್ರ ಸಚಿವರನ್ನು ಸಿದ್ದರಾಮಯ್ಯ ಭೇಟಿ ಮಾಡಿದರು. ಈ ವೇಳೆ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಉಪಸ್ಥಿತರಿದ್ದರು. ಕರ್ನಾಟಕ, ರಾಜಸ್ಥಾನ ಬಳಿಕ ಅತಿಹೆಚ್ಚು ಮರುಭೂಮಿಯನ್ನು ಹೊಂದಿದೆ. ಕೃಷಿ, ಭೂ ಬಳಕೆ, ಆಹಾರೋತ್ಪಾದನೆ, ನೀರಿನ ನಿರ್ವಹಣೆ, ನಾವಿನ್ಯ ತಂತ್ರಜ್ಞಾನ ಅಳವಡಿಕೆ, ಹವಾಮಾನ ಬದಲಾವಣೆಯ ಸವಾಲುಗಳ ನಿರ್ವಹಣೆ, ಸಾಮಾಜಿಕ-ಆರ್ಥಿಕ ಬೆಳವಣಿಗೆಗಳಲ್ಲಿ ಮುಂಚೂಣಿಯಲ್ಲಿದೆ. ಕರ್ನಾಟಕಕ್ಕೆ ಅಗತ್ಯವಾದ ನೀರಿನ ಸರಬರಾಜಿಗೆ ಆದ್ಯತೆ ನೀಡಬೇಕಿದೆ. ಕರ್ನಾಟಕ ಸರ್ಕಾರ ಈಗಾಗಲೇ ರವಾನಿಸಿರುವ ಪ್ರಸ್ತಾವನೆಗಳ ಪೈಕಿ ಮೇಕೆದಾಟು, ಭದ್ರಾ ಮೇಲ್ದಂಡೆ ಯೋಜನೆಗಳು ಬಾಕಿ ಉಳಿದಿವೆ. ಪ್ರಮುಖವಾಗಿ ಮೇಕೆದಾಟು ಯೋಜನೆಯ ಬಗ್ಗೆ ಪ್ರಸ್ತಾಪಿಸಿರುವ ಮುಖ್ಯಮಂತ್ರಿಗಳು ಯೋಜನೆಯ ಆರಂಭದಿಂದ ಇತ್ತೀಚಿನವರೆಗಿನ ಬೆಳವಣಿಗೆಗಳ ಸಮಗ್ರ ಮಾಹಿತಿ ನೀಡಿದ್ದಾರೆ. ಕುಡಿಯುವ ನೀರು ಹಾಗೂ ವಿದ್ಯುತ್ ಉತ್ಪಾದನೆ ಈ ಯೋಜನೆಯಿಂದ ಕರ್ನಾಟಕ ಹಾಗೂ ತಮಿಳುನಾಡು ಈ ಎರಡೂ ರಾಜ್ಯಗಳಿಗೂ ಅನುಕೂಲವಾಗಲಿದೆ ಎಂದು ಪ್ರಸ್ತಾಪಿಸಿದ್ದಾರೆ. ಜಲಶಕ್ತಿ ಸಚಿವರು, ಕೇಂದ್ರ ಜಲ ಆಯೋಗದ ಪ್ರಾಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿ ವಿಸ್ತೃತ ಯೋಜನಾ ವರದಿಗೆ ಮಂಜೂರಾತಿ ನೀಡುವುದು ಹಾಗೂ ಮೇಕೆದಾಟು ಯೋಜನೆಯ ಅನುಷ್ಠಾನಕ್ಕೆ ಅಗತ್ಯ ನಿರಾಕ್ಷೇಪಣಾ ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗಾಗಿ ಈ ಹಿಂದೆ 2023-24ನೇ ಸಾಲಿನ ಬಜೆಟ್ನಲ್ಲಿ ಘೋಷಿಸಿದಂತೆ 5300 ಕೋಟಿ ರೂ.ಗಳ ಅನುದಾನವನ್ನು ಶೀಘ್ರವೇ ಬಿಡುಗಡೆ ಮಾಡಬೇಕೆಂದು ಮನವಿ ಮಾಡಿದ್ದಾರೆ. ಕೃಷ್ಣಾ ನದಿ ನೀರು ವಿವಾದದ ಕುರಿತು ಪ್ರಸ್ತಾಪಿಸಿರುವ ಮುಖ್ಯಮಂತ್ರಿಯವರು ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ಯೋಜನೆಯೆಂದು ಘೋಷಣೆ ಮಾಡಬೇಕು. ಆಂಧ್ರಪ್ರದೇಶ ಮತ್ತು ತೆಲಂಗಾಣ ನಡುವಿನ ನೀರಿನ ಹಂಚಿಕೆ ತಗಾದೆಗೆ ಸಂಬಂಧಪಟ್ಟ ಅರ್ಜಿಯನ್ನು ಇತ್ಯರ್ಥಪಡಿಸಲು ಕೂಡಲೇ ಸುಪ್ರೀಂಕೋರ್ಟ್‌ಗೆ ಸಮರ್ಪಕ ಅರ್ಜಿ ಸಲ್ಲಿಸಬೇಕು ಎಂದು ಮನವಿ ಮಾಡಿದ್ದಾರೆ. ಕಳಸಾ ಬಂಡೂರಿ ನಾಲಾ ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿ ವತಿಯಿಂದ ಅಗತ್ಯ ಪೂರ್ವಾನುಮತಿ ಕೊಡಿಸಬೇಕು ಎಂದು ಮನವಿ ಮಾಡಿದ್ದಾರೆ. ಪ್ರಮುಖವಾಗಿ ಗೋದಾವರಿ-ಕಾವೇರಿ ನದಿ ಜೋಡಣೆ, ಬೇಡ್ತಿ-ವರದಾ ನದಿ ಜೋಡಣೆ ಯೋಜನೆಯಲ್ಲಿ ಕರ್ನಾಟಕಕ್ಕೆ ಹೆಚ್ಚಿನ ನೀರು ದೊರೆಯುವಂತೆ ಕಾಳಜಿ ವಹಿಸಬೇಕು ಎಂದು ಮನವಿ ಮಾಡಿದ್ದಾರೆ. ತೆಲಂಗಾಣ, ಆಂಧ್ರಪ್ರದೇಶ, ತಮಿಳುನಾಡು, ಕರ್ನಾಟಕ ಸೇರಿದಂತೆ ನಾಲ್ಕು ರಾಜ್ಯಗಳ ನಡುವೆ ಹರಿಯುವ ಈ ನದಿಗಳನ್ನು ಜೋಡಣೆ ಮಾಡುವ ಪ್ರಸ್ತಾವನೆ ಚಾಲ್ತಿಯಲ್ಲಿದೆ. ಮತ್ತಷ್ಟು ಸಮಾಲೋಚನಾ ಸಭೆಗಳನ್ನು ನಡೆಸಿ ರಾಜ್ಯವಾರು ನೀರಾವರಿ ಪ್ರದೇಶಗಳಲ್ಲಿ ಭೇಟಿ ನೀಡಿ ಪುನರ್ ಪರಿಶೀಲನೆ ಮಾಡುವ ಮೂಲಕ ರಾಜ್ಯಕ್ಕೆ ನ್ಯಾಯೋಚಿತವಾಗಿ ನೀರಿನಲ್ಲಿ ಹೆಚ್ಚಿನ ಪಾಲು ಕೊಡಿಸುವಂತೆ ಮನವಿ ಮಾಡಿದ್ದಾರೆ.

## ಟ್ರಂಪ್ ಘೋಷಣೆಯ ಸುಂಕಗಳ ಪರಿಣಾಮ: ಭಾರತ ಸರ್ಕಾರದಿಂದ ವಿಶ್ಲೇಷಣೆ

**ನವದೆಹಲಿ, ಏ.3:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ 26 ಪ್ರತಿಶತ "ಪರಸ್ಪರ ಸುಂಕಗಳು"ಗೆ ಕಾವಲು ಪ್ರತಿಕ್ರಿಯೆಯಾಗಿ, ಸರ್ಕಾರ ಗುರುವಾರ ಟ್ರಂಪ್ ಇಂದು ಮೊದಲು ಮಾಡಿದ ವಿವಿಧ ಕ್ರಮಗಳು/ಘೋಷಣೆಗಳ ಪರಿಣಾಮಗಳನ್ನು ಪರಿಶೀಲಿಸುತ್ತಿದೆ ಎಂದು ಹೇಳಿದೆ. ಎಲ್ಲಾ ವ್ಯಾಪಾರ ಪಾಲುದಾರರಿಂದ ಆಮದುಗಳ ಮೇಲೆ 10% ರಿಂದ 50% ವರೆಗಿನ ಹೆಚ್ಚುವರಿ ಮೌಲ್ಯಯುತ ಸುಂಕಗಳನ್ನು ವಿಧಿಸುವ ಪರಸ್ಪರ ಸುಂಕಗಳ ಕುರಿತು ಕಾರ್ಯಕಾರಿ ಆದೇಶವನ್ನು ಅಮೆರಿಕ ಅಧ್ಯಕ್ಷರು ಹೊರಡಿಸಿದ್ದಾರೆ. 10% ರ ಮೂಲ ಸುಂಕವು ಏಪ್ರಿಲ್ 05, 2025 ರಿಂದ ಜಾರಿಗೆ ಬರಲಿದೆ ಮತ್ತು ಉಳಿದ ದೇಶ-ನಿರ್ದಿಷ್ಟ ಹೆಚ್ಚುವರಿ ಮೌಲ್ಯಯುತ ಸುಂಕವು ಏಪ್ರಿಲ್ 09, 2025 ರಿಂದ ಜಾರಿಗೆ ಬರಲಿದೆ. ಕಾರ್ಯನಿರ್ವಾಹಕ ಆದೇಶದ ಪ್ರಕಾರ ಭಾರತದ ಮೇಲಿನ ಹೆಚ್ಚುವರಿ ಸುಂಕವು 27% ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ಅಧಿಕೃತ ಹೇಳಿಕೆಯಲ್ಲಿ ತಿಳಿಸಿದೆ. ಅಮೆರಿಕಾ ಅಧ್ಯಕ್ಷರು ಮಾಡಿದ ವಿವಿಧ ಕ್ರಮಗಳು/ಘೋಷಣೆಗಳ ಪರಿಣಾಮಗಳನ್ನು ವಾಣಿಜ್ಯ ಇಲಾಖೆ ಎಚ್ಚರಿಕೆಯಿಂದ ಪರಿಶೀಲಿಸುತ್ತಿದೆ. ವಿಕಸಿತ್ ಭಾರತದ ದೃಷ್ಟಿಕೋನವನ್ನು ಗಮನದಲ್ಲಿಟ್ಟುಕೊಂಡು, ಇಲಾಖೆಯು ಭಾರತೀಯ ಕೈಗಾರಿಕೆ ಮತ್ತು ರಫ್ತುದಾರರು ಸೇರಿದಂತೆ ಎಲ್ಲಾ ಪಾಲುದಾರರೊಂದಿಗೆ ತೊಡಗಿಸಿಕೊಂಡಿದೆ, ಸುಂಕಗಳ ಮೌಲ್ಯಮಾಪನದ ಪ್ರತಿಕ್ರಿಯೆಯನ್ನು ತೆಗೆದುಕೊಳ್ಳುತ್ತದೆ ಮತ್ತು ಪರಿಸ್ಥಿತಿಯನ್ನು ನಿರ್ಣಯಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಯುಎಸ್ ವ್ಯಾಪಾರ ನೀತಿಯಲ್ಲಿನ ಈ ಹೊಸ ಬೆಳವಣಿಗೆಯಿಂದ ಉಂಟಾಗಬಹುದಾದ ಅವಕಾಶಗಳನ್ನು ಇಲಾಖೆಯು ಅಧ್ಯಯನ ಮಾಡುತ್ತಿದೆ.

## ಚೀನಾ, ಅಮೆರಿಕದಿಂದ ಸುಂಕ ಹೇರಿಕೆಗೆ ರಾಹುಲ್ ಗಾಂಧಿ ತರಾಟೆ



ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಗುರುವಾರ ಸರ್ಕಾರದ ವಿದೇಶಾಂಗ ನೀತಿಯ ಮೇಲೆ, ವಿಶೇಷವಾಗಿ ಚೀನಾ ಭಾರತೀಯ ಪ್ರದೇಶಗಳನ್ನು ಆಕ್ರಮಿಸಿಕೊಂಡಿರುವುದು ಮತ್ತು ಯುಎಸ್ ಅಧ್ಯಕ್ಷ ಟ್ರಂಪ್ ಭಾರತೀಯ ಸರಕುಗಳ ಮೇಲೆ ಶೇ.26 ರಷ್ಟು ಸುಂಕವನ್ನು ವಿಧಿಸಿರುವ ಬಗ್ಗೆ ತೀವ್ರ ದಾಳಿ ನಡೆಸಿದರು. ಈ ಸುಂಕದ ಬಗ್ಗೆಯೂ ರಾಹುಲ್ ಗಾಂಧಿ ಸರ್ಕಾರದ ಪ್ರತಿಕ್ರಿಯೆಯನ್ನು ಕೋರಿದರು. ಭಾರತೀಯ ಸರಕುಗಳ ಮೇಲೆ ಸುಂಕ ವಿಧಿಸುವ ಭಾರತದ ಮಿತ್ರ ನಿರ್ಧಾರವು "ದೇಶದ ಆರ್ಥಿಕತೆಯನ್ನು ಧ್ವಂಸಗೊಳಿಸುತ್ತದೆ" ಎಂದು ಅವರು ಹೇಳಿದ್ದಾರೆ. ನಮ್ಮ ಆಟೋ ಉದ್ಯಮ, ಔಷಧ ಉದ್ಯಮ ಮತ್ತು ಕೃಷಿ ಎಲ್ಲವೂ ಸಾಲಿನಲ್ಲಿವೆ ಎಂದು ಅವರು ಹೇಳಿದರು.




# ಗಿಗ್ ಕಾರ್ಮಿಕರ ಕಲ್ಯಾಣ ಮಂಡಳಿ ಸ್ಥಾಪಿಸಲು ತೀರ್ಮಾನ

## ರಾಹುಲ್ ಗಾಂಧಿ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚರ್ಚೆ



**ನವದೆಹಲಿ, ಏ.3:** ರಾಜ್ಯದಲ್ಲಿ ಗಿಗ್ ಕಾರ್ಮಿಕರ ಕಲ್ಯಾಣ ಮಂಡಳಿ ರಚಿಸಲು ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಅಮೆಜಾನ್, ಫ್ಲಿಪ್ ಕಾರ್ಟ್ ಸೇರಿದಂತೆ ಹತ್ತಾರು ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಕಾರ್ಮಿಕರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಅಗತ್ಯ ಕ್ರಮಗಳಿಗಾಗಿ ಮುಂದಾಗಿತ್ತು. ಭಾರತ್ ಜೋಡೋ ಯಾತ್ರೆ ಸಂದರ್ಭದಲ್ಲಿ ರಾಹುಲ್ ಗಾಂಧಿ ಅವರೂ ಗಿಗ್ ಕಾರ್ಮಿಕರ ಕಲ್ಯಾಣಕ್ಕಾಗಿ ಅವರ ಪರವಾಗಿ ಧ್ವನಿ ಎತ್ತಿದ್ದರು. ಇಂದು ರಾಹುಲ್ ಗಾಂಧಿ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಸಂತೋಷ್ ಲಾಡ್, ಪ್ರಿಯಾಂಕ್ ಖರ್ಗೆ, ಎಂ.ಬಿ.ಪಾಟೀಲ್ ಅವರು ಪಾಲ್ಗೊಂಡು ಈ ಬಗ್ಗೆ ಸಮಗ್ರವಾಗಿ ಚರ್ಚಿಸಿದರು.

ಸಭೆ ಫಲಪ್ರದವಾಗಿದ್ದು "ಗಿಗ್ ಕಾರ್ಮಿಕರ ಕಲ್ಯಾಣ ಮಂಡಳಿ" ಸ್ಥಾಪಿಸುವ ತೀರ್ಮಾನಕ್ಕೆ ಬರಲಾಗಿದೆ. ಸಂಬಂಧಿತ ಸಂಸ್ಥೆಗಳಿಂದ ಶೇ5 ರಷ್ಟು ಸೆಸ್ ಸಂಗ್ರಹಿಸುವುದು ಮತ್ತು ಉಳಿದ ಅಗತ್ಯ ಹಣವನ್ನು ಸರ್ಕಾರವೇ ಭರಿಸಿ ಗಿಗ್ ಕಾರ್ಮಿಕರ ಕಲ್ಯಾಣಕ್ಕೆ ಯೋಜನೆಗಳನ್ನು ರೂಪಿಸುವುದು, ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಸಭೆಯಲ್ಲಿ ತೀರ್ಮಾನಿಸಲಾಗಿದೆ.

# ಅಕ್ಕಿ ಜೊತೆಗೆ ಇನ್ನಷ್ಟು ಹೆಚ್ಚಿನ ಆಹಾರ ಧಾನ್ಯಗಳ ವಿತರಣೆ

## ಕೇಂದ್ರ ಸಚಿವ ಜೋಶಿಗೆ ಕೆ.ಎಚ್.ಮುನಿಯಪ್ಪ ವಿನಂತಿ



ಕೇಂದ್ರ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಅವರನ್ನು ಭೇಟಿ ಮಾಡಿದ ಆಹಾರ ಸಚಿವ ಕೆ.ಎಚ್. ಮುನಿಯಪ್ಪ.ಆಹಾರ ಇಲಾಖೆಯಲ್ಲಿ ನ್ಯಾಯ ಬೆಲೆ ಅಂಗಡಿಗಳ ಮೂಲಕ ಅಕ್ಕಿಯೊಂದಿಗೆ ಎಣ್ಣೆ, ಬೇಳೆ ವಿತರಣೆಗೆ ಕ್ರಮಕೈಗಳ್ಳಲು ಕೇಂದ್ರ ಸಚಿವರಿಗೆ ಮನವಿ ಮಾಡಿದರು.

**ನವದೆಹಲಿ, ಏ.3:** ಕೇಂದ್ರ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಅವರನ್ನು ಬೇಟಿ ಮಾಡಿದ ಆಹಾರ ಸಚಿವ ಕೆ.ಎಚ್. ಮುನಿಯಪ್ಪ. ಆಹಾರ ಇಲಾಖೆಯಲ್ಲಿ ನ್ಯಾಯ ಬೆಲೆ ಅಂಗಡಿಗಳ ಮೂಲಕ ಅಕ್ಕಿಯೊಂದಿಗೆ ಎಣ್ಣೆ ಬೇಳೆ ವಿತರಣೆಗೆ ಕ್ರಮ ವಹಿಸಲು ಕೇಂದ್ರ ಸಚಿವರಿಗೆ ಮನವಿ ಮಾಡಿದರು. ಕರ್ನಾಟಕದಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ **(NFSA)** ಅಡಿಯಲ್ಲಿ ಅಕ್ಕಿಯ ಜೊತೆಗೆ ಹೆಚ್ಚುವರಿ ಆಹಾರ ಧಾನ್ಯಗಳನ್ನು ವಿತರಿಸುವ ಅಗತ್ಯವನ್ನು ನಿಮ್ಮ ಗಮನಕ್ಕೆ ತರಲು . ಕೇಂದ್ರ ಸರ್ಕಾರದೊಂದಿಗೆ ಹೊಂದಿರುವ ಒಪ್ಪಂದದ ಪ್ರಕಾರ, ಫೆಬ್ರವರಿ 2025 ರಿಂದ ಹಣ ನೀಡುವ ಬದಲು ಪ್ರತಿ ಲಾಭಾರ್ಥಿಗೆ 10 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. ಕೇಂದ್ರ ಸರ್ಕಾರ ಪ್ರತಿ ಲಾಭಾರ್ಥಿಗೆ 5 ಕೆಜಿ ಅಕ್ಕಿಯನ್ನು ನೀಡುತ್ತದೆ. ಆದರೆ, ಜೂನ್ 2023 ರಿಂದ, ಕರ್ನಾಟಕ ಸರ್ಕಾರ NFSA ಆಹಾರ ಧಾನ್ಯಗಳನ್ನು ವಿತರಿಸುತ್ತಿದ್ದು, ಪ್ರತಿ ಫಲಾನುಭವಿಗೆ 170 ನಷ್ಟು ಮೊತ್ತವನ್ನು DBT ಮೂಲಕ ಅವರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡುತ್ತಿದೆ.

ಹಿಂದಿನ ದಿನಗಳಲ್ಲಿ, ಕರ್ನಾಟಕ ಸರ್ಕಾರ ಅಕ್ಕಿಯ ಜೊತೆಗೆ ಗೋದಿ, ಸಕ್ಕರೆ, ಬೇಳೆ ಹಾಗೂ ಇತರ ಸಾಮಗ್ರಿಗಳನ್ನು ವಿತರಿಸುತ್ತಿತ್ತು. ಆದರೆ ಪ್ರಸ್ತುತ, ಪಡಿತರ ಚೀಟಿದಾರರು ಅಕ್ಕಿ, ರಾಗಿ, ಮತ್ತು ಜೋಳವನ್ನು ಮಾತ್ರ ಪಡೆಯುತ್ತಿದ್ದಾರೆ, ಅದೂ ಕನಿಷ್ಠ ಬೆಂಬಲ ಬೆಲೆ **(MSP)** ಯೋಜನೆಯಡಿ. ಇತ್ತೀಚೆಗೆ PDS ಫಲಾನುಭವಿಗಳ ನಡುವೆ ನಡೆಸಿದ ಸಮೀಕ್ಷೆಯಲ್ಲಿ 92% ಪಡಿತರ ಚೀಟಿದಾರರು ಗೋದಿ, ಸಕ್ಕರೆ, ಮತ್ತು ಇತರ ಆಹಾರ ಧಾನ್ಯಗಳ ಅಗತ್ಯವಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಕರ್ನಾಟಕದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ (**NFSA**) ಗರಿಷ್ಠ ಮಿತಿಯನ್ನು ಹೆಚ್ಚಿಸುವ ಅಗತ್ಯದ ಕಡೆಗೆ ಗಮನ ಹರಿಸುವಂತೆ ಮನವಿ ಮಾಡುತ್ತೇನೆ. ಪ್ರಸ್ತುತ, ರಾಜ್ಯದ ಸಾರ್ವಜನಿಕ ವಿತರಣಾ ವ್ಯವಸ್ಥೆ **(PDS)** 2011 ಜನಗಣತಿಯ ಆಧಾರದ ಮೇಲೆ ನಿಗದಿಯಾದ 4,01,93,000 **NFSA** ಫಲಾನುಭವಿ ಗಳನ್ನು ಒಳಗೊಂಡ ಮಿತಿಯ ಒಳಗೆ ಕಾರ್ಯನಿರ್ವಹಿಸುತ್ತಿದೆ. ಇದರಿಂದ 65.96% ಜನಸಂಖ್ಯೆಯನ್ನು ಒಳಗೊಂಡಿದೆ (ನಗರ ಪ್ರದೇಶದಲ್ಲಿ 50% ಮತ್ತು ಗ್ರಾಮೀಣ ಪ್ರದೇಶದಲ್ಲಿ 75%). ಆದರೆ, 2025ರಲ್ಲಿ, ಜನಸಂಖ್ಯೆ ಹೆಚ್ಚಳ ಮತ್ತು ಜನಸಾಂಖ್ಯಿಕ ಬದಲಾವಣೆಗಳ ಕಾರಣ, 2011ರ ಜನಗಣತಿಯ ಬಳಿಕ ಜನಸಂಖ್ಯೆಯಲ್ಲಿ ಹೆಚ್ಚಳವಾದ ಕಾರಣ, ರಾಜ್ಯ ಹೆಚ್ಚುವರಿ ಕೋಟಾವನ್ನು ಬೇಕಾಗುತ್ತದೆ.

**ಅಕ್ಕಿಯ ಜೊತೆಗೆ ತೈಲ ಮತ್ತು ಬೇಳೆಯನ್ನು ನ್ಯಾಯಬೆಲೆ ಅಂಗಡಿಗಳ ಮೂಲಕ ವಿತರಿಸಲು ವ್ಯವಸ್ಥೆ ಮಾಡಲಾಗಬೇಕು:**

**ಉತ್ತರ ಕರ್ನಾಟಕವು ಪ್ರಮುಖ ಬೇಳೆ ಉತ್ಪಾದಕ ಪ್ರದೇಶವಾಗಿದೆ. ಹಿಂದಿನ ದಿನಗಳಲ್ಲಿ, ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬೇಳೆ ಖರೀದಿಸಿ ಪಡಿತರ ಚೀಟಿದಾರರಿಗೆ ವಿತರಿಸಲಾಗುತ್ತಿತ್ತು. ಗೋದಿ, ಸಕ್ಕರೆ, ತಾಳೆ ಎಣ್ಣೆ, ಮತ್ತು ಬೇಳೆಯನ್ನು ಅಕ್ಕಿಯ ಜೊತೆಗೆ ಮತ್ತೆ ವಿತರಿಸುವುದರಿಂದ ಪಡಿತರ ಚೀಟಿದಾರರಿಗೆ ಹೆಚ್ಚಿನ ಲಾಭವಾಗಲಿದೆ. ಈ ಹಿನ್ನೆಲೆಯಲ್ಲಿ, ಈ ವಿಷಯವನ್ನು ಅನುಕೂಲಕರವಾಗಿ ಪರಿಗಣಿಸಿ, ಬಹು-ಧಾನ್ಯ ವಿತರಣಾ ಯೋಜನೆಯನ್ನು ನ್ಯಾಯಬೆಲೆ ಅಂಗಡಿಗಳ ಮೂಲಕ ಜಾರಿಗೆ ತರಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ವಿನಂತಿಸುತ್ತೇನೆ.**




**ದೆಹಲಿಯಲ್ಲಿ ನಿರ್ಮಾಣಗೊಂಡ ಕರ್ನಾಟಕ ಭವನ-1ರ (ಕಾವೇರಿ) ಕಟ್ಟಡ ನಿರ್ಮಾಣಕ್ಕೆ ಶ್ರಮಿಸಿದ ಎನ್.ಎಲ್. ಶರತ್‌ಕುಮಾರ್, ಕರ್ನಾಟಕ ಭವನದಲ್ಲಿ ಸಹಾಯಕ ಇಂಜಿನಿಯರ್ ಆಗಿ ಕೆಲಸ ನಿರ್ವಹಿಸುತ್ತಿರುವ ಇವರಿಗೆ ಸಿಎಂ, ಡಿಸಿಎಂ, ಲೋಕೋಪಯೋಗಿ ಸಚಿವರಿಂದ ಸನ್ಮಾನ**

# ಸರ್ಕಾರದ ಜನವಿರೋಧಿ ಧೋರಣೆ ಖಂಡಿಸಿ ಬಿಜೆಪಿ ಅಹೋರಾತ್ರಿ ಧರಣಿ

**ಬೆಂಗಳೂರು, ಏ.3:** ಬೆಲೆ ಏರಿಕೆ ವಿರೋಧಿಸಿ ಪ್ರತಿಪಕ್ಷ ಬಿಜೆಪಿ ನಾಯಕರು ಎರಡನೇ ದಿನವೂ ಹೋರಾಟ ಮುಂದುವರಿಸಿದರು. ಸರ್ಕಾರದ ಜನ ವಿರೋಧಿ ಧೋರಣೆ ವಿರೋಧಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧಿಕೃತ ನಿವಾಸ ಕಾವೇರಿಗೆ ಮುತ್ತಿಗೆ ಹಾಕಲು ಮುಂದಾಗಿದ್ದಾಗ ಪೊಲೀಸರು ಫ್ರೀಡಂ ಪಾರ್ಕ್‌ನಲ್ಲೇ ಅವರನ್ನು ವಶಕ್ಕೆ ತೆಗೆದುಕೊಂಡ ಪ್ರಸಂಗ ಜರುಗಿತು. ಎರಡು ದಿನಗಳಿಂದ ನಗರದ ಫ್ರೀಡಂ ಪಾರ್ಕ್‌ನಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಹಿಳಾ ಮೋರ್ಚಾದ ಪದಾಧಿಕಾರಿಗಳು ಮತ್ತಿತರರು ಅಹೋರಾತ್ರಿ ಧರಣಿ ನಡೆಸುತ್ತಿದ್ದರು. ಯಡಿಯೂರಪ್ಪ ನೇತೃತ್ವದಲ್ಲಿ ಸಿ ಎಂ ಸಿದ್ದರಾಮಯ್ಯ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಮುಂದಾದರು. ರಸ್ತೆಯ ಎರಡೂ ಕಡೆ ಬ್ಯಾರಿಕೇಡ್ ಹಾಕಿ ಬಿಗಿ ಭದ್ರತೆಯನ್ನು ಕೈಗೊಳ್ಳಲಾಗಿತ್ತು. ಮೊದಲು ಮಹಿಳೆಯರು, ತಾಯಂದಿರು , ಮಹಿಳಾ ಕಾರ್ಯಕರ್ತರು ಮುತ್ತಿಗೆ ಹಾಕಲು ಯತ್ನಿಸಿದಾಗ ಕೂಡಲೇ ಮಧ್ಯ ಪ್ರವೇಶ ಮಾಡಿದ ಪೊಲೀಸರು ಫ್ರೀಡಂಪಾರ್ಕ್ ಮುಂಭಾಗವೇ ಕಾರ್ಯಕರ್ತರನ್ನು ತಡೆದು ವಶಕ್ಕೆ ತೆಗೆದುಕೊಂಡರು. ಬ್ಯಾರಿಕೇಡ್ ಅಳವಡಿಸಿ ಪ್ರತಿಭಟನಾ ನಿರತರನ್ನು ಪೊಲೀಸರು ತಡೆಯಲು ಯತ್ನಿಸಿದಾಗ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಬ್ಯಾರಿಕೇಡ್ ಹತ್ತಿ ಪೊಲೀಸರು ಹಾಗೂ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ಯಡಿಯೂರಪ್ಪ, ವಿಜಯೇಂದ್ರ, ಅಶೋಕ್ ಮತ್ತಿತರರು ಮುತ್ತಿಗೆ ಹಾಕಲು ಮುಂದಾಗುತ್ತಿದ್ದಂತೆ ಪೊಲೀಸರು ತಕ್ಷಣವೇ ವಶಕ್ಕೆ ಪಡೆದು ಬಸ್‌ನಲ್ಲಿ ಕರೆದೊಯ್ದರು.



ಪ್ರತಿಭಟನೆಯ ವೇದಿಕೆಯಲ್ಲಿ ಬಿ.ವೈ.ವಿಜಯೇಂದ್ರ ಮಾತನಾಡಿ, ಬಿಜೆಪಿಯಿಂದ ಆರಂಭವಾಗಿರುವ ಹೋರಾಟ ದುಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ. ಎರಡು ದಿನಗಳಿಂದ ಹೋರಾಟ ಆರಂಭವಾಗಿದೆ. ನಾಡಿನ ಜನರ ವಿಶ್ವಾಸ ಪಡೆದುಕೊಂಡು ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್, ಬಡವರ ಕಣ್ಣೀರು ಒರೆಸುವ ಕೆಲಸ ಮಾಡಬೇಕಾಗಿತ್ತು. ದುರಂತ ಎಂದರೆ ಸಿದ್ಧರಾಮಯ್ಯ, ಬಡವರು ರೈತರ ಪರವಾಗಿ ಕಣ್ಣೀರು ಒರೆಸಬೇಕಾಗಿತ್ತು ಎಂದು ಹೇಳಿದರು. ಸಿದ್ಧರಾಮಯ್ಯರ ಸಮಾಜವಾದಿ ಮುಖವಾಡ 20 ತಿಂಗಳಲ್ಲಿ ಕಳಚಿಬಿದ್ದಿದೆ. ನಾನು ಈ ವೇದಿಕೆಯ ಮೂಲಕ ಪ್ರಶ್ನಿಸುತ್ತೇನೆ. ಸಿದ್ಧರಾಮಯ್ಯನವರೇ, ಅಧಿಕಾರಕ್ಕೆ ಬರುವ ಮುನ್ನಾ ಇದ್ದ ಕಾಳಜಿ ಈಗ ಏಕೆ ಇಲ್ಲ?, ವಿಪಕ್ಷದಲ್ಲಿದ್ದಾಗ ಇದ್ದ ಕಾಳಜಿ ಈಗ್ಯಾಕೆ ಇಲ್ಲ?, ರಾಜ್ಯದಲ್ಲಿ ಅಧಿಕಾರಕ್ಕೆ ಬರುವ ಮುನ್ನ ಅಹಿಂದ ಅಹಿಂದ ಎಂದು ಹೇಳುತ್ತಿದ್ದೀರಿ. ಅಧಿಕಾರಕ್ಕೆ ಬಂದ ಮೇಲೆ ಯಾವ ಅಹಿಂದವೂ ಇಲ್ಲ. ನೇಕಾರರು, ಸವಿತಾ, ಈಡಿಗ, ಮೀನುಗಾರರ ಸಮಾಜ ಇರಬಹುದು. ಎಲ್ಲವನ್ನೂ ತುಳಿದಿದ್ದೀರಿ. ಹಿಂದುಳಿದ ಸಮಾಜವನ್ನು ನೋಡಲಿಲ್ಲ. ಕೇವಲ ಮುಸ್ಲಿಮರ ಹಿಂದೆ ಹೋಗಿದ್ದೀರಿ ಎಂದು ವಾಗ್ದಾಳಿ ನಡೆಸಿದರು. ಜನರ ಪರವಾಗಿ ಇದ್ದಿದ್ದರೆ, ಬೆಲೆ ಏರಿಕೆ ಮಾಡುತ್ತಿರಲಿಲ್ಲ. ಇಂದು ಅಧಿಕಾರದ ಅಮಲನ್ನು ಇಳಿಸುವ ಶಕ್ತಿ ಬಿಜೆಪಿಗೆ ಇದೆ. ಯಾವ ಮತದಾರರು ಸಿಎಂ ಗದ್ದುಗೆ ಕೊಟ್ಟಿದ್ದಾರೆ, ಅವರು ನಿಮ್ಮನ್ನು ಕೆಳಗೆ ಇಳಿಸುತ್ತಾರೆ. ಮುಂದೆ ಇಟ್ಟ ಹೆಜ್ಜೆ ಹಿಂದೆ ಇಡುವುದಿಲ್ಲ. ಏಪ್ರಿಲ್ 5 ರಂದು ಮತ್ತೆ ಹೋರಾಟ ಮಾಡುತ್ತೇವೆ. ಏಪ್ರಿಲ್ 7 ರಂದು ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿ ಪ್ರಾರಂಭ ಮಾಡುತ್ತೇವೆ. ಪ್ರತಿ ಜಿಲ್ಲೆಗೂ ಬರುತ್ತೇವೆ ಎಂದರು. ಮೊದಲು ಬೆಲೆ ಏರಿಕೆ ಹಿಂಪಡೆಯಬೇಕು. ಎರಡನೆಯದು ಮುಸ್ಲಿಮರಿಗೆ ಕೊಟ್ಟಿರುವ ಮೀಸಲಾತಿ ಹಿಂಪಡೆಯಬೇಕು. ಮೂರನೆಯದು ದಲಿತರಿಗೆ ಮೀಸಲಿಟ್ಟ ಹಣವನ್ನು ಅವರಿಗೆ ತಲುಪಿಸಬೇಕು ಎಂದು ಬಿ.ವೈ.ವಿಜಯೇಂದ್ರ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಯಡಿಯೂರಪ್ಪ, ಈ ಹೋರಾಟ ಇಲ್ಲಿಗೇ ನಿಲ್ಲುವುದಿಲ್ಲ. ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಯವರಿಗೆ ಹೇಳುತ್ತೇನೆ. ನಾವು ಕಟ್ಟುವ ತೆರಿಗೆ ಹಣವನ್ನು ಲೂಟಿ ಮಾಡುತ್ತಿದ್ದೀರಿ. ನೀರಾವರಿ ಯೋಜನೆಗಳು ಆಗುತ್ತಿಲ್ಲ. ಅವರು ನಮನ್ನು ಬಂಧಿಸಲಿ. ನಮನ್ನು ಎಲ್ಲಿಗೆ ಕರೆದುಕೊಂಡು ಹೋಗುತ್ತಾರೋ ಹೋಗಲಿ. ಇದೊಂದು ದರಿದ್ರ ಸರ್ಕಾರ. ಅವರು ನಮನ್ನು ಬಂಧಿಸಲಿ. ರಾಜ್ಯಾದ್ಯಂತ ಹೋರಾಟ ಮಾಡುತ್ತೇವೆ ಎಂದು ಗುಡುಗಿದರು. ಜನರ ತೆರಿಗೆ ಲೂಟಿ ಮಾಡುತ್ತಿರುವ ಈ ಸರ್ಕಾರ, ಸಿದ್ಧರಾಮಯ್ಯ ಅವರಿಗೆ ನಾನು ಒಂದು ಮಾತು ಹೇಳುತ್ತೇನೆ. ನೀವು ಅಧಿಕಾರದಲ್ಲಿ ಮುಂದುವರೆಯಲು ಸಾಧ್ಯವಿಲ್ಲ. ಅಧಿಕಾರ ಬಿಟ್ಟು ತೊಲಗಿ. ನಾನು ಕೂಡ ರಾಜ್ಯಾದ್ಯಂತ ಪ್ರವಾಸ ಮಾಡುತ್ತೇನೆ. ಈ ಹೋರಾಟದ ಮೂಲಕ ಅಧಿಕಾರ ಬಿಟ್ಟು ಇಳಿಸುತ್ತೇವೆ ಎಂದು ಶಪಥ ಮಾಡಿದರು.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ನೀವು ಜನತಾ ನ್ಯಾಯಾಲಯದಲ್ಲಿ ನಿಂತಿದ್ದೀರಿ. ಇಲ್ಲಿ ಉತ್ತರಿಸುವಾಗ ಎಚ್ಚರ ಇರಲಿ.ಇಲ್ಲವಾದರೆ, ಜನತಾ ನ್ಯಾಯಾಲಯದಲ್ಲಿ ಛೀಮಾರಿ ಹಾಕಿಸಿಕೊಳ್ಳಬೇಕಾ ಗುತ್ತದೆ. 5 ಗ್ಯಾರಂಟಿಗಳನ್ನು ಘೋಷಿಸಿ ಪೇಚಿಗೆ ಸಿಲುಕಿಸಿದ್ದೀರಿ. ಮುಡಾದಲ್ಲಿ ಲೋಕಾಯುಕ್ತರಿಂದ ಕ್ಲೀನ್ಚಿಟ್ ಪಡೆಯಲು ಮುಂದಾಗಿದ್ದೀರಿ. ಈಗ ಅದು ನಿಮ ಬುಡಕ್ಕೆ ಬಂದಿದೆ ಎಂದು ತಿರುಗೇಟು ನೀಡಿದರು. ಮಾಡಿ ಸರ್ಕಾರ ರಚಿಸಿದ್ರು, ಅದೇ ಗುತ್ತಿಗೆದಾರರು ಈಗ ಕಾಂಗ್ರೆಸ್ ಸರ್ಕಾರದ ವಿರುದ್ಧ ಶೇ. 60 ಕಮಿಷನ್ ಆರೋಪ ಮಾಡ್ತಿದ್ದಾರಲ್ಲ. ಇದಕ್ಕೆ ನ್ಯಾ.ನಾಗಮೋಹನ ದಾಸ್ ಏನ್ ಹೇಳ್ತಾರೆ ನೋಡಬೇಕು ಎಂದು ಟಾಂಗ್ ಕೊಟ್ಟರು.

## ಹಣದ ಮೇಲೂ ಹಣ ಮಾಡುವ ಕಾಂಗ್ರೆಸ್: ಅಶೋಕ್



ಕಾಂಗ್ರೆಸ್‌ಗೆ ಮತ ನೀಡಿದ ಜನರು ಪಾಪ ತೊಳೆದುಕೊಳ್ಳುವುದು ಹೇಗೆಂದು ಚಿಂತೆ ಮಾಡುತ್ತಿದ್ದಾರೆ. ಸರ್ಕಾರದ ಬೆಲೆ ಏರಿಕೆಯ ನೀತಿ ವಿರುದ್ಧ ಬಿಜೆಪಿ ಹೋರಾಟ ಮಾಡುತ್ತಿದ್ದು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲಾಗುವುದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಬಿಜೆಪಿ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ತೆರಿಗೆ ಮೂಲಕ ಕಳ್ಳತನ ಮಾಡಿದರೆ, ಡಿಸಿಎಂ ಡಿ.ಕೆ.ಶಿವಕುಮಾರ್ ಕಮಿಶನ್ ಮೂಲಕ ಕಳ್ಳತನ ಮಾಡುತ್ತಿದ್ದಾರೆ. ಸತ್ತಾಗ ಹೆಣದ ಮೇಲೆ ಹಣ ಹಾಕುವ ಪದ್ಧತಿ ಇದೆ. ಕಾಂಗ್ರೆಸ್ ಸರ್ಕಾರ ಮರಣ ಪ್ರಮಾಣ ಪತ್ರಕ್ಕೂ ಶುಲ್ಕ ಏರಿಸಿ ಹಣ ಸಂಗ್ರಹ ಮಾಡುತ್ತಿದೆ. ಮದ್ಯದ ದರವನ್ನೂ ಏರಿಸಿ ಮದ್ಯಪ್ರಿಯರಿಂದ ಹಣ ವಸೂಲಿ ಮಾಡಲಾಗುತ್ತಿದೆ. ಶೌಚಾಲಯ ನಿರ್ವಹಣೆ ಮಾಡಲು ಕೂಡ ಸರ್ಕಾರದ ಬಳಿ ದುಡ್ಡಿಲ್ಲ. ಬೆಂಗಳೂರಿನ ಜನರಿಗೆ ಮುಂದೆ ನೀರಿನ ಶುಲ್ಕ ಏರಿಕೆಯ ಶಾಕ್ ಕೂಡ ಕಾದಿದೆ ಎಂದರು. ಗ್ಯಾರಂಟಿ ಮೂಲಕ ಅಧಿಕಾರಕ್ಕೆ ಬಂದ ಸಿಎಂ ಸಿದ್ದರಾಮಯ್ಯ ಸರ್ಕಾರ, ಪತ್ನಿಗೆ ಸಹಾಯಧನ ನೀಡಿ, ಪತಿಯಿಂದ ಹಣ ವಸೂಲಿ ಮಾಡಲಾಗುತ್ತಿದೆ. ಕಾಂಗ್ರೆಸ್ ಗೆ ಮತ ನೀಡಿದ ಜನರು ಪಾಪ ತೊಳೆದುಕೊಳ್ಳುವುದು ಹೇಗೆಂದು ಚಿಂತೆ ಮಾಡುತ್ತಿದ್ದಾರೆ. ಇದರ ವಿರುದ್ಧ ಬಿಜೆಪಿ ಹೋರಾಟ ಮಾಡುತ್ತಿದ್ದು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲಾಗುವುದು ಎಂದರು.

# ವಕ್ಫ್ ತಿದ್ದುಪಡಿ ಮಸೂದೆಗೆ ದೇವೇಗೌಡ ಬೆಂಬಲ

**ನವದೆಹಲಿ,ಏ.3:** ವಕ್ಫ್ ತಿದ್ದುಪಡಿ ಮಸೂದೆಯು ಮುಸ್ಲಿಮ್ ಸಮುದಾಯದಲ್ಲಿ ಅತ್ಯಂತ ತುಳಿತಕ್ಕೆ ಒಳಗಾಗಿರುವ ಬಡ, ದುರ್ಬಲ ಜನರಿಗೆ ವರದಾನವಾಗಿದೆ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಪ್ರತಿಪಾದಿಸಿದರು.

ರಾಜ್ಯಸಭೆಯಲ್ಲಿ ಇಂದು ಮಸೂದೆಯನ್ನು ಬೆಂಬಲಿಸಿ ಮಾತನಾಡಿದ ಅವರು; ದೇಶದಲ್ಲಿರುವ ವಕ್ಫ್ ಬೋರ್ಡ್‌ಗಳ ಆಸ್ತಿ ಸುಮಾರು 1.2 ಲಕ್ಷ ಕೋಟಿ ಬೆಲೆ ಬಾಳುತ್ತದೆ. ಇಂತಹ ಬೆಲೆ ಬಾಳುವ ಆಸ್ತಿಯನ್ನು ದಾನಿಗಳು ನೀಡಿದ್ದಾರೆ. ಈ ಆಸ್ತಿಯನ್ನು ರಕ್ಷಣೆ ಮಾಡಿ ಬಡ ಮುಸ್ಲಿಮರಿಗೆ ಅನುಕೂಲ ಆಗುವ ಕೆಲಸವನ್ನು ಈ ವಿಧೇಯಕ ಮಾಡುತ್ತಿದೆ ಎಂದರು.

ಈ ಮಸೂದೆಯು ವಕ್ಫ್ ಮಂಡಳಿಗಳ ಅಡಿಯಲ್ಲಿರುವ ಆಸ್ತಿಗಳ ಆಡಳಿತವನ್ನು ನಿಯಂತ್ರಿಸುತ್ತದೆ. ಇದು ಪ್ರಸ್ತುತ ಭಾರತದಾದ್ಯಂತ 9.4 ಲಕ್ಷ ಎಕರೆಗಳಷ್ಟು ಇರುವ ಒಟ್ಟು 8.7 ಲಕ್ಷ ಆಸ್ತಿಗಳನ್ನು ನಿಯಂತ್ರಿಸುತ್ತದೆ ಹಾಗೂ ಅದರ ಮೌಲ್ಯ 1.2 ಲಕ್ಷ ಕೋಟಿ. ಆದರೆ ಕೆಲವರು ತಮ್ಮ ಸ್ವಾರ್ಥಕ್ಕಾಗಿ ಈ ಆಸ್ತಿಗಳನ್ನು ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ಅವರು ಹೇಳಿದರು.

ನಾವು ಜಾತ್ಯತೀತ ಎಂದು ಹೇಳಿಕೊಂಡವರು ಮುಸ್ಲಿಮರಿಗೆ ಕಳೆದ ಎಪ್ಪತ್ತೈದು ವರ್ಷಗಳಿಂದ ಅನ್ಯಾಯ ಮಾಡುತ್ತಲೇ ಇದ್ದಾರೆ ಎಂದು ಕಿಡಿಕಾರಿದ ಅವರು; ವಕ್ಫ್ ಆಸ್ತಿ ದುರ್ಬಳಕೆ



ಆಗದಂತೆ ಪ್ರಧಾನಿ ನರೇಂದ್ರ ಮೋದಿ ಅವರು ದಿಟ್ಟ ಹೆಜ್ಜೆ ಇಟ್ಟಿದ್ದಾರೆ ಎಂದು ದೇವೇಗೌಡರು ಮುಕ್ತಕಂಠದಿಂದ ಶ್ಲಾಘಿಸಿದರು.

ಈ ವಿಧೇಯಕವೂ ಆರ್ಥಿಕ ಮತ್ತು ಸಾಜಿಕವಾಗಿ ದುರ್ಬಲವಾಗಿರುವ ಮುಸ್ಲಿಮರನ್ನು ಮೇಲೆತ್ತುತ್ತದೆ. ಆದರೆ, ಎಲ್ಲಿಯೂ ಅವರ ಧಾರ್ಮಿಕ ನಂಬಿಕೆಗಳಲ್ಲಿ ಮೂಗು ತೂರಿಸುವುದಿಲ್ಲ. ಇದನ್ನು ಈ ವಿಧೇಯಕದ ಟೀಕಾಕಾರರು ಅರ್ಥ ಮಾಡಿಕೊಳ್ಳಬೇಕು. ಈ ಮಸೂದೆ ಕೇವಲಕಂದಾಯ ಮತ್ತು ಆಡಳಿತ ವಿಷಯಗಳಲ್ಲಿ ಕಟ್ಟುನಿಟ್ಟಾಗಿ ವ್ಯವಹರಿಸುತ್ತದೆ ಎಂದು ಅವರು ಸ್ಪಷ್ಟಪಡಿಸಿದರು.

ನಮ್ಮ ದೇಶದಲ್ಲಿನ ನಾಗರಿಕರು ದೇವರನ್ನು ನಾನಾ ಹೆಸರುಗಳಲ್ಲಿ, ಬಗೆಯಲ್ಲಿ ಪೂಜಿಸುತ್ತಾರೆ, ಕರೆಯುತ್ತಾರೆ. ಕೆಲವರು ಅಲ್ಲಾ ಎನ್ನುತ್ತಾರೆ, ನಾನು ರಾಮ ಎಂದು ಕರೆಯುತ್ತೇನೆ. ನಾನು ದೇವರಲ್ಲಿ ನಂಬಿಕೆ ಇಟ್ಟಿದ್ದೇನೆ. ಎಲ್ಲಾ ದೇವರುಗಳ ಬಗ್ಗೆ ಗೌರವ, ನಂಬಿಕೆ ಹೊಂದಿದ್ದೇನೆ. ನಾನು ತಿರುಪತಿ, ಅಮೃತಸರದ ಸ್ವರ್ಣ ಮಂದಿರ, ಅಜ್ಮೀರ್ ದರ್ಗಾಕ್ಕೂ ಹೋಗುತ್ತೇನೆ. ನನ್ನ ನಂಬಿಕೆ ನನ್ನದು. ಇತರರ ನಂಬಿಕೆಯನ್ನು ಗೌರವಿಸುತ್ತೇನೆ. ತುಳಿತಕ್ಕೆ ಒಳಗಾದ ದುರ್ಬಲರ ಪರವಾಗಿ ನಾನು ವಕ್ಫ್ ಮಸೂದೆ ಮತ್ತು ಮೋದಿ ಅವರ ಸರ್ಕಾರವನ್ನು ಬೆಂಬಲಿಸುತ್ತೇನೆ ಎಂದು ಮಾಜಿ ಪ್ರಧಾನಿಗಳು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

ಕರ್ನಾಟಕದಲ್ಲಿ ನಾನು ಮುಖ್ಯಮಂತ್ರಿ ಆಗಿ ಅಲ್ಪಸಂಖ್ಯಾತರ ರಕ್ಷಣೆಗೆ ಸಾಕಷ್ಟು ನಿರ್ಧಾರಗಳನ್ನು ಮಾಡಿದ್ದೇನೆ. ಅವರ ಒಳ್ಳೆಯದಕ್ಕಾಗಿ ಅನೇಕ ಕ್ರಮಗಳನ್ನು ಕೈಗೊಂಡಿದ್ದೇನೆ. ಹಾಗಂತ ನಾನು ಯಾವುದೇ ಸಿದ್ಧಾಂತಕ್ಕೆ ಜೋತು ಬಿದ್ದಿಲ್ಲ. ನಾನೊಬ್ಬ ರೈತ. ರೈತರಿಗೂ ಒಳ್ಳೆಯದು ಮಾಡಿದ್ದೇನೆ. ಅಲ್ಲದೆ,

ನಾನು ಯಾವುದೇ ಸಿದ್ಧಾಂತದವನಲ್ಲ, ನಾನು ರೈತ. ಮುಸ್ಲಿಂ ಮಾತ್ರವಲ್ಲ ಬಹಳಷ್ಟು ಸಮುದಾಯಕ್ಕೆ ಮೀಸಲಾತಿ ನೀಡಿದ್ದೇನೆ. ಸಣ್ಣಪುಟ್ಟ ಸಮುದಾಯಗಳಿಗೆ ಮೀಸಲು ಸೌಲಭ್ಯ ನೀಡಿ ಅವರ ಅಭಿವೃದ್ಧಿಗೆ ಕೆಲಸ ಮಾಡಿದ್ದೇನೆ. ಅನೇಕ ಹೋರಾಟ, ಸಂಘರ್ಷಗಳನ್ನು ಮಾಡಿದ್ದೇನೆ. ಆದರೆ, ಯಾವತ್ತೂ ನಾನು ಸಭಾಧ್ಯಕ್ಷರ ಪೀಠಕ್ಕೆ ಅಪಮಾನ ಮಾಡಿಲ್ಲ. ಮಾಡುವುದೂ ಇಲ್ಲ. ಆದರೆ, ಇಲ್ಲಿ ನಡೆಯುತ್ತಿರುವುದು ನೋಡಿ ಬೇಸರ ಆಗುತ್ತದೆ ಎಂದು ದೇವೇಗೌಡರು ಅತೃಪ್ತಿ ವ್ಯಕ್ತಪಡಿಸಿದರು.



ಬ್ಯಾಂಕಾಕ್‌ನಲ್ಲಿ ಗುರುವಾರ ಭಾರತ ಮತ್ತು ಥೈಲ್ಯಾಂಡ್ ನಡುವಿನ ಒಪ್ಪಂದಗಳ ವಿನಿಮಯವನ್ನು ವೀಕ್ಷಿಸಿದ ಪ್ರಧಾನಿ ನರೇಂದ್ರ ಮೋದಿ ಮತ್ತು ಥೈಲ್ಯಾಂಡ್ ಪ್ರಧಾನಿ ಪೇಟೊಂಗ್‌ಟಾರ್ನ್ ಶಿನವಾತ್ರ.

# ವಕ್ಫ್ ಮಸೂದೆ ಮುಸ್ಲಿಮರನ್ನು 2ನೇ ದರ್ಜೆ ನಾಗರಿಕರಾಗಿಸುವ ಸಂಚು

**ನವದೆಹಲಿ,ಏ.3:** ಕೇಂದ್ರ ಅಲ್ಪ ಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಲೋಕಸಭೆಯಲ್ಲಿ ಅಂಗೀಕಾರಗೊಂಡ ವಕ್ಫ್ ತಿದ್ದುಪಡಿ ಮಸೂದೆಯನ್ನು ಗುರುವಾರ (ಏ.3) ರಾಜ್ಯಸಭೆಯಲ್ಲಿ ಮಂಡಿಸಿದರು. ಮಸೂದೆ ಕುರಿತ ಚರ್ಚೆಯ ವೇಳೆ ಮೊದಲು ಮಾತನಾಡಿದ ಕಾಂಗ್ರೆಸ್ ಸದಸ್ಯ ಸೈಯ್ಯದ್ ನಾಸಿರ್ ಹುಸೇನ್, ಮಸೂದೆಯನ್ನು ಮುಸ್ಲಿಂ ವಿರೋಧಿ ಎಂದು ಕರೆದರು ಮತ್ತು ಬಿಜೆಪಿ ಕೋಮು ಉದ್ವಿಗ್ನತೆಯನ್ನು ಹೆಚ್ಚಿಸಲು ಇದನ್ನು ಬಳಸುತ್ತಿದೆ ಎಂದು ಆರೋಪಿಸಿದರು.

ಸರ್ಕಾರ ದೇಶವನ್ನು ದಾರಿ ತಪ್ಪಿಸುತ್ತಿದೆ. ವಕ್ಫ್ ಮಸೂದೆಗೆ ಸಂಬಂಧಿಸಿದ ಜಂಟಿ ಸಂಸದೀಯ ಸಮಿತಿಯಲ್ಲಿ (ಜೆಪಿಸಿ) ವಿರೋಧ ಪಕ್ಷಗಳ ಸದಸ್ಯರ ಯಾವುದೇ ಶಿಫಾರಸುಗಳನ್ನು ಅಂಗೀಕರಿಸಿಲ್ಲ. ಸಂಸತ್ತಿನ ಮೂಲಕ ಮಸೂದೆ ಒಪ್ಪಿಕೊಳ್ಳುವಂತೆ ಒತ್ತಾಯಿಸಲಾಗುತ್ತಿದೆ ಎಂದರು. ವಕ್ಫ್ ಮಸೂದೆಯ ಮೂಲಕ ಮುಸ್ಲಿಮರನ್ನು ಎರಡನೇ ದರ್ಜೆಯ ನಾಗರಿಕರಂತೆ ಪರಿಗಣಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಆರೋಪಿಸಿದರು. ಸರ್ಕಾರವು ವಕ್ಫ್ ಸಂಸ್ಥೆಗಳ ಮೇಲೆ ಕಣ್ಣಿಡಲು ಅಥವಾ ಅವುಗಳ ಸ್ವಾಯತ್ತತೆಯನ್ನು ದುರ್ಬಲಗೊಳಿಸಲು ಉದ್ದೇಶಿಸಿದೆಯೇ ಎಂದು ಪ್ರಶ್ನಿಸಿದರು.

ವಕ್ಫ್ ಆಸ್ತಿ ಎಂದು ಹೇಳಿಕೊಂಡರೆ ಅದಕ್ಕೆ ದಾಖಲೆ ಒದಗಿಸಬೇಕು ಎಂಬ ಮಸೂದೆಯ ನಿಯಮವನ್ನು ಟೀಕಿಸಿದ ನಾಸಿರ್ ಹುಸೇನ್, ದೇವಾಲಯಗಳು ಮತ್ತು ಗುರುದ್ವಾರಗಳಂತೆ ಮುಸ್ಲಿಮರ ಪ್ರಾಚೀನ ಧಾರ್ಮಿಕ ಸ್ಥಳಗಳು ಬಳಕೆದಾರರಿಂದ ವಕ್ಫ್ ಆಗಿ ಅಸ್ತಿತ್ವದಲ್ಲಿವೆ. ಅಂತಹ ಐತಿಹಾಸಿಕ ಸ್ಥಳಗಳಿಂದ ಸರ್ಕಾರ ದಾಖಲೆ ಭಯಸುತ್ತಿರುವುದು ಏಕೆ ಎಂದು ಕೇಳಿದರು.

ಮಸೂದೆಯನ್ನು ಸಮರ್ಥಿಸಿಕೊಳ್ಳಲು ಬಿಜೆಪಿ ಕಳೆದ ಆರು ತಿಂಗಳಿನಿಂದ ತಪ್ಪು ಮಾಹಿತಿಯ ಅಭಿಯಾನ ನಡೆಸುತ್ತಿದೆ. ಆಡಳಿತ ಪಕ್ಷವು ಮೊದಲು ಕೋಮು ಧ್ರುವೀಕರಣದಲ್ಲಿ ತೊಡಗುತ್ತದೆ, ನಂತರ ವಿರೋಧ ಪಕ್ಷವು ಆ ರೀತಿ ಮಾಡುತ್ತಿದೆ ಎಂದು ಆರೋಪಿಸುತ್ತದೆ ಎಂದು ನಾಸಿರ್ ಹುಸೇನ್ ಹೇಳಿದರು.

ಸರ್ಕಾರ ಚುನಾವಣಾ ಲಾಭಕ್ಕಾಗಿ ವಿವಾದಗಳನ್ನು ಸೃಷ್ಟಿಸಲು ಮತ್ತು ಗಲಭೆಗಳನ್ನು ಪ್ರಚೋದಿಸಲು ನೆಪಗಳನ್ನು ಹುಡುಕುತ್ತಿದೆ. ಮುಸ್ಲಿಂ ಸಮುದಾಯ ತನ್ನದೇ ಸಂಸ್ಥೆಗಳನ್ನು ನಡೆಸುತ್ತಿರುವ ಬಗ್ಗೆ ಸರ್ಕಾರಕ್ಕೆ ನಂಬಿಕೆ ಇಲ್ಲವೇ ವಕ್ಫ್ ತಿದ್ದುಪಡಿ ಮಸೂದೆಯು ಅನ್ಯಾಯದ ಕ್ರಮವಾಗಿದೆ. ಇದು ನಿರ್ದಿಷ್ಟವಾಗಿ ಮುಸ್ಲಿಮರನ್ನು ಗುರಿಯಾಗಿರಿಸಿಕೊಂಡಿದೆ ಎಂದರು.

# ವಕ್ಫ್ ತಿದ್ದುಪಡಿ ಮಸೂದೆ ಸಂವಿಧಾನದ ಮೇಲಿನ ಲಜ್ಜೆಗೆಟ್ಟ ದಾಳಿ: ಸೋನಿಯಾ

**ನವದೆಹಲಿ, ಏ.3:** ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಗುರುವಾರ ವಕ್ಫ್ (ತಿದ್ದುಪಡಿ) ಮಸೂದೆಯನ್ನು ಸಂವಿಧಾನದ ಮೇಲಿನ ಲಜ್ಜೆಗೆಟ್ಟ ದಾಳಿ ಎಂದು ಕರೆದಿದ್ದು, ಈ ಮಸೂದೆ ಸಮಾಜವನ್ನು ಶಾಶ್ವತ ಧ್ರುವೀಕರಣ ಸ್ಥಿತಿಯಲ್ಲಿಡುವ ಬಿಜೆಪಿಯ ಕಾರ್ಯತಂತ್ರದ ಭಾಗವಾಗಿ ಮಾಡಲಾಗಿದೆ ಎಂದು ಹೇಳಿದ್ದಾರೆ. ಲೋಕಸಭೆಯು ವಕ್ಫ್ ತಿದ್ದುಪಡಿ ಮಸೂದೆಯನ್ನು ಅಂಗೀಕರಿಸಿದ ಕೆಲವೇ ಗಂಟೆಗಳಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಮಸೂದೆಯನ್ನು ಬಲವಂತವಾಗಿ ಅಂಗೀಕರಿಸಲಾಗಿದೆ ಎಂದು ಹೇಳಿದ್ದಾರೆ. ವಕ್ಫ್ ತಿದ್ದುಪಡಿ ಮಸೂದೆ

ನವದೆಹಲಿಯ ಸಂವಿಧಾನ್ ಸದನ್‌ದಲ್ಲಿ ನಡೆದ ಕಾಂಗ್ರೆಸ್ ಸಂಸದೀಯ ಪಕ್ಷದ ಸಭೆಯಲ್ಲಿ ಕಾಂಗ್ರೆಸ್ ಸಂಸದರನ್ನು ಉದ್ದೇಶಿಸಿ ಮಾತನಾಡಿದ ಅವರು, ಒಂದು ರಾಷ್ಟ್ರ, ಒಂದು ಚುನಾವಣಾ ಮಸೂದೆಯು ಸಂವಿಧಾನದ ಮತ್ತೊಂದು ಬುಡಮೇಲು ಮಾಡುವ ಮಸೂದೆಯಾಗಿದ್ದು, ಪಕ್ಷವು ಅದನ್ನು ತೀವ್ರವಾಗಿ ವಿರೋಧಿಸುತ್ತದೆ ಎಂದು ಹೇಳಿದ್ದಾರೆ.

ಶಿಕ್ಷಣ, ನಾಗರಿಕ ಹಕ್ಕುಗಳು ಮತ್ತು ಸ್ವಾತಂತ್ರ್ಯಗಳು, ನಮ್ಮ ಒಕ್ಕೂಟ ರಚನೆ ಅಥವಾ ಚುನಾವಣೆಗಳನ್ನು ನಡೆಸುವುದಿರಲಿ, ಮೋದಿ ಸರ್ಕಾರವು ದೇಶವನ್ನು ಪ್ರಪಾತಕ್ಕೆ ತಳ್ಳುತ್ತಿದೆ. ಈ ವೇಳೆ ನಮ್ಮ ಸಂವಿಧಾನ ಕಾಗದದ ಮೇಲಷ್ಟೆ ಉಳಿಯುತ್ತದೆ. ಅದನ್ನು



ಸಹ ಕೆಡವುವುದು ಅವರ ಉದ್ದೇಶ ಎಂದು ನಮಗೆ ತಿಳಿದಿದೆ ಎಂದು ಅವರು ಆರೋಪಿಸಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಎಲ್ಲಾ ಪಕ್ಷದ ಸಂಸದರು ಸಭೆಯಲ್ಲಿ ಹಾಜರಿದ್ದರು.

2004–2014ರ ಅವಧಿಯಲ್ಲಿ ಪ್ರಧಾನಿ ತೆಗೆದುಕೊಂಡ ಹಲವಾರು ಉಪಕ್ರಮಗಳನ್ನು ತಮ್ಮದೇ ಆದ ವೈಯಕ್ತಿಕ ಸಾಧನೆಗಳೆಂದು ಮರುಬ್ರಾಂಡ್ ಮಾಡಿ, ಮರುಪ್ಯಾಕ್ ಮಾಡಿ ಮತ್ತು ಮಾರುಕಟ್ಟೆ ಮಾಡಿದ್ದಾರೆ ಎಂದು ಸೋನಿಯಾ ಗಾಂಧಿ ಆರೋಪಿಸಿದ್ದಾರೆ. ಈ ಎಲ್ಲವನ್ನೂ ನಮ್ಮದೇ ಆದ ಸಾರ್ವಜನಿಕ ಸಂಪರ್ಕ ಚಟುವಟಿಕೆಗಳ ಮೂಲಕ ಬಹಿರಂಗಪಡಿಸಬೇಕಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಸಂಸತ್ತಿನ ಎರಡೂ ಸದನಗಳ ಕಾರ್ಯನಿರ್ವಹಣೆಯ ಕುರಿತು ಮಾತನಾಡಿದ ಅವರು, ವಿರೋಧ ಪಕ್ಷದ ನಾಯಕರಿಗೆ ಮಾತನಾಡಲು ಅವಕಾಶ ನೀಡುತ್ತಿಲ್ಲ. ಕಾಂಗ್ರೆಸ್ ಪಕ್ಷವು ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಲು ಅವಕಾಶ ನೀಡದಂತೆ ಆಡಳಿತರೂಢ ಸಂಸದರು ಆಗಾಗ್ಗೆ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಬಿಜೆಪಿ ಸದಸ್ಯರು ಕಾಂಗ್ರೆಸ್ ಆಡಳಿತದ ರಾಜ್ಯ ಸರ್ಕಾರಗಳನ್ನು ಸಂಪೂರ್ಣ ಸುಳ್ಳುಗಳೊಂದಿಗೆ ಆಕ್ರಮಣಕಾರಿಯಾಗಿ ಗುರಿಯಾಗಿಸಿಕೊಂಡಿದ್ದಾರೆ ಎಂದು ಹೇಳಿದ ಅವರು, ಪಕ್ಷದ ಸಂಸದರು ಕೂಡಾ ಅವರಿಗೆ ಸಮಾನವಾಗಿ ಆಕ್ರಮಣಕಾರಿಯಾಗಿರಲು ಮತ್ತು ಬಿಜೆಪಿ ಆಡಳಿತದ ರಾಜ್ಯಗಳಲ್ಲಿನ ವೈಫಲ್ಯಗಳು ಮತ್ತು ದುರಾಡಳಿತವನ್ನು ಎತ್ತುವಂತೆ ಒತ್ತಾಯಿಸಿದ್ದಾರೆ.

12 ಗಂಟೆಗಳ ಚರ್ಚೆಯ ನಂತರ ಲೋಕಸಭೆಯು ವಕ್ಫ್ (ತಿದ್ದುಪಡಿ) ಮಸೂದೆಯನ್ನು ಮಧ್ಯರಾತ್ರಿಯ ನಂತರ ಅಂಗೀಕರಿಸಿತು. ವಿರೋಧ ಪಕ್ಷದ ಸದಸ್ಯರು ಮಂಡಿಸಿದ ಎಲ್ಲಾ ತಿದ್ದುಪಡಿಗಳನ್ನು ಧ್ವನಿ ಮತಗಳಿಂದ ತಿರಸ್ಕರಿಸಿದ ನಂತರ ಮಸೂದೆಯನ್ನು ಅಂಗೀಕರಿಸಲಾಯಿತು. ಮಸೂದೆ ಪರವಾಗಿ 288 ಮತ್ತು ವಿರುದ್ಧ 232 ಮತಗಳು ಬಿದ್ದ ನಂತರ ಮಸೂದೆಯನ್ನು ಅಂಗೀಕರಿಸಲಾಯಿತು. ಮಸೂದೆಯು ಗುರುವಾರ ರಾಜ್ಯಸಭೆಯಲ್ಲಿ ಮಂಡನೆಯಾಗಲಿದೆ.

# ನೀರು ಪೂರೈಕೆ ದರ ಪ್ರತಿ ಲೀಟರ್‌ಗೆ 1 ರಿಂದ 3 ಪೈಸೆಯಷ್ಟು ಹೆಚ್ಚಳ

**ಬೆಂಗಳೂರು, ಏ,3;** ಮೆಟ್ರೋ, ಬಸ್, ವಿದ್ಯುತ್, ಹಾಲು, ಡೀಸೆಲ್ ದರ ದರ ಹೆಚ್ಚಳದ ನಂತರ ಇದೀಗ ಬೆಂಗಳೂರಿನಲ್ಲಿ ಕಾವೇರಿ ನೀರು ಪೂರೈಕೆ ದರ ಪ್ರತಿ ಲೀಟರ್ ನೀರಿಗೆ 1ರಿಂದ 3 ಪೈಸೆಯಷ್ಟು ಹೆಚ್ಚಳವಾಗಲಿದೆ. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನೀರಿನ ದರವನ್ನು ಹೆಚ್ಚಿಸುವುದು ಅನಿವಾರ್ಯವಾಗಿದೆ. ಈ ನಿಟ್ಟಿನಲ್ಲಿ ಮಂಡಳಿಯ ಅಧಿಕಾರಿಗಳು ಸಿದ್ದತೆಗಳನ್ನು ನಡೆಸುತ್ತಿದ್ದು, ದರ ಹೆಚ್ಚಳ ಶೀಘ್ರದಲ್ಲೇ ಜಾರಿಗೆ ಬರಲಿದೆ ಎಂದು ಡಿಸಿಎಂ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ. ಬೆಂಗಳೂರು ಜಲಮಂಡಳಿ ನೀರಿನ ದರವನ್ನು ಲೀಟರ್‌ಗೆ ಒಂದು ಪೈಸೆ ಹೆಚ್ಚಿಸುವುದು ಅನಿವಾರ್ಯವಾಗಿದ್ದು, ಜನರ ಮೇಲೆ ಹೊರೆಯಾಗದಂತೆ ಬಿಡಬ್ಲ್ಯೂಎಸ್‌ಎಸ್ಬಿ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಬಿಡಬ್ಲ್ಯೂಎಸ್‌ಎಸ್‌ಬಿ ತೀವ್ರ ಒತ್ತಡದಲ್ಲಿದೆ. ಮೂಲಸೌಕರ್ಯ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಈ ಹೆಚ್ಚಳ ಅತ್ಯಗತ್ಯವಾಗಿದೆ. ಜಲಮಂಡಳಿಗೆ ವಾರ್ಷಿಕ 1 ಸಾವಿರ ಕೋಟಿ ರೂ. ನಷ್ಟವುಂಟಾಗುತ್ತಿದೆ.



ಹಾಗೆಯೇ, ಮುಂದಿನ ಹಂತದ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕಾದರೆ ದರ ಏರಿಕೆ ಅನಿವಾರ್ಯವಾಗಿದೆ. ಅಲ್ಲದೆ, ಜನರೂ ನೀರಿನ ಪ್ರಾಮುಖ್ಯತೆ ಅರಿಯಬೇಕು. ಕಳೆದ 13 ವರ್ಷಗಳಲ್ಲಿ ಯಾವುದೇ ಹೆಚ್ಚಳವಾಗದ ಕಾರಣ ಸುಂಕವನ್ನು ಲೀಟರ್ ಗೆ 7 ಪೈಸೆ ಹೆಚ್ಚಿಸಲು ಮಂಡಳಿ ಬಯಸಿತ್ತು. ಆದರೆ, ಕೇವಲ ಒಂದು ಪೈಸೆ ದರ ಹೆಚ್ಚಿಸುವಂತೆ ಅಧಿಕಾರಿಗಳ ಮನವೊಲಿಸಲಾಗಿದೆ ಎಂದರು

# ಶೇ.40ರಷ್ಟು ಕಮಿಷನ್, ಅಂತಿಮ ವರದಿಯಲ್ಲಿ ಹೆಚ್ಚಿನ ಸಾಕ್ಷ್ಯಗಳಿರಬಹುದು: ಪರಮೇಶ್ವರ್

**ಬೆಂಗಳೂರು, ಏ.3:** ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದ್ದ ಎನ್ನಲಾದ ಶೇ.40 ರಷ್ಟು ಕಮಿಷನ್‌ಗೆ ಸಂಬಂಧಿಸಿದಂತೆ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ತನಿಖಾ ಆಯೋಗಕ್ಕೆ ಯಾವುದೇ ಸಾಕ್ಷ್ಯಗಳು ಸಿಕ್ಕಿಲ್ಲ ಎಂಬ ವರದಿಗಳ ನಡುವೆ ಕೇವಲ ಮಧ್ಯಂತರ ವರದಿ ಮಾತ್ರ ಸಲ್ಲಿಸಲಾಗಿದೆ. ಅಂತಿಮ ವರದಿಯಲ್ಲಿ ಹೆಚ್ಚಿನ ಸಾಕ್ಷ್ಯಗಳಿರಬಹುದು ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಗುರುವಾರ ತಿಳಿಸಿದ್ದಾರೆ.



ಈ ಸಂಬಂಧ ರಚಿಸಲಾಗಿದ್ದ ನಿವೃತ್ತ ಹೈಕೋರ್ಟ್ ನ್ಯಾಯಮೂರ್ತಿಗಳ ನೇತೃತ್ವದ ತನಿಖಾ ಆಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ 20,000 ಪುಟಗಳ ವರದಿಯನ್ನು ಸಲ್ಲಿಸಿತ್ತು. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಡಾ. ಜಿ. ಪರಮೇಶ್ವರ್, ಇಲ್ಲಿಯವರೆಗೂ ಅವರು ಸಂಗ್ರಹಿಸಿರುವ ಸಾಕ್ಷ್ಯಾಧಾರ ಆಧಾರದ ಮೇಲೆ ವರದಿ ಸಲ್ಲಿಸಿರಬಹುದು. ಆದರೆ ಇನ್ನೂ ಹೆಚ್ಚಿನ ಸಾಕ್ಷ್ಯಾಧಾರಗಳ ಅಗತ್ಯವಿರಬಹುದು. ಅಂತಿಮ ವರದಿಯಲ್ಲಿ ಹೆಚ್ಚಿನ ಸಾಕ್ಷ್ಯಾಧಾರಗಳನ್ನು ಅವರು ಸಲ್ಲಿಸಬಹುದು. ಇದು ಕೇವಲ ಮಧ್ಯಂತರ ವರದಿಯಾಗಿದೆ ಎಂದು ತಿಳಿಸಿದರು.ಈ ಹಿಂದೆ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಜುಲೈ 26, 2019ರಿಂದ ಮಾರ್ಚ್ 31, 2023 ವರೆಗೆ ನಡೆದಿದ್ದ ಕಾಮಗಾರಿಗಳಲ್ಲಿ ಶೇ. 40 ರಷ್ಟು ಕಮಿಷನ್ ಆರೋಪ ಕೇಳಿಬಂದಿತ್ತು.ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಪಾರ್ವತಿ ವಿರುದ್ಧದ ಮುಡಾ ನಿವೇಶನ ಹಂಚಿಕೆ ಪ್ರಕರಣದ ತನಿಖೆಯನ್ನು ಮುಂದುವರಿಸಲು ಜಾರಿ ನಿರ್ದೇಶನಾಲಯಕ್ಕೆ (ಇಡಿ) ಕರ್ನಾಟಕ ಹೈಕೋರ್ಟ್ ಬುಧವಾರ ಅನುಮತಿ ಕುರಿತು ಪ್ರತಿಕ್ರಿಯಿಸಿದ ಪರಮೇಶ್ವರ್, 'ಅಂತಿಮವಾಗಿ, ಹೈಕೋರ್ಟ್ ಇಡಿಗೆ ಅನುಮತಿ ನೀಡಿದರೆ, ಅವರೇ ತನಿಖೆ ನಡೆಸಲಿ ಎಂದರು.

# ಪ್ರಜ್ವಲ್ ರೇವಣ್ಣ ವಿರುದ್ಧದ ಅತ್ಯಾಚಾರ ಪ್ರಕರಣ ಜನಪ್ರತಿನಿಧಿಗಳ ಕೋರ್ಟ್‌ನಲ್ಲಿ ಅರ್ಜಿ ತಿರಸ್ಕೃತ

**ಬೆಂಗಳೂರು, ಏ, 3;** ಅತ್ಯಾಚಾರ ಪ್ರಕರಣದಲ್ಲಿ ಜೈಲು ಪಾಲಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜನಪ್ರತಿನಿಧಿಗಳ ನ್ಯಾಯಾಲಯ ಬಹುದೊಡ್ಡ ಆಘಾತ ನೀಡಿದೆ.

ಅತ್ಯಾಚಾರ ಪ್ರಕರಣದಿಂದ ಕೈಬಿಡುವಂತೆ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿ ವಜಾಗೊಂಡಿದೆ. ಪ್ರಕರಣದಿಂದ ತಮ್ಮನ್ನು ಕೈಬಿಡಲು ಪ್ರಜ್ವಲ್ ರೇವಣ್ಣ ಕೋರಿದ್ದ ಅರ್ಜಿ ಅರ್ಜಿಯನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ವಜಾಗೊಳಿಸಿ ಆದೇಶ ಹೊರಡಿಸಿದೆ. ಇನ್ನು ಅತ್ಯಾಚಾರ ಪ್ರಕರಣದ ವಿಚಾರಣೆಯನ್ನು ಏಪ್ರಿಲ್ 9ಕ್ಕೆ ಮುಂದೂಡಿದೆ.



ವಿದ್ಯುನ್ಮಾನ ಪುರಾವೆಗಳು ಅಥವಾ ಮೊಬೈಲ್ ಫೋನ್‌ನಿಂದ ವಶಪಡಿಸಿಕೊಂಡಿರುವ ಫೋಟೋ, ವಿಡಿಯೋಗಳು ಒದಗಿಸುವಂತೆ ಕೋರಿ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ತಿರಸ್ಕರಿಸಿತ್ತು. ಅಲ್ಲದೇ ಪ್ರಜ್ವಲ್ ರೇವಣ್ಣ ಎಂದ ಮಾತ್ರಕ್ಕೆ ಕಾನೂನು ಬದಲಿಸಲಾಗದು ಎಂದು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ಹೇಳಿತ್ತು.

ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ನಾಲ್ಕು ಪ್ರಕರಣಗಳು ದಾಖಲಾಗಿದ್ದು, ಈ ನಾಲ್ಕು ಪ್ರಕರಣದ ಜಾಮೀನು ಅರ್ಜಿಗಳು ಸಹ ವಜಾಗೊಂಡಿವೆ. ಅಶ್ಲೀಲ ದೃಶ್ಯ ಪ್ರಕರಣ ಸೇರಿದಂತೆ ಇತರೆ ಒಟ್ಟು ನಾಲ್ಕು ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಆಗಸ್ಟ್‌ನಲ್ಲಿ 2,144 ಪುಟಗಳ ಆರೋಪಪಟ್ಟಿ ಸಲ್ಲಿಸಿತ್ತು. ಇದರ ಬೆನ್ನಲ್ಲೇ ಪ್ರಜ್ವಲ್ ರೇವಣ್ಣ ಸಹ ಜಾಮೀನಿಗಾಗಿ ಕೆಳಗಿನ ಕೋರ್ಟ್‌ನಲ್ಲಿ ಕಸರತ್ತು ನಡೆಸಿದ್ದರು.

# ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ: ಮುಂಜಾನೆ 3 ಗಂಟೆಗೆ ನಿರ್ಧಾರ

**ನವದೆಹಲಿ,ಏ.3:** ಬುಧವಾರ (ಏ.2) ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆಯ ಮೇಲಿನ ಸುದೀರ್ಘ 12 ಗಂಟೆಗೂ ಹೆಚ್ಚು ಸಮಯದ ಚರ್ಚೆಯ ಬಳಿಕ, ತಡರಾತ್ರಿ 2 ಗಂಟೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಘೋಷಣೆಯ ಕುರಿತ ಶಾಸನಬದ್ಧ ನಿರ್ಣಯವನ್ನು ಮಂಡಿಸಿದರು.

ಬಳಿಕ ನಿರ್ಣಯದ ಮೇಲೆ ಸುಮಾರು 40 ನಿಮಿಷಗಳ ಚರ್ಚೆ ನಡೆಯಿತು. ಎಂಟು ಪ್ರತಿಪಕ್ಷ ಸದಸ್ಯರು ನಿರ್ಣಯದ ಕುರಿತು ಮಾತನಾಡಿದರು. ಅಮಿತ್ ಶಾ ಅದಕ್ಕೆ ಪ್ರತಿಕ್ರಿಯಿಸಿದರು. ನಂತರ, ಮುಂಜಾನೆ 3 ಗಂಟೆ (2.45 AM) ಧ್ವನಿ ಮತದ ಮೂಲಕ ಸದನವು ನಿರ್ಣಯವನ್ನು ಅಂಗೀಕರಿಸಿತು. ನಿರ್ಣಯದ ಮೇಲೆ ಚರ್ಚೆ ಆರಂಭಿಸಿದ ಕಾಂಗ್ರೆಸ್ ಸಂಸದ ಶಶಿ ತರೂರ್, ನಮ್ಮ ಪಕ್ಷ (ಕಾಂಗ್ರೆಸ್) ಹಿಂಸಾಚಾರ ಪೀಡಿತ ಈಶಾನ್ಯ ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆ ಜಾರಿಗೊಳಿಸಿರುವುದನ್ನು ಬೆಂಬಲಿಸುತ್ತದೆ. ಆದರೆ, ಅದನ್ನು ಮಣಿಪುರದಲ್ಲಿ ?ಶಾಂತಿ ಮತ್ತು ಸುವ್ಯವಸ್ಥೆಯನ್ನು ಪುನಃಸ್ಥಾಪಿಸಲು ಬಳಸಬೇಕು ಎಂದು ಹೇಳಿದರು.

ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಜವಾಬ್ದಾರಿಯುತರು ತಮ್ಮ ಕರ್ತವ್ಯವನ್ನು ನಿರ್ವಹಿಸಿಲ್ಲ. ಸುಮಾರು ಎರಡು ವರ್ಷಗಳ ಕಾಲ ಯಾವುದೇ ನಿರ್ಣಾಯಕ ಕ್ರಮ ಕೈಗೊಂಡಿಲ್ಲ. ವಿಧಾನಸಭೆ ಅಧಿವೇಶನಕ್ಕೂ ಮುನ್ನ ಮುಖ್ಯಮಂತ್ರಿಯಿಂದ ರಾಜೀನಾಮೆ ಪಡೆದು ರಾಷ್ಟ್ರಪತಿ ಆಳ್ವಿಕೆ ಹೇರಲಾಯಿತು. ಕಾಂಗ್ರೆಸ್ ಪಕ್ಷ ಸರ್ಕಾರದ ವಿರುದ್ಧ ಆಗಲೇ ಅವಿಶ್ವಾಸ ನಿರ್ಣಯವನ್ನು ಸಿದ್ಧಪಡಿಸಿತ್ತು. ಆದರೆ, ಸರ್ಕಾರವೇ ಉಳಿಯಲಿಲ್ಲ. ರಾಷ್ಟ್ರಪತಿ ಆಳ್ವಿಕೆ ಹೇರಲಾಯಿತು. ಸುಪ್ರೀಂ ಕೋರ್ಟ್ ನ್ಯಾಯಾಧೀಶರು ಮಣಿಪುರಕ್ಕೆ ಹೋಗಿದ್ದಾರೆ. ಹಾಗಾಗಿ, ಪ್ರಧಾನಿ ಕೂಡ ಭೇಟಿ ನೀಡಬೇಕು? ಎಂದು ಆಗ್ರಹಿಸಿದರು.

ರಾಜ್ಯದ ಶಸ್ತ್ರಾಗಾರಗಳಿಂದ ಸುಮಾರು 60,000 ಶಸ್ತ್ರಾಸ್ತ್ರಗಳು ಮತ್ತು 6,00,000ಕ್ಕೂ ಹೆಚ್ಚು ಮದ್ದುಗುಂಡುಗಳನ್ನು ಲೂಟಿ ಮಾಡಲಾಗಿದೆ. ಹಿಂಸಾಚಾರದಿಂದ ರಾಜ್ಯದ ಆರ್ಥಿಕ ಬೆಳವಣಿಗೆಗೆ ಧಕ್ಕೆಯಾಗಿದೆ. ಸಶಸ್ತ್ರ ಗುಂಪುಗಳು ಹುಚ್ಚುಚ್ಚಾಗಿ ಓಡಾಡುತ್ತಿವೆ, ರಾಜ್ಯದಲ್ಲಿ ಕಾನೂನಿನ ಆಡಳಿತ ಇದ್ದಂತೆ ತೋರುತ್ತಿಲ್ಲ. ರಾಜ್ಯದಲ್ಲಿ ಪರಿಸ್ಥಿತಿ ಹತೋಟಿಗೆ ತರಲು ರಾಷ್ಟ್ರಪತಿ ಆಳ್ವಿಕೆ ಒಂದು ಅವಕಾಶವಾಗಿ ನಾವು ನೋಡಲು ಬಯಸುತ್ತೇವೆ. ರಾಷ್ಟ್ರಪತಿ ಆಳ್ವಿಕೆ ಅಗತ್ಯ, ಆದರೆ ಅದು ಸಾಕಾಗುವುದಿಲ್ಲ. ಮಣಿಪುರದ ಜನರು ಅನುಭವಿಸಿದ್ದು ಬೇರೆಯವರು ಅನುಭವಿಸಬಾರದು ಎಂದು ತರೂರ್ ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಅಮಿತ್ ಶಾ, ಕಳೆದ ನಾಲ್ಕು ತಿಂಗಳಲ್ಲಿ ರಾಜ್ಯದಲ್ಲಿ ಯಾವುದೇ ಪ್ರಮುಖ ಹಿಂಸಾಚಾರ ಘಟನೆಗಳು ನಡೆದಿಲ್ಲ. ದಯವಿಟ್ಟು ಒಂದಾಗಿ, ಆಡಳಿತವನ್ನು ಬೆಂಬಲಿಸಿ, ಮಣಿಪುರದಲ್ಲಿ ಶಾಂತಿ ಸ್ಥಾಪಿಸಲು ಸಹಕರಿಸಿ ಎಂಬ ಘೋಷಣೆಯನ್ನು ರಾಷ್ಟ್ರಪತಿ ಆಳ್ವಿಕೆ ಜಾರಿಗೊಳಿಸಿದ ಎರಡು ತಿಂಗಳೊಳಗೆ ಸಾಕಾರಾಗೊಳಿಸುವಲ್ಲಿ ನಾವು ಯಶಸ್ವಿಯಾಗಿದ್ದೇವೆ. ನಮ್ಮ ಸರ್ಕಾರ ಮಣಿಪುರದಲ್ಲಿ



ಶಾಂತಿ ಸ್ಥಾಪಿಸಲು ಮತ್ತು ಈಗ ಆಗಿರುವ ಗಾಯಗಳನ್ನು ಗುಣಪಡಿಸಲು ಬದ್ಧವಾಗಿದೆ? ಎಂದು ತಿಳಿಸಿದರು.

ಸರ್ಕಾರ ಜನಾಂಗೀಯ ಹಿಂಸಾಚಾರವನ್ನು ಸರಿಯಾಗಿ ನಿಭಾಯಿಸಿಲ್ಲ ಎಂಬ ಆರೋಪವನ್ನು ಅಮಿತ್ ಶಾ ನಿರಾಕರಿಸಿದರು. ನಾವು ತಕ್ಷಣ ಬೇಕಾದ ಕ್ರಮಗಳನ್ನು ಕೈಗೊಂಡಿದ್ದೇವೆ. ಹೈಕೋರ್ಟ್ ಆದೇಶ ಹೊರಡಿಸಿದ ದಿನದಂದು ಕೇಂದ್ರ ಸರ್ಕಾರ ಭದ್ರತಾ ಪಡೆಗಳನ್ನು ವಿಮಾನದ ಮೂಲಕ ಕಳುಹಿಸಿದೆ. ಹೈಕೋರ್ಟ್ ಆದೇಶದ ನಂತರ ಹಿಂಸಾಚಾರ ಪ್ರಾರಂಭವಾಯಿತು. ಇದನ್ನು ಎರಡೂ ಗುಂಪುಗಳು ವಿಭಿನ್ನವಾಗಿ ವ್ಯಾಖ್ಯಾನಿಸಿದವು. ನಮ್ಮ ಪ್ರತಿಕ್ರಿಯೆಯಲ್ಲಿ ಯಾವುದೇ ವಿಳಂಬವಾಗಿಲ್ಲ ಎಂದರು.

ಮಣಿಪುರದಲ್ಲಿ ಈ ಹಿಂದೆ ನಡೆದ ವಿವಿಧ ಸಮುದಾಯಗಳ ನಡುವಿನ ಜನಾಂಗೀಯ ಘರ್ಷಣೆಗಳ ಬಗ್ಗೆಯೂ ಮಾತನಾಡಿದ ಶಾ, ನಿಮ್ಮ ಅವಧಿಯಲ್ಲಿನ ಹಿಂಸಾಚಾರ ಅಥವಾ ನಮ್ಮ ಅವಧಿಯಲ್ಲಿನ ಹಿಂಸಾಚಾರವನ್ನು ನಾನು ಹೋಲಿಕೆ ಮಾಡಲು ಬಯಸುವುದಿಲ್ಲ. ನನ್ನ ಅಭಿಪ್ರಾಯದಲ್ಲಿ, ಒಂದೇ ಒಂದು ಘಟನೆಯೂ ಸಂಭವಿಸಬಾರದು. ಹಿಂಸಾಚಾರವನ್ನು ನಿಯಂತ್ರಿಸುವಲ್ಲಿ ಕೇಂದ್ರವು ವಿಫಲವಾಗಿದೆ ಎಂಬ ಆರೋಪ ತಪ್ಪು. ಇದಕ್ಕೂ ಮೊದಲು ಘರ್ಷಣೆಗಳು ನಡೆದಿವೆ. ಹಾಗಾಗಿ, ಹಿಂಸಾಚಾರವನ್ನು ರಾಜಕೀಯಗೊಳಿಸಬೇಡಿ ಎಂದು ನಾನು ವಿರೋಧ ಪಕ್ಷಗಳನ್ನು ಒತ್ತಾಯಿಸುತ್ತೇನೆ. ಇದು ಭಯೋತ್ಪಾದನೆ ಅಥವಾ ಗಲಭೆಗಳಲ್ಲ, ಜನಾಂಗೀಯ ಘರ್ಷಣೆ ಎಂದು ಹೇಳಿದರು.

ರಾಷ್ಟ್ರಪತಿ ಆಳ್ವಿಕೆಯ ಅಡಿಯಲ್ಲಿ ಕೇಂದ್ರ ಸರ್ಕಾರ ತೆಗೆದುಕೊಂಡ ಕ್ರಮಗಳನ್ನು ಪಟ್ಟಿ ಮಾಡಿದ ಅಮಿತ್ ಶಾ, ಗೃಹ ಸಚಿವಾಲಯದ (ಎಂಹೆಚ್‌ಎ) ಪ್ರತಿನಿಧಿಗಳು ಎರಡೂ ಗುಂಪುಗಳೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸುತ್ತಿದ್ದಾರೆ ಮತ್ತು ನಾಗರಿಕ ಸಮಾಜದ ಸಭೆಯನ್ನು ನಡೆಸಲಾಗುತ್ತಿದೆ. ಶೀಘ್ರದಲ್ಲೇ, ಜಂಟಿ ಸಭೆ ನಡೆಯಲಿದೆ. ಈ ನಿಟ್ಟಿನಲ್ಲಿ ನಾವು ಕೆಲಸ ಮಾಡುತ್ತಿದ್ದೇವೆ. ಮೊದಲ ಹೆಜ್ಜೆ ಶಾಂತಿಯನ್ನು ಪುನಃಸ್ಥಾಪಿಸುವುದು. ಒಟ್ಟಾರೆಯಾಗಿ ಪರಿಸ್ಥಿತಿ ನಿಯಂತ್ರಣದಲ್ಲಿದೆ. ಕಳೆದ ನಾಲ್ಕು ತಿಂಗಳಲ್ಲಿ, ಇಬ್ಬರು ಗಾಯಗೊಂಡಿದ್ದಾರೆ. ಅದು ಬಿಟ್ಟರೆ ಯಾವುದೇ ಹಿಂಸಾಚಾರ ನಡೆದಿಲ್ಲ. ಇದು ತೃಪ್ತಿಕರವಾಗಿದೆ ಎಂದು ನಾನು ಹೇಳುವುದಿಲ್ಲ. ಆದರೆ, ಪರಿಸ್ಥಿತಿ ನಿಯಂತ್ರಣದಲ್ಲಿದೆ. ಆಂತರಿಕವಾಗಿ ಸ್ಥಳಾಂತರಗೊಂಡ ಜನರು ಶಿಬಿರಗಳಲ್ಲಿ ಇರುವ ದಿನದವರೆಗೆ ತೃಪ್ತರಾಗಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಚರ್ಚೆಯ ಸಮಯದಲ್ಲಿ, ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಸಂಸದೆ ಕನಿಮೋಳಿ ಅವರು ಬೆಳಗಿನ ಜಾವ 2 ಗಂಟೆಗೆ ಚರ್ಚೆ ನಡೆಸುತ್ತಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದರು. ಮಣಿಪುರದ ಬಗ್ಗೆ ಚರ್ಚೆ ನಡೆಸಬೇಕೆಂಬುವುದು ಪ್ರತಿಪಕ್ಷಗಳು ಬೇಡಿಕೆಯಾಗಿದೆ. ಆದರೆ, ಅದು ಮಧ್ಯರಾತ್ರಿ 2 ಗಂಟೆಗೆ ನಡೆಯಬೇಕಾದ ಚರ್ಚೆಯಲ್ಲ. ಮಣಿಪುರದಲ್ಲಿ ನೋವು ಅನುಭವಿಸುತ್ತಿರುವ ಜನರ ಬಗ್ಗೆ ನಿಮಗೆ ಎಷ್ಟು ಗೌರವವಿದೆ ಎಂದು ಪ್ರಶ್ನಿಸಿದರು.

ಬಂಡುಕೋರರು ಮತ್ತು ಪ್ರತಿಭಟನಾಕಾರರ ಕೈಗಳಿಗೆ ಶಸ್ತ್ರಾಸ್ತ್ರಗಳು ಹೇಗೆ ಸಿಕ್ಕಿತು ಗೃಹ ಸಚಿವರು ಮುಕ್ತ ಸಂಚಾರದ ಭರವಸೆ ನೀಡಿದ ನಂತರವೂ ರಕ್ತಪಾತ ಏಕೆ ಆಯಿತು 16 ಜನರು ಗಂಭೀರವಾಗಿ ಮತ್ತು 103 ಜನರು ಸಾಮಾನ್ಯವಾಗಿ ಏಕೆ ಗಾಯಗೊಂಡರು. ರಾಷ್ಟ್ರಪತಿ ಆಳ್ವಿಕೆ ಮಾಡಿದ್ದೇನು ಎಂದು ಕನಿಮೋಳಿ ಕೇಳಿದರು. ಕಾಶ್ಮೀರದಲ್ಲಿ ಶಾಂತಿ ಸ್ಥಾಪನೆ ಮಾಡಿದ್ದೇವೆ ಎನ್ನುವ ಧೈರ್ಯಶಾಲಿ ಮಂತ್ರಿ ಏನಾದರು ಮಣಿಪುರದಲ್ಲಿ ನಡೆಯುತ್ತಿರುವ ಘಟನೆಗಳು ತೃಪ್ತಿಕರವಾಗಿಲ್ಲ. ಮಣಿಪುರದಲ್ಲಿ ನೀವು ನ್ಯಾಯಯುತ ಚುನಾವಣೆ ನಡೆಸಿ, ಸುಭದ್ರ ಸರ್ಕಾರ ರಚಿಸುತ್ತೀರಿ ಎಂದು ನಾನು ಭಾವಿಸುತ್ತೇನೆ ಎಂದು ಎನ್ಸಿಪಿ ಎಸ್ಪಿಯ ಸಂಸದೆ ಸುಪ್ರಿಯಾ ಸುಳೆ ಹೇಳಿದರು.

## ಪ್ರಧಾನಿ ಮೋದಿ ಅವರನ್ನು ಭೇಟಿಯಾದ ಸಂಸದ ಕ್ಯಾ.ಬ್ರಿಜೇಶ್ ಚೌಟ

**ಮುಂಬಯಿ, ಏ.3:** ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ತಮ್ಮ ತಂದೆ–ತಾಯಿ ಜತೆಗೆ ಇಂದು ನವದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಸೌಜನ್ಯದ ಭೇಟಿ ಮಾಡಿದ್ದಾರೆ.

ಕ್ಯಾ.ಚೌಟ ಅವರು ತಮ್ಮ ತಂದೆ ಸೇಸಣ್ಣ ಚೌಟ ಹಾಗೂ ತಾಯಿ ಶ್ರೀಮತಿ ಪುಷ್ಪಾ ಚೌಟ ಅವರೊಂದಿಗೆ ನರೇಂದ್ರ ಮೋದಿ ಅವರನ್ನು ಪ್ರಧಾನಮಂತ್ರಿಗಳ ಕಚೇರಿಯಲ್ಲಿ ಭೇಟಿ ಮಾಡಿ ಅವರ ಆಶೀರ್ವಾದ ಹಾಗೂ ಮಾರ್ಗದರ್ಶನವನ್ನು ಪಡೆದುಕೊಂಡಿದ್ದಾರೆ. ಈ ಸಂದರ್ಭದಲ್ಲಿ ಕ್ಯಾ. ಚೌಟ ಅವರು ತುಳುನಾಡಿನ ಸಂಸ್ಕೃತಿಯ ಸಂಕೇತವಾಗಿರುವ ಪಿಲಿ ನಲಿಕೆಯಲ್ಲಿ ಪ್ರಧಾನವಾಗಿರುವ 'ಪಿಲಿ ಮಂಡೆ' ( ಹುಲಿ ವೇಷದ ಮುಖವಾಡ)ಯನ್ನು ಸ್ಮರಣಿಕೆ ರೂಪದಲ್ಲಿ ಪ್ರಧಾನಿಯವರಿಗೆ ನೀಡಿದರು. ಜತೆಗೆ, ಮಂಗಳೂರು ಕಂಬಳದ ಫೋಟೋ ಫ್ರೇಮ್ ಮತ್ತು ಕೊಲ್ಲೂರು ಶ್ರೀ ಮೂಕಾಂಬಿಕೆ ದೇವಸ್ಥಾನದ ಪ್ರಸಾದವನ್ನು ಕೂಡ ನೀಡುವ ಮೂಲಕ ಈ ಅಪೂರ್ವ ಅವಕಾಶ ಹಾಗೂ ಅತ್ಯಂತ ಗೌರವದ ಈ ಭೇಟಿಯನ್ನು ಸ್ಮರಣೀಯವಾಗಿಸಿಕೊಂಡರು.



ಭೇಟಿ ಬಳಿಕ ಪ್ರತಿಕ್ರಿಯಿಸಿರುವ ಸಂಸದ ಕ್ಯಾ ಚೌಟ, " ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ನನ್ನ ಹೆತ್ತವರ ಜತೆಗೆ ಭೇಟಿ ಮಾಡುವ ಅವಕಾಶ ಲಭಿಸಿರುವುದು ಬದುಕಿನಲ್ಲಿನ ಬಹಳ ಖುಷಿಯ ಹಾಗೂ ಸಂತೃಪ್ತಿಯ ಭಾವವನ್ನು ಮೂಡಿಸಿದೆ. ಅವರೊಂದಿಗಿನ ಈ ಭೇಟಿ ವೇಳೆ ಹಲವು ವಿಚಾರಗಳ ಕುರಿತು ಮಾಹಿತಿ ಹಂಚಿಕೊಂಡಿದ್ದಾರೆ. ಅದರಲ್ಲಿಯೂ ನಮ್ಮ ಕರಾವಳಿ ಬಗೆಗಿನ ಕಲೆ–ಸಂಸ್ಕೃತಿ, ಪರಂಪರೆ ಬಗ್ಗೆ ಅವರಿಗಿರುವ ಅಗಾಧ ಜ್ಞಾನವು ನನಗೆ ಬಹಳ ಸ್ಫೂರ್ತಿ ಹಾಗೂ ಹೆಮ್ಮೆಯ ಕ್ಷಣವಾಗಿ ಬಹಳ ಕಾಲ ನೆನೆಪಿನಲ್ಲಿ ಉಳಿಯುವಂತೆ ಮಾಡಿದೆ. ವಿಶ್ವದ ಮಹಾನ್ ನಾಯಕರಾಗಿರುವ ಮೋದಿ ಅವರು ನನ್ನ ಬೆನ್ನುತಟ್ಟಿ ನೀಡಿದ ಪ್ರೋತ್ಸಾಹದಾಯಕ ಮಾತುಗಳನ್ನು ನನಗೆ ಜನಸೇವೆಗೆ ಮತ್ತಷ್ಟು ಸ್ಫೂರ್ತಿಯನ್ನು ನೀಡಿದೆ ಎಂದಿದ್ದಾರೆ. ಈ ಭೇಟಿ ವೇಳೆ ಪ್ರಧಾನಮಂತ್ರಿ ಮೋದಿ ಅವರು ವಿಕಸಿತ ಮಂಗಳೂರು ನಿರ್ಮಾಣಕ್ಕೆ ಗುಜರಾತ್ ಅಭಿವೃದ್ಧಿ ಮಾದರಿಯನ್ನು ಅನುಕರಿಸುವ ಬಗ್ಗೆಯೂ ವಿಚಾರ–ವಿನಿಮಯ ಮಾಡಿದ್ದಾರೆ. ಗುಜರಾತ್ ಗೆ ಹೋಲಿಸಿದರೆ ಮಂಗಳೂರು ಕೂಡ ಐತಿಹಾಸಿಕ ವ್ಯಾಪಾರ–ವಹಿವಾಟು, ಬಂದರು ನಗರಿ, ಉದ್ಯಮಶೀಲತೆ ಅಭಿವೃದ್ಧಿ, ಶಿಪ್ಪಿಂಗ್ ಬಿಲ್ಡಿಂಗ್, ಮೀನುಗಾರಿಕೆ, ಆಹಾರ ಸಂಸ್ಕರಣೆ, ಸಾಂಸ್ಕೃತಿ ಸಿರಿವಂತಿಕೆ ಹೀಗೆ ಹಲವಾರು ವಿಚಾರಗಳಲ್ಲಿ ಮಂಗಳೂರು ಮಿನಿ ಗುಜರಾತ್ ಆಗಿ ಬಹಳ ಹತ್ತಿರದ ಸಾಮ್ಯತೆ ಹೊಂದಿರುವ ಬಗ್ಗೆ ಅಭಿಪ್ರಾಯ ಹಂಚಿಕೊಂಡಿದ್ದೇನೆ. ಆ ಮೂಲಕ, ಮಂಗಳೂರನ್ನು ಗುಜರಾತ್ ಮಾದರಿ ಅಭಿವೃದ್ಧಿಪಡಿಸುವುದಕ್ಕೆ ಮೋದಿ ಅವರ ಮಾರ್ಗದರ್ಶನವನ್ನು ಕೋರಿರುವುದಾಗಿ ತಿಳಿಸಿದರು.

ವಿಕಸಿತ ಭಾರತ ನಿರ್ಮಾಣದ ಈ ಅಭಿವೃದ್ಧಿ ಯಾತ್ರೆಯಲ್ಲಿ ಸಂಪೂರ್ಣ ಭಾಗಿಯಾಗುವಲ್ಲಿ ಮಂಗಳೂರು ನಗರವು ಅದಕ್ಕೆ ಪೂರಕವಾಗಿರುವ ಎಲ್ಲ ರೀತಿಯ ವಿಪುಲ ಅವಕಾಶ, ಸಂಪನ್ಮೂಲತೆಯನ್ನು ಹೊಂದಿದೆ. ಆ ಮೂಲಕ ಪ್ರತಿಯೊಂದು ವಲಯದಲ್ಲಿಯೂ ಆತ್ಮನಿರ್ಭರತೆಯನ್ನು ಸಾಧಿಸುವುದಕ್ಕೆ ಬಯಸುವುದಾಗಿ ಹೇಳಿದರು.

ನಮ್ಮ ಹೆಮ್ಮೆಯ ಪ್ರಧಾನಿಮಂತ್ರಿ ಮೋದಿ ಅವರನ್ನು ನನ್ನ ಹೆತ್ತವರೊಂದಿಗೆ ಭೇಟಿಯಾದ ಸಂದರ್ಭ ಅವಿಸ್ಮರಣೀಯವಾಗಿದ್ದು, ಒಬ್ಬ ಸಾಮಾನ್ಯ ಮಧ್ಯಮ ವರ್ಗದ ಕುಟುಂಬದಲ್ಲಿ ಹುಟ್ಟಿ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ಮತ್ತು ಪಾರ್ಟಿಯ ಸಾಮಾನ್ಯ ಕಾರ್ಯಕರ್ತನಾಗಿ ಸೇವೆ ಸಲ್ಲಿಸಿ ಇಂದು ವಿಶ್ವ ನಾಯಕನ ಜೊತೆ ನಿಲ್ಲುವ ಅವಕಾಶ ಸಿಕ್ಕಿದ್ದು ನನ್ನ ಪಾಲಿಗೆ ಅಮೂಲ್ಯವಾದದ್ದು. ರಾಜಕೀಯದಲ್ಲಿ ತೊಡಗಿಸುವ ಕನಸನ್ನು ನೆಟ್ಟು ಅದನ್ನು ನನಸಾಗಿಸುವ ಭರವಸೆ ನೀಡಿದ ಮಹಾನ್ ನಾಯಕ ಭೇಟಿಯಾದ ಈ ಕ್ಷಣವೂ ಅಪೂರ್ವವಾಗಿತ್ತು ಎಂದು ಕ್ಯಾ. ಚೌಟ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ.



ಮ್ಯಾನ್ಮಾರ್‌ನ ಮಂಡಾಲೆಯಲ್ಲಿ ಗುರುವಾರ ಭೂಕಂಪ ಸಂಭವಿಸಿದ್ದು, ಭಾರತದ ಎನ್‌ಡಿಆರ್‌ಎಫ್ ತಂಡದ ಸದಸ್ಯರು ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರಿಸಿದ್ದಾರೆ.

## ರೈಲ್ವೆಯಲ್ಲಿ 209 ಮೆಗಾವ್ಯಾಟ್ ಸೌರ ಸ್ಥಾವರ ಸ್ಥಾಪನೆ

**ನವದೆಹಲಿ,ಏ.3:** ಭಾರತೀಯ ರೈಲ್ವೆ ಕಳೆದೊಂದು ದಶಕದಿಂದ ಸೌರಶಕ್ತಿ ಉತ್ಪಾದನೆ ಮತ್ತು ಬಳಕೆಗೆ ಪ್ರಾಧಾನ್ಯತೆ ನೀಡುತ್ತಿದ್ದು, ದೇಶಾದ್ಯಂತ ಈವರೆಗೆ 2,249 ರೈಲು ನಿಲ್ದಾಣಗಳು ಮತ್ತು ಸೇವಾ ಕಟ್ಟಡಗಳಲ್ಲಿ 209 ಮೆಗಾವ್ಯಾಟ್ ಸೌರ ಸ್ಥಾವರಗಳನ್ನು ಸ್ಥಾಪಿಸಿದೆ.

ಕಳೆದ ಹತ್ತು ವರ್ಷಗಳ ಹಿಂದೆ ಕೇವಲ 628 ಸೌರ ಘಟಕಗಳನ್ನು ಹೊಂದಿದ್ದ ಭಾರತೀಯ ರೈಲ್ವೆ ಇತ್ತೀಚಿನ ಐದು ವರ್ಷಗಳಲ್ಲಿ ಅದರ ಮೂರುಪಟ್ಟು ಸೌರ ಘಟಕಗಳನ್ನು ಸ್ಥಾಪಿಸಿ ಸವರ ಸಕ್ತಿ ಬಳಕೆಯಲ್ಲಿ ಮುನ್ನಡೆಯಲ್ಲಿದೆ. ಕರ್ನಾಟಕ ಸೇರಿದಂತೆ ರಾಜಸ್ತಾನ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಉತ್ತರಪ್ರದೇಶ, ಆಂಧ್ರಪ್ರದೇಶ, ಮಧ್ಯಪ್ರದೇಶ, ಒಡಿಶಾ, ಗುಜರಾತ್ ರಾಜ್ಯಗಳಲ್ಲಿನ ಅತಿಹೆಚ್ಚು ರೈಲ್ವೆ ನಿಲ್ದಾಣಗಳು ಸೌರ ಸ್ಥಾವರ ಅವಳಡಿಕೆಯಲ್ಲಿ ಮುಂದಿವೆ.

ನವೀಕರಿಸಬಹುದಾದ ಇಂಧನ ಉತ್ಪಾದನೆ, ಪರಿಸರ ಸುಸ್ಥಿರತೆ ಮತ್ತು ದೀರ್ಘಾವಧಿ ಆರ್ಥಿಕ ಉಳಿತಾಯವನ್ನು ಸಾಧಿಸಲು ಸರ್ಕಾರದ ನೀತಿಗಳಿಗೆ ಅನುಗುಣವಾಗಿ ಸೌರ ಶಕ್ತಿಯನ್ನು ಉತ್ತೇಜಿಸಲು ಭಾರತೀಯ ರೈಲ್ವೆ ಸರ್ವ ಪ್ರಯತ್ನಗಳನ್ನು ಮಾಡುತ್ತಿದೆ. ನವೀಕರಿಸಬಹುದಾದ ಇಂಧನಕ್ಕೆ ಪರಿವರ್ತನೆ ನಿರಂತರ ಪ್ರಕ್ರಿಯೆಯಾಗಿದೆ. ಕಳೆದ ಐದು ವರ್ಷಗಳಲ್ಲಿ ದೇಶಾದ್ಯಂತ 1489 ರೈಲ್ವೆ ನಿಲ್ದಾಣಗಳಲ್ಲಿ ಸೌರ ಘಟಕಗಳನ್ನು ವಿಸ್ತರಿಸಲಾಗಿದೆ. ರಾಜಸ್ಥಾನವು ದೇಶದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗಿಂತ ಅತಿ ಹೆಚ್ಚು ಅಂದರೆ 275 ಸೌರ ಘಟಕಗಳ ಸ್ಥಾಪನೆಯೊಂದಿಗೆ ಮುಂಚೂಣಿಯಲ್ಲಿದೆ.

ನವೀಕರಿಸಬಹುದಾದ ಇಂಧನದತ್ತ ಯೋಜನೆ: ಭಾರತೀಯ ರೈಲ್ವೆ ಹಂತಹಂತವಾಗಿ ನವೀಕರಿಸಬಹುದಾದ ಇಂಧನ ಬಳಕೆಗೆ ಯೋಜಿಸಿದೆ. ಅದರಂತೆ ಸೌರ ಮತ್ತು ಪವನ ವಿದ್ಯುತ್ ಇತ್ಯಾದಿ ಒಳಗೊಂಡಿರುವ ನವೀಕರಿಸಬಹುದಾದ ವಿದ್ಯುತ್‌ಗೆ ಪರಿಹಾರವಾದ ರೌಂಡ್ ದಿ ಕ್ಲಾಕ್ ವಿದ್ಯುತ್‌ಗಾಗಿ ಖರೀದಿ ವಿಧಾನ ಅನುಸರಿಸುತ್ತಿದೆ. ಹಂತಹಂತವಾಗಿ ನವೀಕರಿಸಬಹುದಾದ ಇಂಧನ ಸಂಗ್ರಹಿಸಲು ಯೋಜಿಸಿದೆ. ಅಲ್ಲದೇ, ರೈಲ್ವೆ ನಿಲ್ದಾಣಗಳಲ್ಲಿ ಸೌರ ಸ್ಥಾವರಗಳ ಸ್ಥಾಪನೆಗೆ ಕ್ರಮ ಕೈಗೊಂಡಿದೆ. ರೈಲ್ವೆಯು ಡೆವಲಪರ್ ಮೋಡ್ ಅಡಿಯಲ್ಲಿ ವಿದ್ಯುತ್ ಖರೀದಿ ಒಪ್ಪಂದ ಸಹ ಮಾಡಿಕೊಳ್ಳುತ್ತಿದೆ.

ರಾಜ್ಯವಾರು ವಿವರ: ರಾಜಸ್ಥಾನ 275, ಮಹಾರಾಷ್ಟ್ರ 270, ಪಶ್ಚಿಮ ಬಂಗಾಳ 237, ಉತ್ತರ ಪ್ರದೇಶ 204, ಆಂಧ್ರಪ್ರದೇಶ 198, ಕರ್ನಾಟಕ 146, ಮಧ್ಯಪ್ರದೇಶ 134, ಒಡಿಶಾ 133, ಗುಜರಾತ್ 112, ತೆಲಂಗಾಣ 95, ಬಿಹಾರ 81, ಅಸ್ಸಾಂ 78, ತಮಿಳುನಾಡು 73, ಜಾರ್ಖಂಡ್ 47, ಹರಿಯಾಣ 36, ಪಂಜಾಬ್ 30, ಉತ್ತರಾಖಂಡ 18, ಹಿಮಾಚಲ ಪ್ರದೇಶ 17, ತ್ರಿಪುರ 16, ಛತ್ತೀಸ್ಗಢ 16, ಕೇರಳ 13, ದೆಹಲಿ 8, ಜಮ್ಮುಕಾಶ್ಮೀರ 6, ನಾಗಾಲ್ಯಾಂಡ್ 2, ಮೇಘಾಲಯ 1, ಮಣಿಪುರ 1, ಚಂಡೀಗಢ 1 ಮತ್ತು ಪುದುಚೇರಿಯ 1 ಸೇರಿದಂತೆ ದೇಶದಲ್ಲಿ ಒಟ್ಟು 2249 ರೈಲು ನಿಲ್ದಾಣಗಳಲ್ಲಿ ಸೌರ ಸ್ಥಾವರ ಕಲ್ಪಿಸಲಾಗಿದೆ ಎಂದು ವಿವರಿಸಿದ್ದಾರೆ.

## ವಕ್ಫ್ ಮಸೂದೆ ವಿರುದ್ಧ ಡಿಎಂಕೆ ಸುಪ್ರೀಂ ಕೋರ್ಟ್ ಮೊರೆ: ಸ್ಟಾಲಿನ್ ಘೋಷಣೆ

**ಚೆನ್ನೈ,ಏ.3:** ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಅಂಗೀಕಾರಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್, ತಮ್ಮ ಪಕ್ಷವು ಮಸೂದೆಯ ವಿರುದ್ಧ ಸುಪ್ರೀಂಕೋರ್ಟ್‌ನಲ್ಲಿ ಮೊಕದ್ದಮೆ ಹೂಡಲಿದೆ ಗುರುವಾರ ಹೇಳಿದ್ದಾರೆ. ಮಸೂದೆ ಅಂಗೀಕಾರದ ವಿರುದ್ಧ ಪ್ರತಿಭಟಿಸಿ ಡಿಎಂಕೆ ಮತ್ತು ಅದರ ಮಿತ್ರ ಪಕ್ಷಗಳ ಸದಸ್ಯರು ಗುರುವಾರ ವಿಧಾನಸಭೆ ಕಲಾಪದಲ್ಲಿ ಕಪ್ಪು ಬ್ಯಾಡ್ಜ್ ಧರಿಸಿ ಭಾಗವಹಿಸಿದ್ದರು.



ಕಳೆದ ವಾರ ವಿಧಾನಸಭೆಯಲ್ಲಿ ಅಂಗೀಕರಿಸಲಾದ ನಿರ್ಣಯವನ್ನು ನೆನಪಿಸಿಕೊಂಡ ಸ್ಟಾಲಿನ್, 2025 ರ ಮಾರ್ಚ್ 27 ರಂದು ಕೇಂದ್ರ ಸರ್ಕಾರವು ವಕ್ಫ್ ಮಸೂದೆಯನ್ನು ಸಂಪೂರ್ಣವಾಗಿ ಹಿಂತೆಗೆದುಕೊಳ್ಳುವಂತೆ ಒತ್ತಾಯಿಸುವ ನಿರ್ಣಯವನ್ನು ವಿಧಾನಸಭೆ ಅಂಗೀಕರಿಸಿತು. ಬಿಜೆಪಿ ಹೊರತುಪಡಿಸಿ, ಉಳಿದ ಎಲ್ಲಾ ಸದಸ್ಯರು ಅದನ್ನು ಬೆಂಬಲಿಸಿದರು ಎಂದು ಹೇಳಿದ್ದಾರೆ.

ವಕ್ಫ್ ಮಸೂದೆ (ತಿದ್ದುಪಡಿ) ದೇಶದಲ್ಲಿ ಧಾರ್ಮಿಕ ಸಾಮರಸ್ಯವನ್ನು ಕದಡಬಹುದು ಮತ್ತು ಮುಸ್ಲಿಂ ಸಮುದಾಯದ ಮೇಲೆ ಪರಿಣಾಮ ಬೀರಬಹುದು ಎಂದು ಒತ್ತಿ ಹೇಳಿದ ಸ್ಟಾಲಿನ್, ನಾವು ನಿರ್ಣಯವನ್ನು ಅಂಗೀಕರಿಸಿದ್ದೇವೆ ಮತ್ತು ಬಹುಪಾಲು ರಾಜಕೀಯ ಪಕ್ಷಗಳು ಅದನ್ನು ವಿರೋಧಿಸಿದರೂ, ಮಸೂದೆಯನ್ನು ಲೋಕಸಭೆಯಲ್ಲಿ ಅಂಗೀಕರಿಸಲಾಗಿದೆ. ಇದು ಅತ್ಯಂತ ಖಂಡನೀಯ ಎಂದು ಹೇಳಿದ್ದಾರೆ.

ಲೋಕಸಭೆಯಲ್ಲಿ ಮಸೂದೆಯ ವಿರುದ್ಧ 232 ಮತಗಳು ಮತ್ತು ಅದನ್ನು ಬೆಂಬಲಿಸಿದ 288 ಮತಗಳನ್ನು ಎತ್ತಿ ತೋರಿಸಿದ ಸಿಎಂ ಸ್ಟಾಲಿನ್, ಮಸೂದೆಯ ಪರವಾಗಿ ಹೆಚ್ಚಿನ ಜನರು ಮತ ಚಲಾಯಿಸಿದರೂ, ವಿರೋಧಿಸಿದ 232 ಸದಸ್ಯರು ಸಾಮಾನ್ಯ ಸಂಖ್ಯೆಯಲ್ಲ ಎಂದು ಹೇಳಿದ್ದಾರೆ. ಈ ಮಸೂದೆಯನ್ನು ಕೇವಲ ವಿರೋಧಿಸಬಾರದು, ಸಂಪೂರ್ಣವಾಗಿ ಹಿಂಪಡೆಯಬೇಕು ಎಂಬುದು ನಮ್ಮ ನಿಲುವು ಎಂದು ಅವರು ಹೇಳಿದ್ದಾರೆ.

ಬಹುಪಾಲು ಪಕ್ಷಗಳ ವಿರೋಧದ ಹೊರತಾಗಿಯೂ ಮತ್ತು ಕೆಲವೇ ಕೆಲವು ಸಮ್ಮಿಶ್ರ ಪಕ್ಷಗಳ (ಬಿಜೆಪಿಯ) ಬೆಂಬಲದೊಂದಿಗೆ ಬೆಳಗಿನ ಜಾವ 2 ಗಂಟೆಗೆ ಮಸೂದೆಯನ್ನು ಅಂಗೀಕರಿಸುವುದು ಸಂವಿಧಾನದ ಮೇಲಿನ ದಾಳಿ ಎಂದು ಅವರು ಬಣ್ಣಿಸಿದ್ದಾರೆ.

ಈ ನಡೆಯು ಕೋಮು ಸಾಮರಸ್ಯವನ್ನು ಕದಡುತ್ತದೆ ಎಂದು ಹೇಳಿದ ಅವರು, ಇದಕ್ಕಾಗಿಯೇ ತಾನು ಮತ್ತು ಇತರ ಸದಸ್ಯರು ಕಪ್ಪು ಬ್ಯಾಡ್ಜ್ ಧರಿಸಿದ್ದಾಗಿ ವಿವರಿಸಿದ್ದಾರೆ. ಮಸೂದೆಯು ವಕ್ಫ್ ಮಂಡಳಿಯ ಸ್ವಾಯತ್ತತೆಯನ್ನು ನಾಶಪಡಿಸುತ್ತದೆ ಮತ್ತು ಮುಸ್ಲಿಂ ಸಮುದಾಯಕ್ಕೆ ಬೆದರಿಕೆಯಾಗಿ ಪರಿಣಮಿಸುತ್ತದೆ ಎಂದು ಆರೋಪಿಸಿದ ಅವರು, ತಮಿಳುನಾಡು ಅದರ ವಿರುದ್ಧ ಹೋರಾಟ ನಡೆಸಲಿದ್ದು, ಅದರಲ್ಲಿ ತಮಿಳುನಾಡು ಗೆಲ್ಲುತ್ತದೆ ಎಂದು ಅವರು ಘೋಷಿಸಿದ್ದಾರೆ. ನಾವು ಕಾನೂನು ಕ್ರಮಗಳ ಮೂಲಕ ಮಸೂದೆಯನ್ನು ತಡೆಯುತ್ತೇವೆ ಎಂದು ಅವರು ಹೇಳಿದ್ದಾರೆ.

## ಬಿಜೆಪಿಯ ಮುಸ್ಲಿಮರ ಪರ ಕಾಳಜಿ ಜಿನ್ನಾಗೆ ಮುಜುಗರ:ಉದ್ಧವ್ ವ್ಯಂಗ್ಯ

**ಮುಂಬೈ,ಏ.3:** ವಕ್ಫ್ ತಿದ್ದುಪಡಿ ಮಸೂದೆಯ ಚರ್ಚೆಯ ಸಂದರ್ಭದಲ್ಲಿ ಬಿಜೆಪಿ ಮತ್ತು ಅದರ ಮಿತ್ರಪಕ್ಷಗಳು ಮುಸ್ಲಿಮರ ಬಗ್ಗೆ ತೋರಿಸಿರುವ ಕಳವಳ ಪಾಕಿಸ್ತಾನದ ಸ್ಥಾಪಕ ಮುಹಮ್ಮದ್ ಅಲಿ ಜಿನ್ನಾ ಅವರನ್ನೂ ನಾಚಿಕೆ ಪಡುವಂತೆ ಮಾಡುತ್ತದೆ ಎಂದು ಶಿವಸೇನೆ (ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ ವ್ಯಂಗ್ಯವಾಡಿದ್ದಾರೆ. ಬಿಜೆಪಿಯ ಮುಸ್ಲಿಮರ ಪರ



ಮಸೂದೆಯ ಮೇಲಿನ ಬಿಜೆಪಿಯ ಮೋಸದ ನಿಲುವನ್ನು ಮತ್ತು ಭೂಮಿಯನ್ನು ಕಿತ್ತುಕೊಂಡು ತನ್ನ ಕೈಗಾರಿಕೋದ್ಯಮಿ ಸ್ನೇಹಿತರಿಗೆ ನೀಡುವ ಬಿಜೆಪಿಯ ತಂತ್ರವನ್ನು ತಮ್ಮ ಪಕ್ಷ ವಿರೋಧಿಸಿದೆ ಎಂದು ಲೋಕಸಭೆಯು ಮಸೂದೆಯನ್ನು ಅಂಗೀಕರಿಸಿದ ಗಂಟೆಗಳ ನಂತರ ಮುಂಬೈಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಉದ್ಧವ್ ಹೇಳಿದ್ದಾರೆ.

ಬಿಜೆಪಿ ಕೇಂದ್ರದಲ್ಲಿ ಮೂರನೇ ಅವಧಿಗೆ ಗೆದ್ದಿದೆ ಮತ್ತು ವಿಷಯಗಳು ಚೆನ್ನಾಗಿ ನಡೆಯುತ್ತಿವೆ. ಆದರೂ ಅದು ಹಿಂದೂ–ಮುಸ್ಲಿಂ ಸಮಸ್ಯೆಗಳನ್ನು ಎತ್ತುತ್ತಿದೆ ಎಂದು ಬಿಜೆಪಿಯ ಮಾಜಿ ಮಿತ್ರಪಕ್ಷದ ನಾಯಕನಾದ ಉದ್ಧವ್ ಠಾಕ್ರೆ, ಹೇಳಿದ್ದಾರೆ. ಬಿಜೆಪಿ ಮುಸ್ಲಿಮರನ್ನು ಇಷ್ಟಪಡದಿದ್ದರೆ ತನ್ನ ಪಕ್ಷದ ಧ್ವಜದಿಂದ ಹಸಿರು ಬಣ್ಣವನ್ನು ತೆಗೆದುಹಾಕಲಿ ಎಂದು ಅವರು ಸವಾಲು ಹಾಕಿದ್ದಾರೆ.

2025ರ ಏಪ್ರಿಲ್ 3ರಂದು, ಲೋಕಸಭೆಯಲ್ಲಿ ವಕ್ಫ್ (ತಿದ್ದುಪಡಿ) ಮಸೂದೆ 2025 ಅನ್ನು ಅಂಗೀಕರಿಸಲಾಯಿತು. ಮಸೂದೆಗೆ 288 ಸದಸ್ಯರು ಬೆಂಬಲ ಸೂಚಿಸಿದರೆ, 232 ಸದಸ್ಯರು ವಿರೋಧಿಸಿದರು. ಚರ್ಚೆಯು ಬೆಳಗಿನ ಜಾವ 1:15ರವರೆಗೆ ನಡೆದು, ತೀವ್ರ ಚರ್ಚೆಗೆ ಕಾರಣವಾಯಿತು. ಕೇಂದ್ರ ಸಚಿವ ಕಿರಣ್ ರಿಜಿಜು ಅವರು ಈ ಮಸೂದೆಯನ್ನು ಮಂಡಿಸಿದ್ದು, ಇದು ವಕ್ಫ್ ಮಂಡಳಿಗಳನ್ನು ಒಳಗೊಳ್ಳುವ ಮತ್ತು ಜಾತ್ಯತೀತವಾಗಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ. ಇದರ ಜೊತೆಗೆ, ಮುಸಲ್ಮಾನ್ ವಕ್ಫ್ (ರದ್ದತಿ) ಮಸೂದೆ 2024 ಕೂಡ ಅಂಗೀಕಾರಗೊಂಡಿತು, ಇದು 1923ರ ಮುಸಲ್ಮಾನ್ ವಕ್ಫ್ ಕಾಯಿದೆಯನ್ನು ರದ್ದುಗೊಳಿಸಿತು. ವಕ್ಫ್ ಮಸೂದೆಯ ವಿರುದ್ಧ ವಿರೋಧ ಪಕ್ಷಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿವೆ. ಕಾಂಗ್ರೆಸ್ನ ಗೌರವ್ ಗೊಗೊಯ್ ಇದನ್ನು ಸಂವಿಧಾನ ವಿರೋಧಿ ಎಂದು ಕರೆದರೆ, ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್ ಇದರ ಹಿಂದಿನ ಉದ್ದೇಶವು ಒಳ್ಳೆಯದಲ್ಲ ಎಂದು ಆರೋಪಿಸಿದ್ದಾರೆ.

## ನಿರ್ಬಂಧಿತ ದ್ವೀಪಕ್ಕೆ ಭೇಟಿ: ಅಮೆರಿಕ ಪ್ರಜೆ ಬಂಧನ

**ನವದೆಹಲಿ, ಏ. 3:** ಅಂಡಮಾನ್ ನಿಕೋಬಾರ್ನ ಉತ್ತರ ಸೆಂಟಿನೆಲ್ ದ್ವೀಪದ ನಿರ್ಬಂಧಿತ ಬುಡಕಟ್ಟು ಮೀಸಲು ಪ್ರದೇಶವನ್ನು ಪ್ರವೇಶಿಸಿದ ಆರೋಪದ ಮೇಲೆ ಅಮೆರಿಕದ ಪ್ರಜೆಯೊಬ್ಬರನ್ನು ಬಂಧಿಸಲಾಗಿದೆ ಎಂದು ಪಿಟಿಐ ಬುಧವಾರ ವರದಿ ಮಾಡಿದೆ. ಆರೋಪಿಯನ್ನು 24 ವರ್ಷದ ಮೈಖೈಲೊ ವಿಕ್ಟೋರೊವಿಚ್ ಪಾಲಿಯಕೋವ್ ಎಂದು ಗುರುತಿಸಲಾಗಿದೆ. ಆರೋಪಿಯು ಸೋಮವಾರ ಅಪರಾಧ ತನಿಖಾ ಇಲಾಖೆಯ ಅನುಮತಿಯಿಲ್ಲದೆ ನಿರ್ಬಂಧಿತ ಪ್ರದೇಶವನ್ನು ಪ್ರವೇಶಿಸಿದ್ದಾರೆ ಎಂದು ಆರೋಪಿಸಲಾಗಿದ್ದು, ಇದರ ನಂತರ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾಗಿ ವರದಿ ತಿಳಿಸಿದೆ.

ಉತ್ತರ ಸೆಂಟಿನೆಲ್ ದ್ವೀಪಕ್ಕೆ ಪರವಾನಗಿ ಇಲ್ಲದೆ ಪ್ರಯಾಣಿಸುವುದನ್ನು ನಿಷೇಧಿಸಲಾಗಿದೆ. ಸೆಂಟಿನೆಲೀಸ್ ಬುಡಕಟ್ಟು ಜನಾಂಗದ ಈ ಸಮುದಾಯದ ಜನಸಂಖ್ಯೆ 2011 ರಲ್ಲಿ ಸುಮಾರು 40 ರಷ್ಟು ಇತ್ತು. ಈ ಸಮುದಾಯವು ಹೊರಗಿನವರೊಂದಿಗೆ ಸಂಪರ್ಕವನ್ನು ವಿರೋಧಿಸುತ್ತಾರೆ. ಆರೋಪಿ ಪಾಲಿಯಕೋವ್ ಮಾರ್ಚ್ 26 ರಂದು ಪೋರ್ಟ್‌ಬ್ಲೇರ್‌ಗೆ ಬಂದಿದ್ದರು ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ. ಅವರು ಶನಿವಾರ ಬೆಳಗ್ಗೆ 1 ಗಂಟೆ ಸುಮಾರಿಗೆ ಕುರ್ಮದೇರಾ ಬೀಚ್ನಿಂದ ಕೊಬ್ಬರಿ ಮತ್ತು ಕೋಕಾ–ಕೋಲಾ ಪಾನೀಯದ ಡಬ್ಬಿಯನ್ನು ತೆಗೆದುಕೊಂಡು ಸೆಂಟಿನೆಲೀಸ್‌ಗೆ ಅರ್ಪಣೆ ಮಾಡಿದ್ದಾರೆ ಎಂದು ಅವರು ಹೇಳಿದ್ದಾರೆ.

## ಪ್ರಫುಲ್ಲಾ ಎಸ್.ಕೆ.ಉರ್ವಾಲ್ ನಿಧನ

**ಮುಂಬಯಿ, ಏ.3:** ವೃತ್ತಿಪರ ಶಿಕ್ಷಣದ ಪಿತಾಮಹ ಎಂದೇ ಪ್ರಸಿದ್ಧ, ಭಾರತ ರಾಷ್ಟ್ರದ ಹೆಸರಾಂತ ವೃತ್ತಿಪರ ಶಿಕ್ಷಣ ಸಂಸ್ಥೆಯೆಂದೆಣಿಸಿದ ಐಐಟಿಸಿ ಇದರ ಸಂಸ್ಥಾಪಕ ದಿ| ಎಸ್.ಕೆ ಉರ್ವಾಲ್ ಅವರ ಧರ್ಮಪತ್ನಿ ಪ್ರಫುಲ್ಲಾ ಉರ್ವಾಲ್ (80.) ವಯೋಸಹಜ ಅನಾರೋಗ್ಯದಿಂದ ಇಂದಿಲ್ಲಿ ಗುರುವಾರ ಬೆಳಿಗ್ಗೆ ತನ್ನ ಮುಂಬಯಿ ವಡಲಾ ಇಲ್ಲಿನ ಸನ್ನಿಧಾನ್ ಸ್ವನಿವಾಸದಲ್ಲಿ ನಿಧನರಾದರು.



ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ಉಡುಪಿ ಅಲ್ಲಿನ ಹೆಸರಾಂತ ನ್ಯಾಯವಾದಿ ವಾಸುದೇವ ರಾವ್ ಅವರ ಸುಪುತ್ರಿ ಆಗಿದ್ದ ಮೃತರು ಎರಡು ಗಂಡು (ಐಐಟಿಸಿ ನಿರ್ದೇಶಕರಾದ ವಿಕ್ರಾಂತ್ ಉರ್ವಾಲ್ ಮತ್ತು ಸಂದೇಶ್ ಉರ್ವಾಲ್), ಒಂದು ಹೆಣ್ಣು (ಸುಜತಾ ರಾವ್) ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

ಹಿಂದೂ ಪರಂಪರೆ, ಸಂಸ್ಕೃತಿಯನ್ನು ಮೈಗೂಡಿಸಿ ಧರ್ಮನಿಷ್ಠೆಯಿಂದ ಬಾಳುತ್ತಾ ಪ್ರೇರಣಾದಾಯಕ ವ್ಯಕ್ತಿತ್ವವುಳ್ಳವರಾಗಿ ಧಾರ್ಮಿಕ ಮತ್ತು ಸಾಮಾಜಿಕ ಸೇವಾ ಕಾರ್ಯಗಳಲ್ಲಿ ತೊಡಗಿಸಿ ಕೊಂಡಿದ್ದರು. ಶ್ರೀರಾಮ ಮತ್ತು ಶ್ರೀಕೃಷ್ಣನ ಅಪಾರ ಭಕ್ತರಾಗಿದ್ದು ಸಾಂತಾಕ್ರೂಜ್ ಪೂರ್ವದಲ್ಲಿನ ಉಡುಪಿ ಶ್ರೀ ಪೇಜಾವರ ಮಠ (ಮಧ್ವ ಭವನ ಮುಂಬಯಿ) ಮತ್ತು ಅಂಧೇರಿ ಪಶ್ಚಿಮ ಇರ್ಲಾ ಅಲ್ಲಿನ ಶ್ರೀ ಅದಮಾರು ಮಠದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಕ್ರೀಯವಾಗಿ ಪಾಲ್ಗೊಂಡು ಪ್ರೋತ್ಸಾಹಿಸುತ್ತಿದ್ದರು. ಕೊಡುಗೈದಾನಿ, ಕಲಾ ಪೋಷಕರಾಗಿದ್ದ ಇವರು ಮುಂಬಯಿಯಲ್ಲಿ ವರ್ಷಂಪ್ರತಿ ಸಂಗೀತ ವಿದ್ಯಾನಿಧಿ ಡಾ| ವಿದ್ಯಾಭೂಷಣ ಅವರ ಮತ್ತು ಪುತ್ತೂರು ನರಸಿಂಹ ನಾಯಕ್ ಬಳಗದ ಭಕ್ತಿ ಸಂಗೀತ ಕಾರ್ಯಕ್ರಮವನ್ನು ಆಯೋಜಿಸುತ್ತಿದ್ದರು. ಮೃತರ ನಿಧನಕ್ಕೆ ಬೃಹನ್ಮುಂಬಯಿಯಲ್ಲಿನ ಹಲವಾರು ಗಣ್ಯರು ಸಂತಾಪ ವ್ಯಕ್ತಪಡಿಸಿ ಶ್ರದ್ಧಾಂಜಲಿ ಅರ್ಪಿಸಿದ್ದಾರೆ.

## ಶಿವಸಾಗರ್ ಫುಡ್ಸ್ ಆತಿಥ್ಯ ಸಂಸ್ಥೆಗೆ ವರ್ಷದ ರೆಸ್ಟೊರೆಂಟರ್ ಪ್ರಶಸ್ತಿ

**ಮುಂಬಯಿ, ಏ.3:** ಸಮಾಜ ಸೇವೆಯೊಂದಿಗೆ ಹೋಟೆಲ್ ಉದ್ಯಮದಲ್ಲಿ ಸ್ವಾಂತಿಕೆಯ ಪ್ರತಿಷ್ಠೆ ಹೊಂದಿರುವ ಶಿವ ಸಾಗರ್ ಫುಡ್ ಆಂಡ್ ರೆಸಾರ್ಟ್ ಪ್ರೈವೇಟ್ ಲಿಮಿಟೆಡ್ ನ ಕಾರ್ಯಾಧ್ಯಕ್ಷ ಎನ್.ಟಿ ಪೂಜಾರಿ ಇವರ ನಿರ್ದೇಶಕರಾದ ಶಿವ ಸಾಗರ್ ಫುಡ್ ಆತಿಥ್ಯ ಸಂಸ್ಥೆಗೆ ಟೈಮ್ಸ್ ಬ್ಲಾ ಕೆ ಪ್ರಸ್ತುತಿಯ 2025 ಸಾಲಿನ ' ಟೈಮ್ಸ್ ಫುಡ್ ಆಂಡ್ ನೈಟ್ ಲೈಫ್ ಪ್ರಶಸ್ತಿ 'ವರ್ಷದ ರೆಸ್ಟೊರೆಂಟರ್' ಪ್ರಶಸ್ತಿ ಪ್ರದಾನಿಸಿ ಗೌರವಿಸಿದೆ .

ಇತ್ತೀಚೆಗೆ ಅಂಧೇರಿ ಪೂರ್ವದ ಐಟಿಸಿ ಮರಾಠ ಹೋಟೆಲ್ ಸಭಾಗೃಹದಲ್ಲಿ ನಡೆದ ಟೈಮ್ಸ್ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ಶಿವ ಸಾಗರ್ ಫುಡ್ ಆಂಡ್ ರೆಸಾರ್ಟ್ ಪ್ರೈವೇಟ್ ಲಿಮಿಟೆಡ್ ಆಡಳಿತ ನಿರ್ದೇಶಕ ಎನ್.ಟಿ ಪೂಜಾರಿ ಮತ್ತು ನಿರ್ದೇಶಕಿ ಯಶೋದಾ ಪೂಜಾರಿ ಅವರಿಗೆ ಟೈಂಸ್ ಬಳಗದ ಮುಖ್ಯಸ್ಥರು ಪ್ರಶಸ್ತಿ ಫಲಕವನ್ನು ಪ್ರದಾನಿಸಿ ಅಭಿನಂದಿಸಿ ಶುಭ ಹಾರೈಸಿದರು.





ಮನೆ ವಾತಾವರಣದ ರುಚಿಕರ ತಿನಿಸು –ಖಾನಾವಳಿಗಳಿಗೆ ಹೆಸರುವಾಸಿಯಾದ ಶಿವ ಸಾಗರ್ ಫುಡ್ಸ್ ಆತಿಥ್ಯ ಸೇವಾ ನಿರತ ಉಪಹಾರಗೃಹಗಳು ಬಹುಶಃ ರಾಷ್ಟ್ರದದ್ಯಾಂತ ಮನೆ ಮಾತನಾಡುವ ಭೋಜನಾಲಯಗಳಾಗಿ ವೆ . ಪ್ರವರ್ತನ ಶೀಲತೆ , ಸೇವಾತತ್ಪರತೆ , ರುಚಿಕರ ಮತ್ತು ರಸವತ್ತಾದ ಖಾನಾವಳಿ, ತಿನಿಸುಗಳೇ ಇಲ್ಲಿನ ವಿಶೇಷ . ಇಲ್ಲಿ ಊರಿನ ವಾತಾವರಣ ಸೃಷ್ಟಿಸಿ ಹಳ್ಳಿ ಸಂಪ್ರದಾಯ ಭೋಜನ ಜೊತೆ ಅಂತರಾಷ್ಟ್ರೀಯ ಶೈಲಿಯಲ್ಲಿ ಸೇವೆ ನಿರ್ವಹಿಸುತ್ತಿದೆ ವಿಶೇಷವಾದದ್ದು. ವಿವಿಧ ಬಗೆ ಸವಿಯಾದ ಖಾದ್ಯಗಳು ಸ್ವಾದಿಷ್ಟ ರುಚಿಯೇ ಇಲ್ಲಿ ಗ್ರಾಹಕರನ್ನು ಆಕರ್ಷಿಸುವ ಕೇಂದ್ರ ಕಾರ್ಯ . ಗ್ರಾಹಕರು ಆಯ್ಕೆಯ ಆಯ್ದ ನಾನಾ ಬಗೆ ಪದಾರ್ಥಗಳ ಘಮಘಮ ಪರಿಮಳ ಉಣ್ಣುವವರ ಪಾಲಿಗೆ ಗಮನಾರ್ಹವಾದ ರುಚಿಯನ್ನು ಜೊತೆಗೂಡಿಸು ವಂತಿಗೆ ಮಾಡುತ್ತಿರುವುದೇ ಇಲ್ಲಿನ ಮತ್ತೊಂದು ವೈಶಿಷ್ಟ .

ಹವಾನಿಯಂತ್ರಿತ ಆತ್ಯಾಧುನಿಕ ಸೌಲಭ್ಯಗಳು ಆಸನ ವ್ಯವಸ್ಥೆಯುಳ್ಳ ಅಚ್ಚುಕಟ್ಟುತನದ ಈ ರೆಸ್ಟೋರೆಂಟ್‌ಗಳಲ್ಲಿ ಸ್ವಂತ ಮನೆಯ ವಾತಾವರಣದ ಮತ್ತು ಮನೆರುಚಿಯ ಜೊತೆಗೆ ರಾಷ್ಟ್ರೀಯ ಶೈಲಿ ಊಟೋಪಚಾರ , ತಿಂಡಿ ತಿನಿಸುಗಳ ಮೆನು ಇಲ್ಲಿನ ವಿಶೇಷತೆಗಳು . ರಾಷ್ಟ್ರೀಯ , ಅಂತರಾಷ್ಟ್ರೀಯ ಕ್ರಿಕೆಟರ್ ಎಸ್ , ಹಾಲಿವುಡ್ , ಬಾಲಿವುಡ್ ಸೇರಿದಂತೆ ರಾಜ್ಯಪಾಲರು , ಮುಖ್ಯಮಂತ್ರಿಗಳು , ಕೇಂದ್ರ , ರಾಜ್ಯ ಮಂತ್ರಿಗಳಿಂದ ರಾಜ್ಯ , ರಾಷ್ಟ್ರೀಯ ರಾಜಕಾರಣಿಗಳಿಗೆ ಶಿವ ಸಾಗರ್ ಫುಡ್ಸ್ ಅಂದರೆ ಬಲುಇಷ್ಟ . ಸದ್ಯ ಮುಂಬಯಿ , ಪುಣೆ ಹಾಗೂ ಉಪನಗರಗಳಲ್ಲಿ ಶಿವಸಾಗರ್ ವೆಜ್ ರೆಸ್ಟೋರೆಂಟ್ , ಬಟರ್ ಫ್ಲೈ , ಕೈಮಾ , ದಿ ಬಿಗ್ ಸ್ಮಾಲ್ ಕೆಫೆ ಆಂಡ್ ಬಾರ್ ಇತ್ಯಾದಿ ಅತ್ಯಾಧುನಿಕ ಭೋಜನಾಲಯ , ಅಂತರಾಷ್ಟ್ರೀಯ ಮಟ್ಟದ ಉಪಹಾರಗೃಹಗಳನ್ನು ಶಿವ ಸಾಗರ್ ಫುಡ್ ಆಂಡ್ ರೆಸಾರ್ಟ್ ಪ್ರೈವೇಟ್ ಲಿಮಿಟೆಡ್ ನಡೆಸುತ್ತಿದೆ . ಎನ್.ಟಿ ಪೂಜಾರಿ ಪ್ರವರ್ತಕತ್ವದಲ್ಲಿ ಯಶೋದಾ ಎನ್ . ಪೂಜಾರಿ (ಪತ್ನಿ) ಮತ್ತು ನಿಕಿತಾ ಎನ್. ಪೂಜಾರಿ ಮತ್ತು ಅಂಕಿತಾ ಎನ್ . ಪೂಜಾರಿ (ಸುಪುತ್ರಿಯರು) ನಿರ್ದೇಶಕರು ಶ್ರಮಿಸುತ್ತಿದ್ದಾರೆ .ಎನ್.ಟಿ ಪೂಜಾರಿ ಇವರು ಹಣಕಾಸು ಕ್ಷೇತ್ರದಲ್ಲೂ ಸೇವಾನಿರತವಾಗಿದ್ದು ಈ ಹಿಂದೆ ಭಾರತ್ ಬ್ಯಾಂಕ್‌ನ ನಿರ್ದೇಶಕರಾಗಿದ್ದರು . ಶೈಕ್ಷಣಿಕ , ಸಾಮಾಜಿಕ ಸೇವೆಯಲ್ಲೂ ಸೇವಾನಿರತ ಸಹೃದಯಿತ್ವದ ಸಮಾಜ ಸೇವಕ . ಸದ್ಯ ಬಿಲ್ಲವ ಛೇಂಬರ್ ಆಫ್ ಕಾಮರ್ಸ್ ಆಂಡ್ ಇಂಡಸ್ಟ್ರೀಸ್ ಇದರ ಕಾರ್ಯಾಧ್ಯಕ್ಷ ಆಗಿ ಸೇವಾ ನಿರತ ಆಗಿದೆ .

### ಬಿ.ವೈ.ವಿಜಯೇಂದ್ರ ವಿರುದ್ಧ ಯತ್ನಾಳ್ ಕಿಡಿ

# ಯಡಿಯೂರಪ್ಪ ಕುಟುಂಬ ರಾಜ್ಯಾಧ್ಯಕ್ಷ ಸ್ಥಾನದಿಂದ ಮುಕ್ತಿ ಆಗೋವರೆಗೂ ಬಿಜೆಪಿಗೆ ಹೋಗಲ್ಲ: ಯತ್ನಾಳ್ ಶಪಥ

**ಬೆಂಗಳೂರು, ಏ.3–** ಬಿಜೆಪಿ ಪಕ್ಷದಿಂದ 6 ವರ್ಷಗಳ ಕಾಲ ಉಚ್ಚಾಟನೆ ಆಗಿರುವ ವಿಜಯಪುರ ನಗರ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಅವರ ಕುಟುಂಬದ ವಿರುದ್ಧ ವಾಗ್ದಾಳಿ ಮುಂದುವರೆಸಿದ್ದಾರೆ. ಯಡಿಯೂರಪ್ಪ ಕುಟುಂಬ ರಾಜ್ಯಾಧ್ಯಕ್ಷ ಸ್ಥಾನದಿಂದ ಮುಕ್ತಿ ಆಗೋವರೆಗೂ ನಾನು ಬಿಜೆಪಿಗೆ ವಾಪಸ್ ಆಗಲ್ಲ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಶಪಥ ಮಾಡಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯತ್ನಾಳ್‌ರನ್ನ ವಾಪಸ್ ಬಿಜೆಪಿಗೆ ತರಲು ರಮೇಶ್ ಜಾರಕಿಹೊಳಿ ಫಡ್ನವಿಸ್ ಜೊತೆ ಮಾತುಕತೆ ಮಾಡಿರೋ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ರಮೇಶ್ ಜಾರಕಿಹೊಳಿ ಕೃಷ್ಣ ಮತ್ತು ಭೀಮಾ ನದಿಗೆ ನೀರು ಬಿಡುವಂತೆ ಫಡ್ನವಿಸ್ ಭೇಟಿಯಾಗಿದ್ದು. ನನ್ನ ಸಲುವಾಗಿ ಚರ್ಚೆ ಮಾಡೋದು ಅವಶ್ಯಕತೆ ಇಲ್ಲ. ಯಾಕೆಂದರೆ 6 ವರ್ಷ ಹೊರಗೆ ಹಾಕಿದ್ದಾರೆ. ಯಡಿಯೂರಪ್ಪ ಕುಟುಂಬ ರಾಜ್ಯಾಧ್ಯಕ್ಷ ಸ್ಥಾನದಿಂದ ಮುಕ್ತಿಯಾಗುವವರೆಗೆ ನಾನು ಬಿಜೆಪಿಗೆ ಹೋಗಲ್ಲ ಎಂದರು.

ಇನ್ನು ಹೊಸ ಪಕ್ಷ ಕಟ್ಟುವ ಬಗ್ಗೆ ಪ್ರತಿಕ್ರಿಯೆ ನೀಡಿದ ಶಾಸಕ ಯತ್ನಾಳ್ ಅವರು, ಹೊಸ ಪಕ್ಷ ಕಟ್ಟುತ್ತೇವೆ ಅಂತ ಯಾರು ಹೇಳಿದ್ರು? ನಾವು ಮೊದಲು ಸರ್ವೆ ಮಾಡುತ್ತೇವೆ. ಈ ಕೆಟ್ಟ ಯಡಿಯೂರಪ್ಪ ಕುಟುಂಬಕ್ಕೆ ಬಿಜೆಪಿ ಮುಂದುವರೆಸಿದರೆ ಹೊಸ ಪಕ್ಷದ ಬಗ್ಗೆ



ಚಿಂತನೆ ಮಾಡುತ್ತೇವೆ. ಈ ಕೆಟ್ಟ ಕುಟುಂಬ ತೆಗೆದರೆ ಮಾತ್ರ ಬಿಜೆಪಿಗೆ ಕರ್ನಾಟಕದಲ್ಲಿ ಭವಿಷ್ಯ ಇದೆ ಎಂದು ಆರೋಪಿಸಿದರು.

ಭ್ರಷ್ಟಾಚಾರದಲ್ಲಿ ಇವರೇ ಇದ್ದಾರೆ. ಕರೋನಾ, ಡಿ ನೋಟಿಫಿಕೇಶನ್ ಹಗರಣ ಇದೆ. ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಮಾತಾಡೋಕೆ ಇವರಿಗೇನು ನೈತಿಕತೆ ಇದೆ. ನಮ್ಮ ಭಿಕ್ಷೆಯಿಂದ ಎಂಎಲ್‌ಎ ಆಗಿರೋದು ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ. ವಿಜಯೇಂದ್ರ ಚೇಲಾಗಳು ಯತ್ನಾಳ್ ರಾಜೀನಾಮೆ ಕೊಡಬೇಕು ಅಂತ ಹೇಳುತ್ತಾರೆ. ಮೊದಲು ವಿಜಯೇಂದ್ರ ರಾಜೀನಾಮೆ ಕೊಡಬೇಕು ಎಂದರು.ಡಿಕೆಶಿ ಕೊಟ್ಟ ಭಿಕ್ಷೆಯಿಂದ ಶಾಸಕ ಆಗಿರೋದು. ಮೊದಲು ವಿಜಯೇಂದ್ರ ರಾಜೀನಾಮೆ ಕೊಟ್ಟು ಶಿಕಾರಿಪುರದಿಂದ ಆರಿಸಿ ಬರಲಿ. ವಿಜಯೇಂದ್ರ ಚೇಲಾಗಳ ಕೈಯಲ್ಲಿ ಹೇಳಿಸೋದು ಬಿಟ್ಟು ಧಮ್ ಇದ್ದರೆ ನನ್ನ ಎದುರಿಗೆ ವಿಜಯೇಂದ್ರ ಮಾತಾಡಲಿ. 4 ಚೇಲಾಗಳನ್ನ ಇಟ್ಟುಕೊಂಡು ಹಂದಿಗಳಿಂದ ಮಾತಾಡಿಸಬೇಡ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ಕಿಡಿಕಾರಿದರು.



ಗುರುವಾರ ಬೆಂಗಳೂರಿನಲ್ಲಿ ಹಠಾತ್ ಮಳೆ ಸುರಿದ ಕಾರಣ ಶಾಂತಿನಗರದಲ್ಲಿ ನೀರು ತುಂಬಿದ ರಸ್ತೆಯಲ್ಲಿ ವಾಹನಗಳು ಸಂಚರಿಸಿದವು.

# ಗ್ಯಾರಂಟಿ ಅನುಷ್ಠಾನಕ್ಕೆ ಕಚೇರಿ ಆರಂಭಿಸಿದ ಸಚಿವ ಕೆ.ಜೆ.ಜಾರ್ಜ್

**ಬೆಂಗಳೂರು, ಏ.3–** ಸರ್ವಜ್ಞ ನಗರ ವಿಧಾನಸಭಾ ಕ್ಷೇತ್ರದ್ಲಿ ಮೂಲಸೌಕರ್ಯ ಅಭಿವೃದ್ಧಿ ಜತೆಗೆ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಇಂಧನ ಸಚಿವ ಹಾಗೂ ಶಾಸಕ ಕೆ.ಜೆ.ಜಾರ್ಜ್ ನೂತನ ಕಚೇರಿ ಲೋಕಾರ್ಪಣೆಗೊಳಿಸಿದ್ದಾರೆ.

ಸರ್ವಜ್ಞನಗರ ಕ್ಷೇತ್ರದ ಕಾಚರಕನಹಳ್ಳಿಯಲ್ಲಿ ಗುರುವಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಕಚೇರಿಯನ್ನು ಉದ್ಘಾಟಿ ಸಿದ ಸಚಿವರು, ಕ್ಷೇತ್ರದಲ್ಲಿ ಗ್ಯಾಂಟಿ ಯೋಜನೆಗಳನ್ನು ಸಮರ್ಪವಾಗಿ ಜನರಿಗೆ ತಲುಪಿಸುವದರ ಜತೆಗೆ ಅನುಷ್ಠಾನವಾಗುತ್ತಿದೆಯೋ ಎಂಬುದನ್ನು ಪರಿಶೀಲಿಸುವ ಉದ್ದೇಶದಿಂದ ಈ ಕಚೇರಿ ಸ್ಥಾಪಿಸುತ್ತಿರುವುದಾಗಿ ಹೇಳಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ರಾಜ್ಯ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ ಹಾಗೂ ಸಮಿತಿಯ ಸ್ಥಳೀಯ ಅಧ್ಯಕ್ಷ ಮುರಳಿ ಮತ್ತು



ಸದಸ್ಯರು ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಗಾಂಧೀನಗರ 2ನೇ ಹಂತದಲ್ಲಿ ಕೈಗೊಳ್ಳುತ್ತಿರುವ 300 ಎಂಎಂ ವ್ಯಾಸದ ಒಳಚರಂಡಿ ನೂತನ ಮಾರ್ಗದ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದರು. ಈ ವೇಳೆ ಕ್ಷೇತ್ರದ ಜನರು ಸಲ್ಲಿಸಿದ ಅಹವಾಲುಗಳನ್ನು ಸ್ವೀಕರಿಸಿದ ಸಚಿವರು, ತೊಂದರೆಗಳನ್ನು ನಿವಾರಿಸುವ ಭರವಸೆ ನೀಡಿದರು. ಕುಡಿಯುವ ನೀರು ಪೂರೈಕೆಯಲ್ಲಿನ ಸಮಸ್ಯೆಗಳ ಬಗ್ಗೆ ಕ್ಷೇತ್ರದ ಜನರು ವಿವರಿಸಿದಾಗ, ಸಚಿವ ಕೆ.ಜೆ.ಜಾರ್ಜ್ ಅಧಿಕಾರಿಗಳಿಂದ ಮಾಹಿತಿ ಪಡೆದು ತಕ್ಷಣವೇ ಸರ್ಪಕ ಕುಡಿಯುವ

– ಸರ್ವಜ್ಞನಗರ ಕ್ಷೇತ್ರದಲ್ಲಿ ಮೂಲ ಸೌಕರ್ಯ ಯೋಜನೆಗಳಿಗೆ ಆದ್ಯತೆ
– ಒಳಚರಂಡಿ ಕಾಮಗಾರಿಗೆ ಗುದ್ದಲಿ ಪೂಜೆ: ಹೊಲಿಗೆ ಯಂತ್ರ ವಿತರಣೆ

ನೀರಿನ ವ್ಯವಸ್ಥೆ ಮಾಡುವಂತೆ ಸೂಚನೆ ನೀಡಿದರು.

**ಗಸ್ವಾವಲಂಬಿ ಜೀವನಕ್ಕೆ ಹೊಲಿಗೆ ಯಂತ್ರ ಕೊಡುಗೆ**

ವಿನೋಭ ನಗರ, ಕೆ.ಜಿ.ಹಳ್ಳಿಯಲ್ಲಿ ಸಾಮಾಜಿಕ ಕಾರ್ಯದಲ್ಲಿ ನಿರತವಾಗಿರುವ ಮೈತ್ರಿ ಸರ್ವ ಸೇವಾ ಸಂಸ್ಥೆ ಮತ್ತು ಯುನೈಟೆಡ್ ವೇ ವತಿಯಿಂದ ಹೊಲಿಗೆ ಯಂತ್ರಗಳನ್ನು ಸಚಿವ ಕೆ.ಜೆ.ಜಾರ್ಜ್ ವಿತರಿಸಿದರು. ಸಂಸ್ಥೆಯು ಆರ್ಥಿಕ ಸಬಲೀಕರಣದ ಭಾಗವಾಗಿ 35 ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಕ್ಕಳು ಪ್ರದರ್ಶಿಸಿದ ಭರತನಾಟ್ಯ ವೀಕ್ಷಿಸಿದ ಅವರು, ಮಕ್ಕಳಿಗೆ ಶುಭಹಾರೈಸಿದರು.

# ಇಂದಿನಿಂದ ಏ.14ರ ವರೆಗೆ ಐತಿಹಾಸಿಕ ಕರಗ ಉತ್ಸವ ಆರಂಭ

**ಬೆಂಗಳೂರು, ಏ.3–** ಐತಿಹಾಸಿಕ ಪ್ರಸಿದ್ಧ ಬೆಂಗಳೂರು ಕರಗ ಉತ್ಸವ ನಾಳೆಯಿಂದ ಜರುಗಲಿದೆ. ಧರ್ಮರಾಯ ದೇವಸ್ಥಾನದಲ್ಲಿ ಏ.14ರ ವರೆಗೂ ಕರಗ ಉತ್ಸವ ನಡೆಯಲಿದೆ.

ನಾಳೆ ರಾತ್ರಿ 10 ಗಂಟೆಗೆ ಕರಗ ಆಚರಣೆಗಳು ಶುರುವಾಗಲಿವೆ. ಏಪ್ರಿಲ್ 12ರ ಚೈತ್ರ ಪೌರ್ಣಮಿಯಂದು ಕರಗ ಶಕ್ತ್ಯೋತ್ಸವ ನಡೆಯಲಿದೆ.ಈ ಬಾರಿ ಪೂಜಾರಿ ಎ.ಜ್ಞಾನೇಂದ್ರ ಅವರು ಕರಗ ಹೊರಲಿದ್ದಾರೆ. ಕಳೆದ 14 ವರ್ಷಗಳಿಂದ ಜ್ಞಾನೇಂದ್ರ ಕರಗ ಹೊರುತ್ತಿದ್ದಾರೆ.



ಈ ಬಾರಿ ಕರಗದಲ್ಲಿ 20 ಲಕ್ಷ ಜನ ಭಾಗಿಯಾಗುವ ನಿರೀಕ್ಷೆ ಇದೆ. ಏಪ್ರಿಲ್ 4 ರಂದು ರಥೋತ್ಸವ ಮತ್ತು ಧ್ವಜಾರೋಹಣ ನಡೆಯಲಿದೆ. ಏ.5 ರಿಂದ ಏ.8 ರ ತನಕ ಪ್ರತಿದಿನ ವಿಶೇಷ ಪೂಜೆ ಮತ್ತು ಮಹಾಮಂಗಳಾರತಿ ಇರಲಿದೆ. ಏ.9 ರಂದು ಆರತಿ ದೀಪಗಳು, ಏ.10 ರ ಗುರುವಾರ ಹಸಿ ಕರಗ, ಏ.11 ರಂದು ಹೊಂಗಲು ಸೇವೆ, ಏ.12 ಶನಿವಾರದಂದು ಕರಗ ಶಕ್ತ್ಯೋತ್ಸವ ಮತ್ತು ಧರ್ಮರಾಯಸ್ವಾಮಿ ರಥೋತ್ಸವ, ಏ.13ರಂದು ಪುರಾಣ ಪ್ರವಚನ ಮತ್ತು ದೇವಸ್ಥಾನದಲ್ಲಿ ಗಾವು ಶಾಂತಿ, ಏ.14ರ ಸೋಮವಾರ ವಸಂತೋತ್ಸವ ಧ್ವಜಾರೋಹಣ ಇರಲಿದೆ.ಬೆಂಗಳೂರು ಕರಗ ಹಿನ್ನೆಲೆಯಲ್ಲಿ ಧರ್ಮರಾಯ ದೇವಸ್ಥಾನದಲ್ಲಿ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಇಂದು ಬೆಳಗ್ಗೆಯಿಂದಲೇ ದೇವಾಲಯದ ಸ್ವಚ್ಛತಾ ಕಾರ್ಯ ನಡೆದಿದೆ. ಸಿಬ್ಬಂದಿಯು ದೇವಾಲಯ, ರಥ ಸೇರಿದಂತೆ ಸಂಪೂರ್ಣ ಶುಚಿಗೊಳಿಸುತ್ತಿದ್ದಾರೆ.

### ಹಾಲಿನ ದರ ಏರಿಕೆ ಹಿನ್ನೆಲೆಯಲ್ಲಿ

# ಹೋಟೆಲ್, ದರ್ಶಿನಿಗಳಲ್ಲಿ ಕಾಫಿ, ಚಹಾ ದರ ಏರಿಕೆ

**ಬೆಂಗಳೂರು, ಏ.3–** ಹಾಲಿನ ದರ ಏರಿಕೆ ಹಿನ್ನೆಲೆಯಲ್ಲಿ ಬೆಂಗಳೂರಿನ ಅನೇಕ ಹೋಟೆಲ್‌ಗಳು ಮತ್ತು ದರ್ಶಿನಿಗಳು ಕಾಫಿ ಮತ್ತು ಚಹಾ ದರ ಏರಿಕೆಯಾಗಿದೆ.

ಕಾಫಿ, ಟೀ ಬೆಲೆ 3 ರಿಂದ 5 ರೂಪಾಯಿವರೆಗೆ ದರ ಹೆಚ್ಚಳವಾಗಿದೆ. ಆದರೆ, ಕಾಫಿ ಮತ್ತು ಚಹಾ ದರ ಏರಿಕೆ ವಿಚಾರವಾಗಿ ಬೆಂಗಳೂರು ಹೋಟೆಲ್ ಮಾಲೀಕರ ಸಂಘ ಈವರೆಗೆ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿಲ್ಲ. ನಂದಿನಿ ಹಾಲಿನ ದರ ಪ್ರತಿ ಲೀಟರ್ಗೆ 4 ರೂಪಾಯಿ ಹೆಚ್ಚಳವಾಗಿರುವುದರಿಂದ ಅನಿವಾರ್ಯ ವಾಗಿ ಕಾಫಿ ಮತ್ತು ಚಹಾದ ದರ ಹೆಚ್ಚಳ ಮಾಡಬೇಕಾಗಿದೆ. ಅದೇ ರೀತಿ ಇತರ ಹಾಲಿನ ಉತ್ಪನ್ನಗಳ ದರ ಕೂಡ ಏರಿಕೆ ಮಾಡಬೇಕಾಗುತ್ತದೆ ಎಂದು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಪಿ.ಸಿ.ರಾವ್ ಕೆಲವು ದಿನಗಳ ಹಿಂದೆ ಹೇಳಿಕೆ ನೀಡಿದ್ದರು.

**ಹಾಲಿನ ಉತ್ಪನ್ನಗಳ ಬೆಲೆಯೂ ಏರಿಕೆ:** ಕಾಫಿ, ಚಹಾ ಮಾತ್ರವಲ್ಲದೆ ಹಾಲಿನಿಂದ ತಯಾರಿಸುವ ಇತರ ಉತ್ಪನ್ನಗಳ ಬೆಲೆಯೂ ಏರಿಕೆಯಾಗ ಲಿದೆ. ಹಾಲಿನ ಉತ್ಪನ್ನಗಳಾದ ಫೇಡಾ, ಪನ್ನೀರ್ ಇತ್ಯಾದಿಗಳ ಬೆಲೆ ಹೆಚ್ಚಳವಾಗುವ ನಿರೀಕ್ಷೆ ಇದೆ. ಹಾಲಿನ ದರ ಹೆಚ್ಚಳದಿಂದ ಇತರ ಉತ್ಪನ್ನಗಳ ತಯಾರಿಕಾ ವೆಚ್ಚವೂ ಹೆಚ್ಚಾಗುತ್ತಿದೆ. ಹೀಗಾಗಿ ಹಾಲಿನ ಉತ್ಪನ್ನಗಳ ಬೆಲೆ ಹೆಚ್ಚಿಸುತ್ತೇವೆ ಎಂದು ಬೆಂಗಳೂರಿನ ಹೋಟೆಲ್ ಮಾಲೀಕರೊಬ್ಬರು ತಿಳಿಸಿದ್ದಾರೆ.

**ಕಾಫಿ ಪುಡಿ ದರವೂ ಏರಿಕೆ:** ಕಾಫಿ ಪುಡಿಯ ದರ ಕೂಡ ಕೆಲವು ವಾರಗಳ ಹಿಂದೆ ಹೆಚ್ಚಾಗಿತ್ತು. ಇದು



ಕೂಡ ಕಾಫಿ ದರ ಏರಿಕೆಗೆ ಕಾರಣವಾಗಿದೆ. ಫೆಬ್ರವರಿ ಕೊನೆಯ ವಾರದ ವೇಳೆಗೆ ಹುರಿದ ಕಾಫಿ ಪುಡಿಯ ಬೆಲೆ ಪ್ರತಿ ಕೆಜಿಗೆ 100 ರೂ.ಗಳಷ್ಟು ಹೆಚ್ಚಾಗಿತ್ತು. ಇದು ಮತ್ತೆ ಕೆಜಿಗೆ 100 ರೂ.ಗಳಷ್ಟು ಹೆಚ್ಚಾಗುವ ನಿರೀಕ್ಷೆ ಇದೆ ಎಂದು ಇತ್ತೀಚೆಗೆ ಇಂಡಿಯನ್ ಕಾಫಿ ರೋಸ್ಟರ್ಸ್ ಅಸೋಸಿಯೇಷನ್ ಮತ್ತು ಕಾಫಿ ಮಂಡಳಿ ಅಧಿಕಾರಿಗಳು ತಿಳಿಸಿದ್ದರು.

ಕಾಫಿ ಪುಡಿ ದರ ಹೆಚ್ಚಳವಾದ ಕಾರಣ ಮಾರಾಟಗಾರರು ಒಂದು ಕಪ್ ಕಾಫಿಯ ಬೆಲೆಯನ್ನು ಸುಮಾರು 5 ರೂ.ಗಳಷ್ಟು ಹೆಚ್ಚಿಸುವುದನ್ನು ಬಿಟ್ಟು ಬೇರೆ ದಾರಿಯಿಲ್ಲ. ಚಿಕೋರಿ ಮಿಶ್ರಣವು ಗುಣಮಟ್ಟ ಮತ್ತು ಸುವಾಸನೆಯ ಮೇಲೆ ಪರಿಣಾಮ ಬೀರುವುದರಿಂದ ನಾವು ಅದರ ಪ್ರಮಾಣ ಹೆಚ್ಚಿಸಲು ಸಾಧ್ಯವಿಲ್ಲ ಎಂದು ಇಂಡಿಯನ್ ಕಾಫಿ ರೋಸ್ಟರ್ಸ್ ಅಸೋಸಿ ಯೇಷನ್ ಅಧ್ಯಕ್ಷರು ಕೆಲವು ದಿನಗಳ ಹಿಂದೆ ತಿಳಿಸಿದ್ದರು. ಅದೀಗ ನಿಜವಾಗಿದೆ.

### ಏಪ್ರಿಲ್ 1 ರಿಂದ ವಿಐಪಿ ದರ್ಶನಕ್ಕೆ ಬೆಳಗ್ಗೆ 5.30 ರಿಂದ 7.30ಕ್ಕೆ ನಿಗದಿ

# ಭಕ್ತಾದಿಗಳ ಅನುಕೂಲಕ್ಕಾಗಿ ವಿಐಪಿ ದರ್ಶನ ವೇಳೆಯಲ್ಲಿ ಬದಲಾವಣೆ: ಟಿಟಿಡಿ ಸದಸ್ಯ ಎಸ್ ನರೇಶ್‌ಕುಮಾರ್

**ಬೆಂಗಳೂರು, ಏ.3–** ಭಕ್ತಾದಿಗಳಿಗೆ ಶೀಘ್ರದರ್ಶನ ಭಾಗ್ಯ ದೊರಕಿಸಿ ಕೊಡುವ ಉದ್ದೇಶದಿಂದ ವಿಐಪಿ ದರ್ಶನದ ವೇಳೆಯಲ್ಲಿ ಬದಲಾವಣೆ ಮಾಡಲಾಗಿದ್ದು, ಏಪ್ರಿಲ್ 1 ರಿಂದ ಇದನ್ನು ಪ್ರಾಯೋಗಿಕವಾಗಿ ಜಾರಿಗೊಳಿಸಲಾಗಿದೆ ಎಂದು ಟಿಟಿಡಿ ಸದಸ್ಯ ಎಸ್. ನರೇಶ್ ಕುಮಾರ್ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಅವರು, ಬೆಳಿಗ್ಗೆ 8.30 ರಿಂದ 10.00 ಗಂಟೆಯವರೆಗೆ ವಿಐಪಿ ದರ್ಶನಕ್ಕೆ ಅವಕಾಶ ಮಾಡಿ ಕೊಡಲಾಗಿತ್ತು. ಇದರಿಂದ ಶೀಘ್ರದರ್ಶನದ ಹಾಗೂ ಸರ್ವದರ್ಶನದ ಸರತಿಯಲ್ಲಿ ತೆರಳುವ ಭಕ್ತಾದಿಗಳಿಗೆ ಬಹಳಷ್ಟು ಸಮಯ ವ್ಯಯವಾಗುತ್ತಿತ್ತು. ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಇತ್ತೀಚೆಗೆ ನಡೆದ ಟಿಟಿಡಿ ಮಂಡಳಿ ಸಭೆಯಲ್ಲಿ ವಿಐಪಿ ದರ್ಶನದ ಸಮಯವನ್ನು ಬದಲಾವಣೆ ಮಾಡುವ ನಿರ್ಧಾರ ಕೈಗೊಳ್ಳಲಾಗಿದೆ.

ಏಪ್ರಿಲ್ 1 ರಿಂದ ವಿಐಪಿ ದರ್ಶನಕ್ಕೆ ಬೆಳಿಗ್ಗೆ 5.30 ರಿಂದ 7.30ಕ್ಕೆ ನಿಗದಿಪಡಿಸಲಾಗಿದೆ. ವಾರಾಂತ್ಯ ಹಾಗೂ ವಿಶೇಷ ದಿನಗಳನ್ನು ಹೊರತುಪಡಿಸಿ ಉಳಿದ ದಿನಗಳಲ್ಲಿ ಈ ಸಮಯದಲ್ಲಿ ದರ್ಶನಕ್ಕೆ ಅವಕಾಶ ನೀಡಲಾಗಿದೆ. ಇದರಿಂದ ಇನ್ನಿತರ ಸೇವೆಗಳು ಹಾಗೂ ದರ್ಶನಕ್ಕೆ ಆಗಮಿಸುವಂತಹ ಭಕ್ತಾದಿಗಳ ದರ್ಶನದ ಸಮಯದಲ್ಲಿ ಕಡಿತಗೊಳ್ಳುವ ನಿರೀಕ್ಷೆಯಿದೆ.



ಸಾಮಾನ್ಯ ಭಕ್ತಾದಿಗಳಿಗೆ ಕಡಿಮೆ ಸಮಯದಲ್ಲಿ ದರ್ಶನ ಭಾಗ್ಯ ಲಭಿಸಲಿ ಎನ್ನುವ ಉದ್ದೇಶದಿಂದ ಈ ನಿರ್ಧಾರವನ್ನು ಮಂಡಳಿ ಸಭೆಯಲ್ಲಿ ಕೈಗೊಳ್ಳಲಾಗಿದೆ ಎಂದು ಎಸ್ ನರೇಶ್ ಕುಮಾರ್ ತಿಳಿಸಿದ್ದಾರೆ.

# ಸೂಕ್ಷ್ಮ ನೀರಾವರಿ ಪರಿಕರಗಳನ್ನು ಪಡೆಯಲು ನಿರ್ಬಂಧದಲ್ಲಿ ಸಡಲಿಕೆ

**ಬೆಂಗಳೂರು, ಏ.3–** ರೈತರಿಗೆ ಕೃಷಿ ಇಲಾಖೆ ಗುಡ್ ನ್ಯೂಸ್ ನೀಡಿದೆ. ಸೂಕ್ಷ್ಮ ನೀರಾವರಿ ಪರಿಕರಗಳನ್ನು ಪಡೆಯಲು ಇದ್ದ ನಿರ್ಬಂಧವನ್ನು ಸರ್ಕಾರ ಸಡಿಲಿಸಿದ್ದು, ಎಲ್ಲಾ ವರ್ಗದ ರೈತ ಫಲಾನುಭವಿಗಳು 7 ವರ್ಷಗಳ ನಂತರ ಅದೇ ಜಮೀನಿಗೆ ಮರು ಸಹಾಯಧನ ಪಡೆಯಲು ಅವಕಾಶ ಕಲ್ಪಿಸಿ ಆದೇಶ ಹೊರಡಿಸಲಾಗಿದೆ.

ಈ ಹಿಂದೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ರೈತ ಫಲಾನುಭವಿಗಳನ್ನು ಹೊರತುಪಡಿಸಿ ಇತರೆ ವರ್ಗದವರಿಗೆ ಒಮ್ಮೆ ಮಾತ್ರ ಒಂದು ನಿರ್ದಿಷ್ಟ ಜಮೀನಿಗೆ ಹನಿ ನೀರಾವರಿ ಹಾಗೂ ತುಂತುರು ನೀರಾವರಿ ಘಟಕಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿತ್ತು.

ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ರೈತ ಫಲಾನುಭವಿಗಳು 7 ವರ್ಷಗಳ ನಂತರ ಅದೇ ಜಮೀನಿಗೆ ಸಹಾಯಧನ ಪಡೆಯಲು ಇದ್ದ ಅವಕಾಶವನ್ನು ಇತರೆ ವರ್ಗಗಳಿಗೂ ವಿಸ್ತರಿಸಿ ಆದೇಶ ಹೊರಡಿಸಲಾಗಿದೆ.

ಕೃಷಿ ಸಚಿವರಾದ ಎನ್.ಚಲುವರಾಯಸ್ವಾಮಿರವರ ವಿಶೇಷ ಪ್ರಯತ್ನದ ಫಲವಾಗಿ ಈ ಆದೇಶ ಹೊರಬಿದ್ದಿದ್ದು, ಲಕ್ಷಾಂತರ ರೈತ ಕುಟುಂಬಗಳಿಗೆ ಅನುಕೂಲವಾಗಲಿದೆ. ಕೃಷಿ ಸಚಿವರು ರಾಜ್ಯ ಪ್ರವಾಸ ಕೈಗೊಂಡ ಸಂದರ್ಭಗಳಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ರೈತರು ಇತರೆ ವರ್ಗಗಳಿಗೆ ಇರುವ ನಿರ್ಬಂಧ ಸಡಿಲಿಸುವಂತೆ ಮನವಿ ಮಾಡುತ್ತಿದ್ದುದನ್ನು ಗಂಭೀರವಾಗಿ ಪರಿಗಣಿಸಿ ನಿಯಮ ಸಡಿಲಿಕೆ ಮಾಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕೇಂದ್ರ ಸರ್ಕಾರವು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಇದ್ದ 9 ಘಟಕಗಳನ್ನು ಸೇರ್ಪಡೆಗೊಳಿಸಿ ಪ್ರಧಾನಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಎಂದು ಮರು



ನಾಮಕರಣಗೊಳಿಸಿ ಅನುಷ್ಠಾನ ಮಾರ್ಗಸೂಚಿಗಳನ್ನು ಹೊರಡಿಸಿದೆ. ಇದರ ವ್ಯಾಪ್ತಿಗೆ ಒಳಪಡುವಂತೆ ರೈತರಿಗೆ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

2024–25ನೇ ಸಾಲಿನಲ್ಲಿ PMKSI ಮತ್ತು PMMS ಯೋಜನೆಯಡಿ ಸೂಕ್ಷ್ಮ ನೀರಾವರಿ ಯೋಜನೆಗೆ ರೂ.274 ಕೋಟಿ ಮೀಸಲಿರಿಸಲಾಗಿತ್ತು. ಇದರಿಂದ 2.60 ಲಕ್ಷ ರೈತರಿಗೆ ಇದರ ಅನುಕೂಲ ತಲುಪಲಿದೆ. ಹಾಗೆಯೇ ಟಾಪ್‌ಅಪ್ ಯೋಜನೆಯಡಿ ರೂ.252 ಕೋಟಿಗಳ ಅನುದಾನವನ್ನು ಸೂಕ್ಷ್ಮ ನೀರಾವರಿ ಸಾಧನ ಸಲಕರಣೆಗಳ ಆರ್ಥಿಕ ನೆರವಿಗಾಗಿ ನೀಡಲಾಗಿದೆ. ಬೆಂಗಳೂರಿನ 'ಕಾವೇರಿ ಹಾಸ್ಪಿಟಲ್ಸ್' ಕರ್ನಾಟಕದ 100 ರೈತರಿಗೆ ಉಚಿತ ರೊಬೊಟಿಕ್ ಮೊಣಕಾಲು ಕೀಲು ಕಸಿ ಶಸ್ತ್ರಚಿಕಿತ್ಸೆ ಒದಗಿಸುವ ಗುರಿಯೊಂದಿಗೆ ತನ್ನ ಮಹತ್ವಾಕಾಂಕ್ಷೆಯ ಉಪಕ್ರಮ 'ಕಾವೇರಿ ಸಂಕಲ್ಪ' ಪ್ರಾರಂಭಿಸುವುದಾಗಿ ಪ್ರಕಟಿಸಿದೆ. ಇದೊಂದು 'ರೊಬೊಟಿಕ್ ಆಧರಿತ ಜಂಟಿ ಭರವಸೆಯ ಕಾರ್ಯಕ್ರಮ'ವಾಗಿದೆ. ಇದರ ಅಡಿಯಲ್ಲಿ ಕರ್ನಾಟಕದಾದ್ಯಂತ ಆರ್ಥಿಕವಾಗಿ ಅರ್ಹ ರೈತರಿಗೆ 100 ಉಚಿತ ರೊಬೊಟಿಕ್ ಮೊಣಕಾಲು ಕೀಲು ಕಸಿ ಶಸ್ತ್ರಚಿಕಿತ್ಸೆಗಳನ್ನು ಒದಗಿಸುವ ಗುರಿಯನ್ನು ಹೊಂದಲಾಗಿದೆ.

# 40 ಕೋಟಿ ರೂ.ಗೂ ಹೆಚ್ಚು ಮೌಲ್ಯದ 49 ಕೆಜಿ ಕಳ್ಳಸಾಗಣೆ ಚಿನ್ನ ಮಾರಾಟಕ್ಕೆ ಸಹಾಯ: ಡಿಆರ್‌ಐ ವರದಿ

**ಬೆಂಗಳೂರು,ಏ.3–**ಪರಪ್ಪನ ಅಗ್ರಹಾರ ಜೈಲಿನಲ್ಲಿ ಸೆರೆಮನೆ ವಾಸ ಅನುಭವಿಸುತ್ತಿರುವ ಚಿನ್ನ ಕಳ್ಳಸಾಗಣೆ ಪ್ರಕರಣದ ಎ1 ಆರೋಪಿ ನಟಿ ರನ್ಯಾ ರಾವ್, ಗೋಲ್ಡ್ ಸ್ಮಗ್ಲಿಂಗ್ ಮಾಡುವುದರಲ್ಲಿ ಎಷ್ಟು ಬುದ್ಧಿವಂತಿಕೆ ಪ್ರದರ್ಶಿಸಿದ್ದಾರೆ ಎಂಬುದು ತನಿಖೆಯಲ್ಲಿ ಇಂಚಿಂಚಾಗಿ ಬಯಲಾಗುತ್ತಿದೆ.

ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ನಟಿಗೆ ದೊಡ್ಡ ಮಟ್ಟದಲ್ಲಿ ಸಹಾಯ ಮಾಡಿದ್ದ ಚಿನ್ನಾಭರಣ ವ್ಯಾಪಾರಿ ಸಾಹಿಲ್ ಸಕಾರಿಯಾ ಜೈನ್, ಡಿಆರ್‌ಐ ಕೈಗೊಂಡ ತನಿಖೆಯಲ್ಲಿ ಸ್ಫೋಟಕ ಸತ್ಯವನ್ನು ಬಾಯ್ಬಿಟ್ಟಿರು ವುದು ಇತ್ತೀಚಿನ ವರದಿಯಲ್ಲಿ ಸ್ಪಷ್ಟವಾಗಿದೆ. ಬಳ್ಳಾರಿ ಮೂಲದ ಸಾಹಿಲ್, ಈಗ ಬೆಂಗಳೂರಿನ ಕಬ್ಬನ್‌ಪೇಟೆಯಲ್ಲಿ ವಾಸವಿದ್ದಾನೆ. ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ರನ್ಯಾ ರಾವ್‌ಗೆ 40 ಕೋಟಿ ರೂ.ಗೂ ಹೆಚ್ಚು ಮೌಲ್ಯದ 49 ಕೆಜಿ ಕಳ್ಳಸಾಗಣೆ ಚಿನ್ನವನ್ನು ಮಾರಾಟ ಮಾಡಲು ಸಹಾಯ ಮಾಡಿರುವುದು ಡಿಆಐ ತನಿಖೆಯಲ್ಲಿ ಬಯಲಾಗಿದೆ. 2024ರ ನವೆಂಬರ್‌ನಲ್ಲಿ ರನ್ಯಾ ಜತೆಗೆ ಸಂಪರ್ಕಕ್ಕೆ ಬಂದ ಜೈನ್, ಕಳ್ಳಸಾಗಣೆ ಚಿನ್ನವನ್ನು ಮಾರಾಟ ಮಾಡಲು ಹೇಗೆ ಸಹಾಯ ಮಾಡಿದ ಎಂಬುದು ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯಕ್ಕೆ ಡಿಆರ್‌ಐ ಸಲ್ಲಿಸಿದ ರಿಮ್ಯಾಂಡ್



ಅರ್ಜಿಯಲ್ಲಿ ವಿವರಿಸಲಾಗಿದೆ.

ಮಾರ್ಚ್ 26ರಂದು ಬಂಧಿಸಲ್ಪಟ್ಟ ಜೈನ್‌ನನ್ನು ಏಳು ದಿನಗಳ ಪೊಲೀಸ್ ಕಸ್ಟಡಿ ಅವಧಿ ನಂತರ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು. ಕೋರ್ಟ್ ಅತನನ್ನು ಮತ್ತೆ ಏಳು ದಿನಗಳ ನ್ಯಾಯಾಂಗ ಬಂಧನಕ್ಕೆ ಒಳಪಡಿಸಿತು. ಇದರ ಬೆನ್ನಲ್ಲೇ ಆರೋಪಿಯನ್ನು ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸಲಾಯಿತು. ರನ್ಯಾ ರಾವ್, ತರುಣ್ ಕೊಂಡೂರು ರಾಜು ಬಳಿಕ ಈ ಪ್ರಕರಣದಲ್ಲಿ ಬಂಧಿಸಲ್ಪಟ್ಟ ಮೂರನೇ ಆರೋಪಿ ಸಾಹಿಲ್ ಎಂಬುದು ಗಮನಾರ್ಹ. ಕಳ್ಳಸಾಗಣೆ ಚಿನ್ನವನ್ನು ಮಾರಾಟ ಮಾಡುವಲ್ಲಿ ಮತ್ತು ಹವಾಲಾ ವಹಿವಾಟುಗಳನ್ನು ನಿರ್ವಹಿಸುವಲ್ಲಿ ಜೈನ್ ನಟಿಗೆ ದೊಡ್ಡ ಮಟ್ಟದ ಸಹಾಯ ಮಾಡಿದ್ದಾನೆ. ಈ ಪ್ರಕರಣದಲ್ಲಿ ಸಾಹಿಲ್ ಜೈನ್, ನಿರ್ಣಾಯಕ ಪಾತ್ರವನ್ನೇ ವಹಿಸಿರುವುದು ಬೆಳಕಿಗೆ ಬಂದಿದೆ.

# ಮೆಲ್ಬೋರ್ನ್ ಮೂಲದ ಆರ್‌ಎಂಐಟಿ ವಿಶ್ವವಿದ್ಯಾಲಯ: ಮರು–ಕೌಶಲ್ಯ ಮತ್ತು ಉನ್ನತೀಕರಣಕ್ಕೆ ಹೆಚ್ಚು ಆದ್ಯತೆ

**ಬೆಂಗಳೂರು, ಏ.4–** ಕರ್ನಾಟಕ ಕೌಶಲ್ಯ ಅಭಿವೃದ್ಧಿ ಇಲಾಖೆ ಮತ್ತು ಮೆಲ್ಬೋರ್ನ್ ಮೂಲದ ಆರ್‌ಎಂಐಟಿ ವಿಶ್ವವಿದ್ಯಾಲಯವು ರಾಜ್ಯದ ಕೌಶಲ್ಯಾಭಿವೃದ್ಧಿ ವಲಯದಲ್ಲಿ ವಿದ್ಯಾರ್ಥಿಗಳಿಗೆ ಮರು–ಕೌಶಲ್ಯ ಮತ್ತು ಉನ್ನತೀಕರಣಕ್ಕೆ ಹೆಚ್ಚು ಆದ್ಯತೆ ನೀಡಲು ಮುಂದಾಗಿವೆ.

ಈ ನಿಟ್ಟಿನಲ್ಲಿ ಕೆಲವು ಉಪಕ್ರಮಗಳನ್ನು ಜಾರಿಗೆ ತರುವ ಕುರಿತು ಸಮಾಲೋಚನೆ ನಡೆಸಲಾಗಿದೆ. ಉಪ ಕುಲಪತಿ ಮಿಶ್ ಈಸ್ಟ್ಮನ್ ನೇತೃತ್ವದ ಆರ್‌ಎಂಐಟಿ ವಿಶ್ವವಿದ್ಯಾಲಯದ ನಿಯೋಗವು ವೃತ್ತಿಪರ ಶಿಕ್ಷಣ ಕಾಲೇಜಿನ ನಿರ್ದೇಶಕ ಪ್ರಶೀಲ್ ಸಿಂಗ್; ವಿಕ್ಟೋರಿಯಾ ಸರ್ಕಾರದ (ಆಸ್ಟ್ರೇಲಿಯಾ) ವ್ಯವಸ್ಥಾಪಕ ಜಸ್ಟಿನ್ ಸ್ಮಿತ್ ಮತ್ತು ಪ್ರಾದೇಶಿಕ ನಿರ್ದೇಶಕಿ (ಶಿಕ್ಷಣ) ಆನಿ ಸಂತಾನ ಅವರೊಂದಿಗೆ ವಿಕಾಸಸೌಧದಲ್ಲಿ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ಚರ್ಚಿಸಿದರು. ಕೌಶಲ್ಯ ಅಭಿವೃದ್ಧಿಯಲ್ಲಿ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಸರ್ಕಾರದ ನಡುವಿನ ಸಹಯೋಗವನ್ನು ಬಲಪಡಿಸುವ ಬಗ್ಗೆ ಸುದೀರ್ಘವಾಗಿ ಸಮಾಲೋಚನೆ ನಡೆಸಲಾಯಿತು. ಕೌಶಲ್ಯ ಶಿಕ್ಷಣದಲ್ಲಿ ಕರ್ನಾಟಕ ಸರ್ಕಾರದ ಪ್ರಯತ್ನಗಳು ಉನ್ನತಮಟ್ಟದಲ್ಲಿವೆ ಎಂದು ಈಸ್ಟ್ಮನ್ ಶ್ಲಾಘಿಸಿದರು. ಇಲಾಖೆಯೊಂದಿಗೆ ದೀರ್ಘಕಾಲೀನ ಪಾಲುದಾರಿಕೆ ಹೊಂದಲು ಆರ್‌ಎಂಐಟಿ ಬದ್ಧವಾಗಿದೆ ಎಂದು ಹೇಳಿದರು. ಆರ್‌ಎಂಐಟಿ ಈಗಾಗಲೇ ಕೆಲವು ಭಾರತೀಯ



ವಿಶ್ವವಿದ್ಯಾಲಯಗಳೊಂದಿಗೆ ಸಹಯೋಗ ಹೊಂದಿದೆ ಮತ್ತು ಸಮಕಾಲೀನ, ಜಾಗತಿಕವಾಗಿ ಪ್ರಸ್ತುತವಾದ ಕೌಶಲ್ಯಾಭಿವೃದ್ಧಿ ಯೋಜನೆಗಳು, ತರಬೇತುದಾರರಿಗೆ ತರಬೇತಿ ನೀಡಲು ಉತ್ಸುಕವಾಗಿದೆ ಎಂದು ಈಸ್ಟ್ಮನ್ ಸ್ಪಷ್ಟಪಡಿಸಿದರು. "ಜಾಗತಿಕ ಮಾನದಂಡಗಳನ್ನು ಅಳವಡಿಸಲು, ತರಬೇತುದಾರರನ್ನು ಮೇಲ್ದರ್ಜೆಗೇರಿಸುವುದು ಕೌಶಲ್ಯ ಉದ್ಯಮಕ್ಕೆ ಗಮನಾರ್ಹ ಪ್ರಗತಿಗೆ ಕಾರಣವಾಗಲಿದೆ" ಎಂದು ಈಸ್ಟ್ಮನ್ ಹೇಳಿದರು.

ಕೌಶಲ್ಯ ಅಭಿವೃದ್ಧಿ ಇಲಾಖೆಯ ಅಡಿಯಲ್ಲಿ ಕೌಶಲ್ಯ ತರಬೇತುದಾರರಿಗೆ ತರಬೇತಿ ನೀಡುವಲ್ಲಿ ಪರಿಣತಿ ಹೊಂದಿರುವ ಚಿಕ್ಕಬಳ್ಳಾಪುರದಲ್ಲಿರುವ ಮೋಕ್ಷಗುಂಡಂ ವಿಶ್ವೇಶ್ವರಯ್ಯ ಸಂಸ್ಥೆಯ ಬಗ್ಗೆ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ವಿವರಿಸಿದರು. "ನಮ್ಮಲ್ಲಿ ಕೌಶಲ್ಯ ತರಬೇತುದಾರರಿಗೆ ತರಬೇತಿ ನೀಡುವ ಮಾಸ್ಟರ್ ತರಬೇತುದಾರರು ಇದ್ದಾರೆ ಮತ್ತು ಈಗ ಜಾಗತಿಕ ಮಾನದಂಡಗಳನ್ನು ಪೂರೈಸಲು ಮಾಸ್ಟರ್ ತರಬೇತುದಾರರ ಪರಿಣತಿಯನ್ನು ಮತ್ತಷ್ಟು ಹೆಚ್ಚಿಸಲು ಸೂಪರ್ ತರಬೇತುದಾರರನ್ನು ಕರೆತರುವತ್ತ ನಮ್ಮ ಆಲೋಚನೆ ಇದೆ" ಎಂದು ಅವರು ಹೇಳಿದರು.

ಆರೋಗ್ಯ ರಕ್ಷಣೆಯಲ್ಲಿ ಹೆಚ್ಚಿನ ಸಂಶೋಧನೆ ಮತ್ತು ತರಬೇತಿ, ನಾವೀನ್ಯತೆಯಲ್ಲಿ ಪರಿಣತಿಗೆ ಹೆಸರುವಾಸಿಯಾದ ಆರ್‌ಎಂಐಟಿ ವಿಶ್ವವಿದ್ಯಾಲಯವು ಕರ್ನಾಟಕದ ಕೌಶಲ್ಯ ಪರಿಸರ ವ್ಯವಸ್ಥೆಗೆ ಕೊಡುಗೆ ನೀಡಲು ಆಸಕ್ತಿ ವ್ಯಕ್ತಪಡಿಸಿದೆ. ಕರ್ನಾಟಕವು ನರ್ಸಿಂಗ್ ಮತ್ತು ಸಂಬಂಧಿತ ಆರೋಗ್ಯ ವಿಜ್ಞಾನ ವೃತ್ತಿಪರರ ವಿಶಾಲ ಗುಂಪನ್ನು ಹೊಂದಿದೆ ಮತ್ತು ಪಠ್ಯಕ್ರಮದ ಭಾಗವಾಗಿ ಅಂತರರಾಷ್ಟ್ರೀಯ ಸಂಸ್ಥೆಗಳಲ್ಲಿ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳಿಗೆ ವಿದ್ಯಾರ್ಥಿಗಳನ್ನು ಕಳುಹಿಸಲಾಗುತ್ತದೆ ಎಂದು ಡಾ. ಪಾಟೀಲ್ ಮಾಹಿತಿ ನೀಡಿದರು.

### ವಿದ್ಯುತ್ ದರ, ಡೀಸೆಲ್ ಬೆಲೆ ಏರಿಕೆ

# ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳು ಸಂಕಷ್ಟಕ್ಕೆ

**ಬೆಂಗಳೂರು,ಏ.3–**ವಿದ್ಯುತ್ ದರ ಏರಿಕೆ ನಡುವೆ ಡೀಸೆಲ್ ಬೆಲೆ ಏರಿಕೆ ಮಾಡಿರುವುದನ್ನು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ'(ಕಾಸಿಯಾ) ವಿರೋಧ ವ್ಯಕ್ತಪಡಿಸಿದೆ.

ಸರ್ಕಾರದ ಈ ಕ್ರಮವು ಸಣ್ಣ ಹಾಗು ಮಧ್ಯಮ ಕೈಗಾರಿಕೆಗಳನ್ನು ಸಂಕಷ್ಟಕ್ಕೆ ಸಿಲುಕುವಂತೆ ಮಾಡಲಿದೆ ಎಂದು ಕಾಸಿಯಾ ಅಧ್ಯಕ್ಷ ರಾಜಗೋಪಾಲ್ ಕಳವಳ ವ್ಯಕ್ತಪಡಿಸಿದ್ದಾರೆ.

ಸಣ್ಣ ಕೈಗಾರಿಕೆಗಳು, ಸಾರಿಗೆ, ಉತ್ಪಾದನೆ ವಲಯದಲ್ಲಿ ಹೆಚ್ಚಾಗಿ ಡೀಸೆಲ್ ಅವಲಂಬಿಸಿವೆ. ಡೀಸೆಲ್ ಬೆಲೆ 2 ರೂ ಏಕಾಏಕಿ ತೀವ್ರವಾಗಿ ಏರಿಕೆಯಾಗುತ್ತಿರುವುದರಿಂದ, ವ್ಯವಹಾರಗಳು, ಉತ್ಪಾದನಾ ವೆಚ್ಚವನ್ನು ನಿರ್ವಹಿಸುವುದು ಕಷ್ಟಕರವಾಗುತ್ತಿದೆ ಎಂದಿದ್ದಾರೆ.

ಅನೇಕ ಸಣ್ಣ ಉದ್ಯಮಗಳು ಸಣ್ಣ ಪ್ರಮಾಣದ ಲಾಭಾಂಶದಲ್ಲಿ ಕಾರ್ಯನಿರ್ವಹಿಸುತ್ತವೆ. ಹೆಚ್ಚುತ್ತಿರುವ ಇಂಧನ ವೆಚ್ಚಗಳು ಅವುಗಳ ಕಾರ್ಯಸಾಧ್ಯತೆಗೆ ಅಪಾಯವನ್ನುಂಟು ಮಾಡುತ್ತಿವೆ. ವಿದ್ಯುತ್ ಪೂರೈಕೆ ಸರಪಳಿ ಅಡಚಣೆಗಳು, ಹಣದುಬ್ಬರ ಒತ್ತಡಗಳು, ಹೆಚ್ಚುತ್ತಿರುವ ಕಚ್ಚಾವಸ್ತುಗಳ ವೆಚ್ಚಗಳಿಂದ ಪರಿಸ್ಥಿತಿ ಮತ್ತಷ್ಟು ಉಲ್ಬಣಗೊಂಡಿದೆ ಎಂದು ತಿಳಿಸಿದೆ.

ಸರ್ಕಾರವು ಸಬ್ಸಿಡಿ ಒದಗಿಸಬೇಕು,



ಅಬಕಾರಿ ಸುಂಕಗಳನ್ನು ಕಡಿಮೆ ಮಾಡಬೇಕು ಅಥವಾ ಇಂಧನ ಬೆಲೆಗಳ ಪರಿಣಾಮವನ್ನು ಕಡಿಮೆ ಮಾಡುವ ನೀತಿಗಳನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದೆ.

# ನಗರದಲ್ಲಿ ಮತ್ತೊಂದು ಅತ್ಯಾಚಾರ ಪ್ರಕರಣ ಬೆಳಕಿಗೆ

**ಬೆಂಗಳೂರು, ಏ.3–** ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬ ವಿರೋಧ ಪಕ್ಷದಗಳ ಆರೋಪದ ನಡುವೆಯೇ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಮತ್ತೊಂದು ಅತ್ಯಾಚಾರ ಪ್ರಕರಣ ವರದಿಯಾಗಿದೆ.

ತನ್ನ ಸಹೋದರನೊಂದಿಗೆ ತೆರಳುತ್ತಿದ್ದ ಯುವತಿಯೊಬ್ಬಳನ್ನು ಇಬ್ಬರು ದುಷ್ಕರ್ಮಿಗಳು ಎಳೆದೊಯ್ದು ಸಾಮೂಹಿಕ ಅತ್ಯಾಚಾರವೆಸಗಿರುವ ಘಟನೆ ಬುಧವಾರ ನಡೆದಿದೆ.

ಘಟನೆಗೆ ಸಂಬಂಧಿಸಿದಂತೆ ಮಹದೇವಪುರ ಠಾಣೆ ಪೊಲೀಸರು, ಇಬ್ಬರು ಆರೋಪಿಗಳಾದ ಆಸಿಫ್, ಸೈಯ್ಯದ್ ಎಂಬವರನ್ನು ಬಂಧಿಸಿದ್ದಾರೆ. ಬಿಹಾರದ ಬಾಕಾ ಜಿಲ್ಲೆ ಮೂಲದ ಯುವತಿ ಕಳೆದ ಒಂದು ತಿಂಗಳಿಂದ ಕೇರಳದಲ್ಲಿ ಕೆಲಸ ಮಾಡುತ್ತಿದ್ದರು. ಆದರೆ ಯುವತಿಗೆ ಕೆಲಸ ಇಷ್ಟವಾಗದ ಕಾರಣ ಊರಿಗೆ ವಾಪಸ್ ಹೋಗಲು ನಿರ್ಧರಿಸಿದ್ದರು ಎನ್ನಲಾಗಿದೆ. ಹೀಗಾಗಿ ಊರಿಗೆ ಹೋಗಲು ಕೇರಳದ ಎರ್ನಾಕುಲಂನಿಂದ ರೈಲು ಹತ್ತಿದ್ದ ಯುವತಿಯು ತನ್ನ ಸಹೋದರನಿಗೆ ಕರೆ ಮಾಡಿ ವಿಷಯ ತಿಳಿಸಿದ್ದಳು.

ಇದರಂತೆ ಬುಧವಾರ ಮಧ್ಯರಾತ್ರಿ 1 ಗಂಟೆ ಸುಮಾರಿಗೆ ನಗರದ ಕೆ.ಆರ್.ಪುರಂ ರೈಲು ನಿಲ್ದಾಣದಲ್ಲಿ ಯುವತಿ ಇಳಿದಿದ್ದಳು. ರೈಲ್ವೆ ನಿಲ್ದಾಣದಿಂದ ಸಹೋದರಿಯನ್ನು ಕರೆದುಕೊಂಡು ಬರುತ್ತಿದ್ದ ಸಹೋದರ ಊಟ ಮಾಡಲು ಮಹದೇವಪುರ ಕಡೆಗೆ ನಡೆದುಕೊಂಡು ಹೋಗುತ್ತಿದ್ದರು. ಈ ವೇಳೆ ದುಷ್ಕರ್ಮಿಗಳು ಅಣ್ಣ–ತಂಗಿಯನ್ನು ಅಡ್ಡಗಟ್ಟಿ, ಯುವತಿಯ ಸಹೋದರನ ಮೇಲೆ ಹಲ್ಲೆ ಮಾಡಿ, ಯುವತಿಯನ್ನು ಎಳೆದೊಯ್ದು ನಿರ್ಜನ ಪ್ರದೇಶದಲ್ಲಿ ಸಾಮೂಹಿಕ ಅತ್ಯಾಚಾರವೆಸಗಿದ್ದಾರೆ. ಈ ವೇಳೆ ಯುವತಿಯ ಶಬ್ದ ಕೇಳಿ ಸ್ಥಳಕ್ಕೆ ಧಾವಿಸಿದ ಸಾರ್ವಜನಿಕರು ಇಬ್ಬರನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಸಂತ್ರಸ್ತೆ ನೀಡಿದ ದೂರಿನ ಆಧಾರದ ಮೇಲೆ ಇಬ್ಬರು ಆರೋಪಿಗಳನ್ನು ಬಂಧಿಸಿ ವಿಚಾರಣೆಗೊಳಪಡಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿದೆ.



ಬೆಲೆ ಏರಿಕೆ ವಿರುದ್ಧ ರಾಜ್ಯ ಸರ್ಕಾರದ ವಿರುದ್ಧ ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿಪಿಐ(ಎಂ) ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

# ಬ್ರಿಮ್ಸ್ ಆಸ್ಪತ್ರೆಯಲ್ಲಿ ವಿಶೇಷ ಆಟಿಸಂ ಚಿಕಿತ್ಸಾ ವಿಭಾಗ ಸ್ಥಾಪಿಸಿ: ಖಂಡ್ರೆ

**ಬೀದರ್, ಏ.3–** ಬ್ರಿಮ್ಸ್ ಆಸ್ಪತ್ರೆಯಲ್ಲಿ ವಿಶೇಷ ಆಟಿಸಂ ಚಿಕಿತ್ಸಾ ವಿಭಾಗವನ್ನು ಆರಂಭಿಸಬೇಕು ಎಂದು ರಾಜ್ಯದ ಅರಣ್ಯ ಹಾಗೂ ಪರಿಸರ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರು ಸೂಚಿಸಿದರು.



ವಿಜಯದೇವಿ ಫೌಂಡೇಷನ್ ಅಡಿಯಲ್ಲಿ ನಡೆಯುತ್ತಿರುವ ಉಟಗೆ ನ್ಯೂರೋ ಮತ್ತು ಉಮಂಗ್ ವಿಶೇಷ ಶಾಲೇ ಹಾಗೂ ಐಎ ಫೌಂಡೇಷನ್ ಹಮ್ಮಿಕೊಂಡ ವಿಶ್ವ ಆರ್ಟಿಜಮ್ ದಿನಾಚರಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾತನಾಡಿದರು.

ವಿಜಯದೇವಿ ಫೌಂಡೇಶನ್ ಅಡಿಯಲ್ಲಿ ನಡೆಯುತ್ತಿರುವ ಉಟಗೆ ನ್ಯೂರೊ ಮತ್ತು ಉಮಂಗ್ ವಿಶೇಷ ಶಾಲೆ ಹಾಗೂ ಐಎ.. ಫೌಂಡೇಶನ್‌ನಿಂದ ಹಮ್ಮಿಕೊಂಡ ವಿಶ್ವ ಆರ್ಟಿಜಮ್ ದಿನಾಚರಣೆ ನಿಮಿತ್ಯ ಉಟಗೇ ಆಸ್ಪತ್ರೆಗೆ ಭೇಟಿ ನೀಡಿ, ಆಟಿಸಂ ಪೀಡಿತ ಮಕ್ಕಳೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿ, ಪೋಷಕರಿಗೆ ಧೈರ್ಯ ತುಂಬಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಆಟಿಸಂ ಪೀಡಿತ ಮಕ್ಕಳಿಗೆ ಉತ್ತಮ ಆರೋಗ್ಯ ಸೇವೆ ಹಾಗೂ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ, BRIMS ಆಸ್ಪತ್ರೆಯಲ್ಲಿ ವಿಶೇಷ ಆಟಿಸಂ ಚಿಕಿತ್ಸಾ ವಿಭಾಗ ಸ್ಥಾಪಿಸಬೇಕು ಎಂದರು.

ಆಟಿಸಂ ಪೀಡಿತ ಮಕ್ಕಳಿಗೆ ಉತ್ತಮ ಚಿಕಿತ್ಸೆ ಮತ್ತು ಸೇವೆ ಒದಗಿಸುತ್ತಿರುವ ಡಾ. ಪ್ರಶಾಂತ್ ಉಟಗೇ ಅವರ ಶ್ರಮ ಶ್ಲಾಘನೀಯವಾಗಿದೆ. ಆಟಿಸಂ ಪೀಡಿತ ಮಕ್ಕಳು ವಿಭಿನ್ನ ಪ್ರತಿಭೆಗಳನ್ನು ಹೊಂದಿದ್ದು, ಅವರ ಸಾಮರ್ಥ್ಯವನ್ನು ಬೆಳೆಸಿ, ಸಮಾಜದಲ್ಲಿ ಮುಂಚೂಣಿಗೆ ತರುವುದಕ್ಕೆ ಎಲ್ಲರೂ ಬೆಂಬಲಿಸಬೇಕು ಎಂದು ಅವರು ಕರೆ ನೀಡಿದರು ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು ಮತ್ತು ವಿಶೇಷ ಮಕ್ಕಳ ಜೊತೆ ಕೇಕ್ ಕತ್ತರಿಸುವ ಮೂಲಕ ಸಿಹಿಯನ್ನು ಹಂಚಲಾಯಿತು. ಆರ್ಟಿಜಮ್ ಮಕ್ಕಳ ಸೇವೆಯನ್ನು ಮಾಡುತ್ತಿರುವ ವೈದ್ಯಾಧಿಕಾರಿಗಳನ್ನು ಹಾಗೂ ಸಿಬ್ಬಂದಿ ವರ್ಗದವರು ವಿಶೇಷ ಮಕ್ಕಳ ಸೇವೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿ, ತಮ್ಮ ಕೈಲಾದ ಸಹಾಯವನ್ನು ಮಾಡುವಂತೆ ಮನವರಿಕೆ ಮಾಡಿ ಕೊಟ್ಟರು. ಮಕ್ಕಳ ಸಹಾಯ ಸೌಲಭ್ಯಗಳ ಕುರಿತು ಅಧಿಕಾರಿಗಳು ಮಾಹಿತಿ ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಡಾ. ಅಭಿಜಿತ್ ಅವರು ವಿಜಯದೇವಿ ಫೌಂಡೇಶನ್ ವತಿಯಿಂದ ವಿಶೇಷ ಮಕ್ಕಳಿಗೆ ವಾಲ್ಕರ್, ವ್ಹೀಲ್ ಚೇರ್, ಜಿಮ್ ಬಾಲ್, ವೇಟ್ ಕಪ್ ಹಾಗೂ ಮಾತ್ರೆಗಳನ್ನು ವಿತರಿಸಿದರು. ಅತಿಥಿಗಳಾಗಿದ್ದ ಡಾ. ಪ್ರಶಾಂತ್ ಊಟಗೆ ಅವರು ಮಾತನಾಡಿ, ಮಕ್ಕಳನ್ನು ಕುರಿತು ಪಾಲಕರು ಮಕ್ಕಳಿಗೆ ಶಾಪ ಎಂದು ತಿಳಿಯದೇ, ದೇವರ ಕೊಟ್ಟ ವರ ಎಂದು ತಿಳಿದುಕೊಳ್ಳಬೇಕೆಂದು ಹಾಗೂ ಮಕ್ಕಳಿಗೆ ಸಂಬಂಧಪಟ್ಟ ವ್ಯವಸ್ಥೆಯನ್ನು ಕಲ್ಪಿಸಿಕೊಡುವಂತೆ ಕಿವಿಮಾತು ಹೇಳಿದರು.

# ಆದ್ಯ ವಚನಕಾರ ದೇವರ ದಾಸಿಮಯ್ಯ ಸಾಮಾಜಿಕ ಸೇವೆ ಅವಿಸ್ಮರಣೆ: ತಿಪ್ಪಣ್ಣಪ್ಪ


ಕಲಬುರಗಿ ನಗರದ ಮಕ್ತಂಪುರ ಬಡಾವಣೆಯ ಭಗವಾನ ಶ್ರೀ ಜಹ್ವೇಶ್ವರ ಸಭಾಗೃಹದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ ಕಲಬುರಗಿ ಇವರುಗಳು ಸಂಯುಕ್ತಾಶ್ರಯದಲ್ಲಿ ದೇವರ ದಾಸಿಮಯ್ಯ ಜಯಂತಿ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಉದ್ಘಾಟಿಸಿ ಮಾತನಾಡಿದರು.

**ಕಲಬುರಗಿ, ಏ.3–** ಆದ್ಯ ವಚನಕಾರರೆಂದೇ ಖ್ಯಾತಿ ಪಡೆದಿರುವ ದೇವರ ದಾಸಿಮಯ್ಯನವರ ಸಾಮಾಜಿಕ ಸೇವೆ ಅವಿಸ್ಮರಣೀಯ. ಇಂತಹ ಶ್ರೇಷ್ಠ ವಚನಕಾರರು ತಮ್ಮ ವಚನಗಳ ಮೂಲಕ ನೀಡಿರುವ ಸಂದೇಶಗಳನ್ನು ಪ್ರತಿಯೊಬ್ಬರು ಅರ್ಥ ಮಾಡಿಕೊಂಡು ಅನುಸರಿಸಬೇಕು ಎಂದು ವಿಧಾನ ಪರಿಷತ್ ಸದಸ್ಯರಾದ ತಿಪ್ಪಣಪ್ಪ ಕಮಕನೂರ ಹೇಳಿದರು.

ಕಲಬುರಗಿ ನಗರದ ಮಕ್ತಂಪುರ ಬಡಾವಣೆಯ ಭಗವಾನ ಶ್ರೀ ಜಹ್ವೇಶ್ವರ ಸಭಾಗೃಹದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ ಕಲಬುರಗಿ ಇವರುಗಳು ಸಂಯುಕ್ತಾಶ್ರಯದಲ್ಲಿ ಶ್ರೀ ದೇವರ ದಾಸಿಮಯ್ಯ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದರು. ಇಳೆ ನಿಮ್ಮ ದಾನ ಬೆಳೆ ನಿಮ್ಮ ದಾನ ಸುಳಿದು ಬೀಸುವ ಗಾಳಿ ಅದು ನಿಮ್ಮ ದಾನ ನಿಮ್ಮ ದಾನವನುಂಡು ಅನ್ಯರ ಹೊಗಳುವ ಕುನ್ನಿಗಳನೇನೆಂಬೆ ರಾಮನಾಥ ಇಂತಹ ಕಠೋರ ವಚನಗಳ ಮುಖಾಂತರ ಜನರನ್ನು ಜಾಗೃತರನ್ನಾಗಿ ಮಾಡುವುದರ ಮುಖಾಂತರ ಸಮಾಜದಲ್ಲಿ ಸರ್ವರು ಸಾಮಾನರು ಮಹಾನ ವ್ಯಕ್ತಿ ನೇಕಾರ ಸಮಾಜ ಎಲ್ಲರೂ ಒಗ್ಗೂಟಿನಿಂದ ಕಾರ್ಯಮಾಡಿದರೆ ಮಾತ್ರ ಇಂಥಹ ಕಾರ್ಯಕ್ರಮ ಯಶಸ್ವಿಗೊಳ್ಳಲು ಸಾಧ್ಯವಿದೆ ಎಂದು ಹೇಳಿದರು.

ನೇಕಾರರ ಸಮುದಾಯದ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಬೇಕೆಂದು ಸಮಾಜದ ಮುಖಂಡರ ಬೇಡಿಕೆಯಿದ್ದು ಮುಖ್ಯಮಂತ್ರಿಯೊಂದಿಗೆ ಚರ್ಚಿಸಿ ಅಭಿವೃದ್ಧಿ ನಿಗಮ ಸ್ಥಾಪಿಸಿ ಅದಕ್ಕೆ ಸರ್ಕಾರದಿಂದ ಅನುದಾನ ಬರುವಂತೆ ಮಾಡಲು ಪ್ರಮಾಣಿಕ ಪ್ರಯತ್ನ ಮಾಡುತ್ತೇನೆ ಅದಕ್ಕೆ ಸಮಾಜದ ಎಲ್ಲ ಮುಖಂಡರು ಸಹಕಾರ ನೀಡಬೇಕೆಂದು ತಿಳಿಸಿದರು.

ಡಬರಾಬಾದ ಸಿಂಧಗಿ ಮಠದ ಪೀಠಾಧಿಪತಿಯಾದ ಅಭಿನವ ರೇವಣಸಿದ್ಧ ಪಟ್ಟದೇವರು ಸಾನಿಧ್ಯ ವಹಿಸಿದ್ದರು. ಜಿಲ್ಲಾ ನೇಕಾರರ ಸಮುದಾಯದ ಒಕ್ಕೂಟದ ಅಧ್ಯಕ್ಷ ಪ್ರದೀಪ ಗಣೇಶ್ ಸಂಗಾವಿ ಪ್ರಸ್ತಾವಿಕವಾಗಿ ಮಾತನಾಡಿದರು. ಕನ್ನಡ ಉಪನ್ಯಾಸಕಿ ಸರ್ಕಾರಿ ಪದವಿ ಪೂರ್ವ ಕಾಲೇಜನ ಡಾ. ಶೈಲಜಾ ಎನ್. ಭಾಗೇವಾಡಿ ಮಾತನಾಡಿ, ವಚನ ಸಾಹಿತ್ಯ ಹರಿಕಾರ ಜಗತ್ತಿನಲ್ಲಿ ಮೊದಲ ಬಾರಿಗೆ ಮಹಿಳಾ ಸಮನತೆ ಸಾರಿದ ಮಹಾನ ವ್ಯಕ್ತಿ ಪ್ರಜಾಪ್ರಭುತ್ವದ ಪರಿಕಲ್ಪನೆ ನೀಡಿದರು ಮೇಲ್ವವರ್ಗ ಕೆಳವರ್ಗ ಎಂಬ ಬೇದಭಾವ ಇಲ್ಲದೆ ಸಮ ಸಮಾಜದ ಕನಸು ಕಂಡವರು ತಮ್ಮ ಕಾಯಕದ ಮುಖಾಂತರ ಸಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡವರು ದೇವರ ದಾಸಿಮಯ್ಯ ಕುರಿತು ವಿಶೇಷ ಉಪನ್ಯಾಸ ನೀಡಿದರು.

### ಬೆಲೆ ಏರಿಕೆಯನ್ನು ಖಂಡಿಸಿ ಯಡಿಯೂರಪ್ಪ, ವಿಜಯೇಂದ್ರ ಅಹೋರಾತ್ರಿ ಧರಣಿ ಹಿನ್ನೆಲೆ

# ಧರಣಿ–ಹೋರಾಟದ ಬಗ್ಗೆ ಯತ್ನಾಳ್ ಲೇವಡಿ



**ವಿಜಯಪುರ, ಏ.3–** ರಾಜ್ಯ ಕಾಂಗ್ರೆಸ್ ಸರ್ಕಾರದ ವಿವಿಧ ಮಾದರಿ ಬೆಲೆ ಏರಿಕೆಯನ್ನು ಖಂಡಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಿಎಂ ಯಡಿಯೂರಪ್ಪ ನೇತೃತ್ವದ ಅಹೋರಾತ್ರಿ ಧರಣಿ ಹೋರಾಟದ ಬಗ್ಗೆ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಖಾರವಾಗಿ ಟೀಕಿಸಿದ್ದಾರೆ.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯುತ್ತಿರುವ ಬಿಜೆಪಿಯ ಅಹೋರಾತ್ರಿ ಧರಣಿ, ಪ್ರತಿಭಟನೆ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯದ ಉದ್ದಗಲಕ್ಕೂ ಹೋರಾಟ ಮಾಡುತ್ತೇವೆ ಅಂತಾ ಹೇಳುತ್ತಿದ್ದಾರೆ. ದೊಡ್ಡದಾಗಿ ಅಹೋರಾತ್ರಿ ಧರಣಿ ಮಾಡುತ್ತಿದ್ದಾರೆ. ಐಷಾರಾಮಿ ಗಾದಿ, ಎಸಿ ಹಾಕಿಕೊಂಡು ಮಲ್ಕೊಂಡು ಧರಣಿ ಮಾಡುತ್ತಿದ್ದಾರೆ. ಮಾಧ್ಯಮ ದವರು ಅದನ್ನೂ ತೋರಿಸಬೇಕು. ಅವರು ಪಿಕ್ನಿಕ್ಗೆ ಬಂದಂತಿದೆ. ಇದು ಅವರ ಹೋರಾಟವೋ ಇಲ್ಲ ಅಂತಿಮ ಯಾತ್ರೆಯೋ ಎಂದು ಯತ್ನಾಳ್ ಲೇವಡಿ ಮಾಡಿದ್ದಾರೆ.

ಉಚ್ಚಾಟನೆ ಬಳಿಕ ಸರ್ಕಾರಕ್ಕಿಂತಲೂ ಬಿಜೆಪಿ, ಯಡಿಯೂರಪ್ಪ, ವಿಜಯೇಂದ್ರ ವಿರುದ್ಧ ಸಿಕ್ಸ್, ಫೋರ್ ಬಾರಿಸುತ್ತಿರುವ ಯತ್ನಾಳ್, ಭ್ರಷ್ಟಾಚಾರ, ಕೋವಿಡ್ ಸಂದರ್ಭದಲ್ಲಿ ದುಡ್ಡು ಹೊಡೆದವರು ಅಪ್ಪ–ಮಕ್ಕಳು. ಇವರಿಗೆ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಲು ಯಾವ ನೈತಿಕತೆಯೂ ಇಲ್ಲ ಎಂದು ಯತ್ನಾಳ್ ತಿವಿದಿದ್ದಾರೆ.

### ಜಾಗ ಕಬಳಿಸಲು ಮುಸ್ಲಿಮರ ಯತ್ನ

# ದಾಖಲೆ ಪರಿಶೀಲಿಸಲು ಆಯುಕ್ತರಿಗೆ ಕೆ.ಎಸ್.ಈಶ್ವರಪ್ಪ ಒತ್ತಾಯ



**ಶಿವಮೊಗ್ಗ, ಏ.3–** ಶಿವಮೊಗ್ಗದ ಜಿಲ್ಲಾಧಿಕಾರಿ ಕಚೇರಿ ಎದುರಿರುವ ಜಾಗವನ್ನು ಇಲ್ಲಿಯವರೆಗೆ ಈದ್ಗಾ ಮೈದಾನ ಎನ್ನುತ್ತಿದ್ದರು. ಈಗ ಅದು ಆಟದ ಮೈದಾನ. ಈ ಜಾಗ ಕಬಳಿಸಲು ಮುಸ್ಲಿಂಮರು ಯತ್ನಿಸುತ್ತಿದ್ದಾರೆ. ಡಿಸಿ, ಎಸ್ಪಿಯವರು ಮಹಾನಗರ ಪಾಲಿಕೆ ಆಯುಕ್ತರು ಸರಿಯಾಗಿ ಹೆಜ್ಜೆ ಇಡಬೇಕು ಎಂದು ಮಾಜಿ ಡಿಸಿಎಂ ಕೆ.ಎಸ್ ಈಶ್ವರಪ್ಪ ಒತ್ತಾಯಿಸಿದ್ದಾರೆ.

ಸುದ್ದಿಗಾರರೊಂದಿಗೆ, ನಗರಾಬಿವೃದ್ಧಿ ಪ್ರಾಧಿಕಾರದ ಮ್ಯಾಪ್ ನಲ್ಲಿ ಇದು ನಮೂದಾಗಿದೆ. ಮುಸ್ಲಿಮರು ನಮಾಜ್ ಮಾಡಲು ಬಳಸುತ್ತಿದ್ದೇವೆ ಎನ್ನುತ್ತಿದ್ದಾರೆ. ಅನೇಕ ವರ್ಷಗಳಿಂದ ಹೇಗೆಗೋ ಅವರ ವಶಕ್ಕೆ ಇಟ್ಟುಕೊಂಡಿದ್ದಾರೆ. ಡಿಸಿ ಅವರು ತುರ್ತಾಗಿ ದಾಖಲೆ ಗಮನಿಸಿ ತೆರವುಗೊಳಿಸಬೇಕು. ಖಾತೆ ಇದೆ ಎಂದು ಮುಸ್ಲಿಮರು ಹೇಳುತ್ತಿದ್ದಾರೆ. ಮಹಾವೀರ ವೃತ್ತದ ಬಳಿ ಇರುವ ಜಾಗವನ್ನು ಸೇರಿಸಿ ಕೊಂಡು ಒತ್ತುವರಿ ಮಾಡುತ್ತಿದ್ದಾರೆ. ಬಂಡತನದಲ್ಲಿ ಈ ಜಾಗ ನಮ್ಮದು ಎಂದು ಹೇಳುತ್ತಿದ್ದಾರೆ. ಗೆಜೆಟ್ ನೋಟಿಫಿಕೇಷನ್‌ನಲ್ಲಿ ಈದ್ಗಾ ಸುನ್ನಿ ಜಾಗ ಎಂದಿಲ್ಲ. ಖಾತೆ ಆಗಿದೆ ಎನ್ನುತ್ತಿರುವುದು ಕಾನೂನು ಬಾಹಿರ. ಖಾತೆಯನ್ನು ಮಾಡಿಕೊಟ್ಟಿರುದೇ ಕಾನೂನು ಬಾಹಿರವಾಗಿದೆ ಎಂದು ಹೇಳಿದರು.

ಇನ್ನು ಮುಂದೆ ಈದ್ಗಾ ಮೈದಾನ ಎಂದು ಕರೆಯಬೇಡಿ. ಇದನ್ನು ಆಟದ ಮೈದಾನ ಎಂದು ಕರೆಯಬೇಕು. ಮುಸ್ಲಿಂ ನಾಯಕರು ತಮ್ಮದೇ ಆಸ್ತಿ ಎಂದು ಹೋಗಿ ಬೇಲಿ ಹಾಕಿದ್ದಾರೆ. ರೈಲ್ವೆ ಹಳಿ ಬಳಸಿ ಬೇಲಿ ಹಾಕಿದ್ದಾರೆ ಕೂಡಲೇ ಪ್ರಕರಣ ದಾಖಲಿಸಿಕೊಳ್ಳಬೇಕು. ರೈಲ್ವೆ ಕಂಬಿ ಬಳಿಸಿ ಬೇಲಿ ಹಾಕಿದ್ದವರನ್ನು ಕೂಡಲೇ ಬಂಧಿಸಬೇಕು. ಮುಸ್ಲಿಮರ ಜಾಗವೇ ಅಲ್ಲ, ಅದು ದಾದಾಗಿರಿಯಿಂದ ಮಾಡಿಕೊಂಡು ಬಂದಿದ್ದಾರೆ. ದಾಖಲೆ ಪರಿಶೀಲನೆ ನಡೆಸಿ ಕೂಡಲೇ ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ಏ.5ರಂದು ಬೆಳಗ್ಗೆ 10–30ಕ್ಕೆ ಬೃಹತ್ ಹೋರಾಟ ಮಾಡುತ್ತಿದ್ದೇವೆ. ಪಾಲಿಕೆ ಜಾಗವನ್ನು ಪಾಲಿಕೆ ಜಾಗವಾಗಿಯೇ ಉಳಿಸಬೇಕು. ಡಿಸಿ ಕಚೇರಿ ಮುಂದೆ ಹೋರಾಟ ಹಮ್ಮಿಕೊಂಡಿದ್ದೇವೆ. ಈಗ ಇರುವ ಖಾತೆ ಸಹ ಕಾನೂನು ಬಾಹಿರವಾಗಿದೆ. ಅಧಿಕಾರಿಗಳು ನೋಡಿಕೊಂಡು ಹೆಜ್ಜೆ ಇಡಬೇಕು ಯಾರ ಪ್ರಭಾವಕ್ಕೂ ಒಳಗಾಗಬಾರದು ಎಂದರು.

ವಿಧಾನಸೌಧವನ್ನೇ ಬಿಡುತ್ತಿಲ್ಲ, ಇನ್ನು ಡಿಸಿ ಕಚೇರಿಯ ಮುಂದಿನ ಜಾಗ ಬಿಡುತ್ತಾರಾ? ಈ ಜಾಗ ನಮ್ಮದೇ ಎಂದು ಬೇಲಿ ಹಾಕಿದ್ದಾರೆ ಅವರಿಗೆ ಅಭಿನಂಧನೆ ಸಲ್ಲಿಸುತ್ತೇನೆ. ಬೇಲಿ ಹಾಕಿದ್ದಕ್ಕೆ ಜಾಗದ ವಿಷಯ ಮುನ್ನೆಲೆಗೆ ಬಂದಿದೆ. ನಮ್ಮ ಬಳಿ ಸಾಕಷ್ಟು ದಾಖಲೆಗಳಿವೆ, ಇದನ್ನು ಗಮನಿಸಿ ಡಿಸಿ ಅವರು ಹೆಜ್ಜೆ ಇಡಬೇಕು. ಪೌರ ಕಾರ್ಮಿಕರನ್ನು ತೆಗೆದು ಬಿಡುತ್ತೇವೆ, ಮುಸ್ಲಿಮರು ಸ್ವಚ್ಚತೆ ಮಾಡಿಕೊಂಡು ಹೋಗಲಿ. ಬ್ರಹ್ಮ ಬಂದರೂ ಈದ್ಗಾ ಜಾಗ ಮುಸ್ಲಿಮರಿಗೆ ಹೋಗಲ್ಲ. ನಾವು ಅನ್ವರ್ ಮಾನಾಪಾಡಿ ನೇತೃತ್ವದಲ್ಲಿ ಒಂದು ಸಮಿತಿ ರಚಿಸಿದ್ದೆವು. ನೂರಾರು ಎಕರೆ ಜಾಗವನ್ನು ಕಾಂಗ್ರೆಸ್ ನಾಯಕರು ಲೂಟಿ ಹೊಡೆದಿದ್ದಾರೆ. ಸಾರ್ವಜನಿಕ ಆಸ್ತಿಗಾಗಿ ನಾವು ಹೋರಾಟ ಮಾಡುತ್ತೇವೆ ಎಂದು ಈಶ್ವರಪ್ಪ ಹೇಳಿದರು.

### ವಿಚಾರಣೆ ವೇಳೆ ಪೊಲೀಸರಿಂದ ಹಲ್ಲೆ ಆರೋಪ - ವ್ಯಕ್ತಿ ಮೃತ್ಯು

## ಎಸ್‌ಪಿ ಕಚೇರಿ ಮುಂದೆ ಶಾಸಕರ ಪ್ರತಿಭಟನೆ: ಇಬ್ಬರು ಪೊಲೀಸರ ಅಮಾನತು

**ರಾಯಚೂರು, ಏ.4–** ಪೊಲೀಸರ ಥಳಿತದಿಂದ ಯುವಕನ ಸಾವು ಪ್ರಕರಣಕ್ಕೆ ಸಂಬಂಧಪಟ್ಟಂತೆ ರಾಯಚೂರಿನ ಎಸ್‌ಪಿ ಕಚೇರಿ ಮುಂದೆ ಶಾಸಕ ಡಾ.ಶಿವರಾಜ್ ಪಾಟೀಲ್ ನೇತೃತ್ವದಲ್ಲಿ ಕಳೆದ ದಿನ ರಾತ್ರಿ ಪ್ರತಿಭಟನೆ ಮಾಡಲಾಗಿದ್ದು, ಪಶ್ಚಿಮ ಠಾಣೆ ಪೊಲೀಸರ ವಿರುದ್ಧ ಪ್ರಕರಣ ದಾಖಲಿಸಲು ಒತ್ತಾಯ ಹೇರಲಾಗಿದೆ.

ಸೂಕ್ತ ಕ್ರಮದ ಭರವಸೆ ನೀಡಿದ ಹಿನ್ನೆಲೆಯಲ್ಲಿ ಶಾಸಕರು ಹೋರಾಟ ಕೈ ಬಿಟ್ಟಿದ್ದಾರೆ. ಜೊತೆಗೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಕೆಲ ಪೊಲೀಸರನ್ನು ಅಮಾನತ್ತು ಮಾಡಲಾಗಿದೆ. ಹೌದು ಕೌಟುಂಬಿಕ ಕಲಹ ಕಾರಣಕ್ಕೆ ಪತ್ನಿ ಮತ್ತು ಪತ್ನಿ ಮನೆಯವರ ಯುವಕ ವೀರೇಶ್ ವಿರುದ್ಧ ದೂರು ನೀಡಿದ್ದರು. ದೂರಿನ ಮೇರೆಗೆ ಯುವಕನ ವಿಚಾರಣೆಗೆ ಪೊಲೀಸರು ಠಾಣೆಗೆ ಕರೆದೊಯ್ದಿದ್ದರು. ವಿಚಾರಣೆ ವೇಳೆ ಯುವಕ ವೀರೇಶ್‌ನನ್ನು ಚೆನ್ನಾಗಿ ಥಳಿಸಿದ ಆರೋಪ ಮಾಡಲಾಗಿದೆ. ಈ ವೇಳೆ ಯುವಕ ಸಾವನ್ನಪ್ಪಿದ್ದಾನೆ. ಪೊಲೀಸರ ಥಳಿತದಿಂದಲೇ ಯುವಕ ವೀರೇಶ್ ಸಾವನ್ನಪ್ಪಿದ್ದಾರೆ ಲಾಕ್ ಅಪ್ ಡೆತ್ ಆಗಿದೆ. ಇದೊಂದು ಕೊಲೆ ಎಂದು ಆಕ್ರೋಶ ಹೊರಹಾಕಲಾಗಿದೆ. ಠಾಣೆಯಿಂದ ಮನೆಗೆ ಬಂದು ಆಸ್ಪತ್ರೆಗೆ ತೆರಳಿದ್ದಾಗ ವೀರೇಶ್ ಸಾವನ್ನಪ್ಪಿದ್ದಾರೆ. ಹೀಗಾಗಿ ಇದೊಂದು ಕೊಲೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಪೊಲೀಸರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಶಾಸಕರು ಪ್ರತಿಭಟನೆ ಮಾಡಿದ್ದಾರೆ. ಶಾಸಕರ ಬೆಂಬಲಿಗರು ಹಾಗೂ ಕುಟುಂಬಸ್ಥರು ಪೊಲೀಸ್ ಠಾಣೆಯ ಮುಂದೆ ಜಮಾಯಿಸಿ ಪ್ರತಿಭಟನೆ ಮಾಡಿದ್ದಾರೆ. ಇನ್ನೂ ಇಂದು ಯುವಕನ ಪೋಸ್ಟ್ ಮಾರ್ಟಮ್ ವರದಿಯಲ್ಲಿ ಎಲ್ಲಾ ಬಯಲಾಗಲಿದೆ. ರಾಯಚೂರು ಶಾಸಕ ಡಾ.ಶಿವರಾಜ್ ಪಾಟೀಲ್, ಇಂದು ನಡೆದ ಘಟನೆಗೆ ಸಂಬಂಧಪಟ್ಟಂತೆ ಸೂಕ್ತ ಕ್ರಮದ ಭರವಸೆಯನ್ನು ನೀಡಿದ್ದಾರೆ. ಆ ಯುವಕನ ಮಕ್ಕಳು ತುಂಬಾ ಚಿಕ್ಕ ಮಕ್ಕಳು. ಆ ಮಕ್ಕಳಿಗೆ ಮುಂದೆ ಉದ್ಯೋಗ ನೀಡುವ ಭರವಸೆ ನೀಡಬೇಕು. ಜೊತೆಗೆ ಅವರಿಗೆ ಆರ್ಥಿಕ ಸಹಾಯ ಮಾಡಬೇಕೆಂದು ನಾವು ಮನವಿ ಮಾಡಿದ್ದೇವೆ. ನಾವೂ ಕೂಡ ಪರಿಹಾರ ನೀಡುವಂತಹ ಕೆಲಸ ಮಾಡುತ್ತೇವೆ. ನಾನು ಒಬ್ಬ ವೈದ್ಯನಾಗಿ ಆ ಪೋಸ್ಟ್ ಮಾರ್ಟಮ್‌ನಲ್ಲಿ ಭಾಗವಹಿಸುತ್ತೇನೆ. ಮಧ್ಯಾಹ್ನದ ವೇಳೆಗೆ ಎಲ್ಲಾ ವರದಿ ಬರಲಿದೆ ಎಂದಿದ್ದಾರೆ.

# ನಾಡಬಾಂಬ್ ಸ್ಫೋಟ: ನಾಯಿ ಸಾವು

**ಹಾವೇರಿ, ಏ.3–** ಹಾವೇರಿಯಲ್ಲಿ ನಾಡ ಬಾಂಬ್ ಸ್ಫೋಟಗೊಂಡು ನಾಯಿ ಸಾವನ್ನಪ್ಪಿರುವ ಘಟನೆ ಹಾವೇರಿ ಜಿಲ್ಲೆಯ ಸವಣೂರು ತಾಲೂಕಿನ ಜಲ್ಲಾಪುರ ಗ್ರಾಮದಲ್ಲಿ ನಡೆದಿದೆ.

ನಾಡಬಾಂಬ್ ಸ್ಫೋಟಗೊಂಡು ನಾಯಿ ಸಾವನಪ್ಪಿದೆ. ಗ್ರಾಮದ ಮಲ್ಲಿಕಾರ್ಜುನ ಗೌಡಗೆ ಸೇರಿದ ಜಮೀನಿನಲ್ಲಿ ನಾಡ ಬಾಂಬ್ ಪತ್ತೆಯಾಗಿದೆ. ಪ್ರಾಣಿಗಳನ್ನು ಬೇಟೆ ಆಡುವ ಉದ್ದೇಶದಿಂದ ನಾಡ ಬಾಂಬ್ ಇಟ್ಟಿರುವ ಬಗ್ಗೆ ಅನುಮಾನ ವ್ಯಕ್ತವಾಗಿದ್ದು, ಒಟ್ಟು 3 ನಾಡ ಬಾಂಬ್‌ಗಳನ್ನು ದುಷ್ಕರ್ಮಿಗಳು ಪ್ರಾಣಿಗಳ ಬೇಟೆಗೆ ಇಟ್ಟಿದ್ದರು ಎನ್ನಲಾಗಿದೆ. ಒಂದು ನಾಡ ಬಾಂಬ್ ನಾಯಿ ಕಚ್ಚಿದ್ದರಿಂದ ಸ್ಫೋಟಗೊಂಡು ನಾಯಿ ಸಾವನಪ್ಪಿದೆ. ಇನ್ನುಳಿದ ಎರಡು ಜೀವಂತ ನಾಡ ಬಾಂಬ್‌ಗಳನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಘಟನಾ ಸ್ಥಳಕ್ಕೆ ಬಾಂಬ್ ನಿಷ್ಕ್ರಿಯದಳ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದೆ. ಘಟನೆ ಕುರಿತಂತೆ ಸವಣೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಕೌಟುಂಬಿಕ ಕಲಹ-ಸಾಮೂಹಿಕ ಕೊಲೆ

# ಪತ್ನಿ, ಇಬ್ಬರು ಮಕ್ಕಳನ್ನು ಕೊಲೆಗೈದು ಪತಿ ಜೆಸ್ಕಾಂ ಅಧಿಕಾರಿ ಆತ್ಮಹತ್ಯೆ



**ಕಲಬುರಗಿ, ಏ.3–** ರಾಜ್ಯದಲ್ಲಿ ಮತ್ತೊಂದು ಘೋರ ಘಟನೆ ನಡೆದಿದ್ದು, ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಕೊಂದ ಜೆಸ್ಕಾಂ ಅಧಿಕಾರಿ ತಾನೂ ಆತ್ಮಹತ್ಯೆ ಮಾಡಿಕೊಂಡ ಘಟನೆ ನಗರದ ಹಳೆ ಜೇವರ್ಗಿ ರಸ್ತೆಯ ಗಾಬರಿ ಲೇಔಟ್ ಅಪಾರ್ಟ್ಮೆಂಟ್‌ನಲ್ಲಿ ನಡೆದಿದೆ.

ಪತ್ನಿ ಶ್ರುತಿ (35) ಮಕ್ಕಳಾದ ಮನೀಶ್ (9), ಮೂರು ತಿಂಗಳ ಮಗು ಅನೀಶ್‌ನನ್ನು ಕೊಲೆ ಮಾಡಿ ಸಂತೋಷ್ (45) ತಾನೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಸಂತೋಷ್ ಜೆಸ್ಕಾಂ ವಿದ್ಯುತ್ ನಿಗಮದಲ್ಲಿ ಹಿರಿಯ ಸಹಾಯಕ ಲೆಕ್ಕಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಎಂದು ಹೇಳಲಾಗಿದೆ.

ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಪತ್ನಿ, ಮಕ್ಕಳನ್ನು ಕತ್ತು ಹಿಸುಕಿ ಕೊಲೆ ಮಾಡಿ ಬಳಿಕ ಸಂತೋಷ್ ತಾನೂ ನೇಣು ಹಾಕಿ ಆತ್ಮಹತ್ಯೆ ಮಾಡಿ ಕೊಂಡಿದ್ದಾನೆ ಎಂದು ಶಂಕಿಸಲಾಗಿದೆ. ಆತ್ಮಹತ್ಯೆಗೂ ಮುನ್ನ ಸಂತೋಷ್ ಡೆತ್ ನೋಟ್ ಕೂಡ ಬರೆದಿಟ್ಟಿದ್ದಾರೆ ಎಂದು ಹೇಳಲಾಗಿದ್ದು, ಸ್ಥಳಕ್ಕೆ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಕಲಬುರಗಿ ಸ್ಟೇಷನ್ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

### ಹಣ ದ್ವಿಗುಣಗೊಳಿಸುವುದಾಗಿ ವಂಚನೆ, ವಿಶ್ವನಾಥ್ ಮೇಲೆ ಎಫ್‌ಐಆರ್

# ಸೈಬರ್ ಕ್ರೈಂ ಅಧಿಕಾರಿಗಳದಾಳಿ, 19.38 ಲಕ್ಷ ನಗದು, ಕೆಲ ರಶೀದಿ ಪುಸ್ತಕಗಳು,ಯಂತ್ರೋಪಕರಣಗಳು ವಶ




**ಬಳ್ಳಾರಿ, ಏ.3–**ಬಳ್ಳಾರಿ ನಗರದ ಕುಂಬಾರ ಹೊಣಿ ಯಲ್ಲಿ ವಾಸವಿ ಸ್ವಗೃಹ ಹೋಮ ನೀಡ್ಸ್ ಮತ್ತು ಕನ್ಸಲ್ಟೆನ್ಸಿ ಮಾಲೀಕ ಟಿ.ವಿಶ್ವನಾಥ ಜನರ ಬಳಿ ಅವರು ಖರೀದಿ ಮಾಡಿದ ಯಾವುದೇ ವಸ್ತುವಿನ ಬಿಲ್ ನೀಡಿ ಅಷ್ಟೇ ಮೊತ್ತದ ನಗದು ನೀಡಿ ಎರಡರ ಮೌಲ್ಯದ ಮೊತ್ತಕ್ಕೆ 25% ಸರ್ವಿಸ್ ಚಾರ್ಜ್ ಪಡೆದು ಕೊಂಡು ಒಂದು ತಿಂಗಳಗೆ 33% ಹೆಚ್ಚಿಗೆ ಹಣ ನೀಡುವುದಾಗಿ ಮತ್ತು 30 ಸಾವಿರದ ನ್ಯೂಟ್ರೀಷನ್ ಖರೀದಿ ಮಾಡಿದ್ರೆ ಮೂವತ್ತಕ್ಕೆ ಮೂವತ್ತು ಸಾವಿರ ಅಂದರೆ ತಿಂಗಳಿಗೆ ಎರಡುಪಟ್ಟು ಹಣ ನೀಡುತ್ತೇನೆ ಎಂದು ಜನರ ಬಳಿ ಹಣವನ್ನು ಕಟ್ಟಿಸಿಕೊಳ್ಳುತ್ತಿರುವುದು ಬೆಳಕಿಗೆ ಬಂದಿದೆ.

ಇದರ ಖಚಿತವಾದ ಮಾಹಿತಿಯನ್ನು ಪಡೆದ ಜಿಲ್ಲಾ ಎಸ್ಪಿ ಶೋಭಾ ರಾಣಿ ಅವರು ಸೈಬರ್ ಕ್ರೈಂ ಅಧಿಕಾರಿಗಳಿಗೆ ಪರಿಶೀಲನೆ ಮಾಡು ವಂತೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ, ಬುಧವಾರ ಅಂಗಡಿ ಮೇಲೆ ಸೈಬರ್ ಕ್ರೈಂ ಡಿವೈಎಸ್ಪಿ ಸಂತೋಷ್ ಚೌಹನ್ ಮತ್ತು ಬ್ರೂಸ್ಪೇಟ್ ಠಾಣೆ ಅಧಿಕಾರಿಗಳು, ಕೋಆಪರೇಟ್ ಸೊಸೈಟಿ ಅಧಿಕಾರಿಗಳು ದಾಳಿ ನಡೆಸಿ 19,38,500 ರೂ ನಗದು, ಯಂತ್ರೋ ಪಕರಣಗಳು ಲೆಕ್ಕ ಬುಕ್ಕಗಳನ್ನು ಸ್ವಾಧೀನ ಮಾಡಿಕೊಂಡು ಬ್ರೂಸ್ ಪೇಟೆ ಠಾಣೆಯಲ್ಲಿ ಪ್ರಕರಣ ಕ್ರೈಂ ನಂ.51/2025, ಕಲಂ 4, 5, 11 ಚಿಟ್ ಫಂಡ್ ಯಾಕ್ಟ್ 1982 ಹಾಗು ಕಲಂ 316(2), 318(4) ಬಿಎನ್‌ಎಸ್ 2023 ಅಡಿಯಲ್ಲಿ ಪ್ರಕರಣ ದಾಖಲೆ ಆಗಿದೆ.

ಮಧ್ಯರಾತ್ರಿ ಒಂದು ಗಂಟೆವರೆಗೆ ಅಂಗಡಿಯ ಮೂಲಗಳನ್ನು ಪರಿಶೀಲನೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ ಇನ್ನಷ್ಟು ಪೂರ್ತಿ ಮಾಹಿತಿ ಸಿಗಬೇಕಾಗಿದೆ ಎಂದು ತಿಳಿಸಿದ್ದಾರೆ.

ಶ್ರೀಮತಿ ಡಾ॥ ಶೋಭಾರಾಣಿ ಹಾಗು ಎಎಸ್ಪಿ ರವಿಕುಮಾರ್,ಮತ್ತು ಡಿವೈಎಸ್ಪಿ ಬಳ್ಳಾರಿ ನಗರ, ಹಾಗು ಡಿವೈಎಸ್ಪಿ ಕ್ರೈಮ್ ಸಂತೋಷ್ ಚವಾಣ್ ಮಾರ್ಗದರ್ಶನದಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಪಿ.ಐ. ಮಹಾಂತೇಶ್ ಹಾಗು ಸಿಬ್ಬಂದಿಗಳಾದ ಎಎಸ್‌ಐ ಶಂಕ್ರಪ್ಪ, ಅಶೋಕ್ ಮೈನಳ್ಳಿ ಸಿಬ್ಬಂದಿಗಳಾದ – ಶರ್ಮಾಸ್, ಕುಮಾರ್ ರೆಡ್ಡಿ, ಆಂಜಿನೇಯ, ಹಾಗು ಪಿಸಿಗಳಾದ ವಿನಯ್‌ಕುಮಾರ್, ಶಿವಕುಮಾರ್, ಸಿದ್ದೇಶ್, ನಿಸಾರ್ ಅಹಮ್ಮದ್, ರವರು ವಶಪಡಿಸಿಕೊಳ್ಳುವುದರಲ್ಲಿ ಯಶಸ್ವಿಯಾಗಿದ್ದಾರೆ. ತನಿಖೆ ಪ್ರಗತಿಯಲ್ಲಿದೆ ಎಂದು ತಿಳಿಸಿದ್ದಾರೆ.

ಇದರಲ್ಲಿ ಹಣ ಹಾಕಿ ಮೋಸ ಹೋದವರು ಬ್ರೂಸ್ಪೇಟ್ ಠಾಣೆಯ ಅಧಿಕಾರಿಗಳನ್ನು ಸಂಪರ್ಕಿಸಿ ದೂರು ನೀಡಬಹುದು. ಈ ಪತ್ತೆ ಕಾರ್ಯವನ್ನು ಡಾ॥ ಶೋಭಾರಾಣಿ ವಿ.ಜೆ, ಐ.ಪಿ.ಎಸ್, ಪೊಲೀಸ್ ವರಿಷ್ಠಾಧಿಕಾರಿಗಳು, ಬಳ್ಳಾರಿ ಇವರು ಮೆಚ್ಚುಗೆ ವ್ಯಕ್ತಪಡಿಸಿರುತ್ತಾರೆ.

### ಜಾತಿಗಣತಿಯಲ್ಲಿ ಮಾದಿಗ ಎಂದು ಕಡ್ಡಾಯವಾಗಿ ನಮೂದಿಸಿ

# ಒಳಮೀಸಲಾತಿ ಜಾರಿಗೆ ಎಐಸಿಸಿ ಅಧ್ಯಕ್ಷ ಖರ್ಗೆ ಅಡ್ಡಿ: ನರಸಪ್ಪ ದಂಡೋರ ಆರೋಪ




**ಕಲಬುತಗಿ, ಏ.3–** ಕರ್ನಾಟಕದಲ್ಲಿ ಒಳ ಮೀಸಲಾತಿ ಜಾರಿಗೆ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರೇ ಅಡ್ಡಿಪಡಿಸುತ್ತಿರುವುದು ಮೇಲ್ನೋಟಕ್ಕೆ ಗೊತ್ತಾಗುತ್ತಿದೆ. ರಾಜ್ಯ ಸರ್ಕಾರವು ಜಾತಿಗಣತಿಯ ಸರ್ವೆ ಕಾರ್ಯ ಕ್ರಮವನ್ನು ಆರಂಭಿಸಲಿದ್ದು, ಮಾದಿಗ ಸಮುದಾಯದವರು ಕಡ್ಡಾಯವಾಗಿ ಮಾದಿಗ ಎಂದು ಬರೆಸಬೇಕು ಎಂದು ಮಾದಿಗ ದಂಡೋರಾ ಸಮಿತಿಯ ರಾಜ್ಯಾಧ್ಯಕ್ಷ ಬಿ. ನರಸಪ್ಪ ದಂಡೋರ ಹೇಳಿದರು.

ಸುದ್ದಿಗೋಷ್ಠಿಯಲ್ಲಿ, ಕರ್ನಾಟಕ ರಾಜ್ಯದಲ್ಲಿ ರಾಜ್ಯ ಸರ್ಕಾರ ಜಾತಿಗಣತಿಯ ಸರ್ವೆ ಕಾರ್ಯಕ್ರಮವು 6ರಿಂದ ಪ್ರಾರಂಭವಾಗುತ್ತದೆ. ಸಕ್ರೀಯವಾಗಿ ಮಾದಿಗರೆಂದು ಬರೆಸಬೇಕು. ಉತ್ತರ ಕರ್ನಾಟಕದಲ್ಲಿನ ನಮ್ಮ ಸಮುದಾಯದವರು ಮಾದಿಗರೆಂದು ಬರೆಸುತ್ತೇವೆ. ಆ ಭಾಗದಲ್ಲಿ ಅಂದರೆ ಹಳೆಯ ಮೈಸೂರು ಭಾಗದಲ್ಲಿ ಉತ್ತರ ಕರ್ನಾಟಕ ಆದಿ ಕರ್ನಾಟಕ, ಆದಿ ದ್ರಾವಿಡ ಎಂದು ಬರೆಸುತ್ತಾರೆ. ಕೆ.ಎಚ್. ಮುನಿಯಪ್ಪ, ಡಾ. ಎಚ್.ಸಿ. ಮಹಾದೇವಪ್ಪ ಅವರು ಆದಿ ಕರ್ನಾಟಕದಲ್ಲಿ ಬರುತ್ತಾರೆ. ಆದಿ ಕರ್ನಾಟಕ ಎಂದರೆ ಮಾದಿಗರು, ಆದಿ ದ್ರಾವಿಡ ಎಂದರೆ ಹೊಲೆಯರು. ಹೀಗಾಗಿ ಹೊಲೆಯರು ಯಾರು, ಮಾದಿಗರು ಯಾರು? ಎಂಬುದು ಗೊಂದಲ ಮಯವಾಗಿದೆ. ಹಾಗಾಗಿ ಕೂಡಲೇ ಮಧ್ಯಂತರ ವರದಿಯನ್ನು ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ತರಿಸಿಕೊಳ್ಳಬೇಕು. ಅಂಕಿ, ಅಂಶಗಳ ಮೇಲೆ ಸದಾಶಿವ ಆಯೋಗದ ವರದಿಯನ್ನು ಪರಿಶೀಲಿಸಬೇಕು ಹಾಗೂ ಮಹಾದೇವಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ವರದಿಯನ್ನು ಸಹ ಅವಲೋಕಿಸಿ ಒಳ ಮೀಸಲಾತಿಯನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಮಾದಿಗರಿಗೆ ಎಲ್ಲೋ ಒಂದು ಕಡೆ ಅನ್ಯಾಯವಾಗುತ್ತಿದೆ. ರಾಜಕೀಯವಾಗಿ ರಾಜ್ಯ ಸರ್ಕಾರವು ಅನ್ಯಾಯ ಮಾಡುತ್ತಿದೆ. ಕಳೆದ ಎರಡು ವರ್ಷಗಳಿಂದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರವು ಅಧಿಕಾರದಲ್ಲಿದೆ. ಈ ಅವಧಿಯಲ್ಲಿ ನಮ್ಮ ಸಮಾಜದವರ ಮೇಲೆ ದೌರ್ಜನ್ಯ ಹೆಚ್ಚುತ್ತಿದೆ. ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಮಾದಿಗರು ಜಾತಿ ಜನಗಣತಿಯಲ್ಲಿ ಬರೆಯಬೇಕು. ನನ್ನ ಸಮಾಜ ಹಿಂದೆ ಬಿದ್ದಿದೆ. ಸಮಾಜವು ಸಮಗ್ರ ಅಭಿವೃದ್ಧಿ ಹೊಂದಲು ಮಂದಾಕೃಷ್ಣ ಮಾದಿಗ ಅವರು ಕಳೆದ 30 ವರ್ಷಗಳಿಂದ ಹೋರಾಟ ಮಾಡಿಕೊಂಡು ಬಂದಿದ್ದಾರೆ. ಒಳ ಮೀಸಲಾತಿ ಕುರಿತು ಕಳೆದ ಆಗಸ್ಟ್ ಒಂದರಂದು ಸರ್ವೋಚ್ಛ ನ್ಯಾಯಾಲಯದ ತೀರ್ಪು ಬಂದಿದೆ. ಎಲ್ಲ ರಾಜ್ಯಗಳು ಒಳ ಮೀಸಲಾತಿಯನ್ನು ಮಾಡಿಕೊಳ್ಳುವ ಕುರಿತು ನಿರ್ದೇಶನ ನೀಡಿದೆ. ದಕ್ಷಿಣ ಭಾರತದಲ್ಲಿನ ರಾಜ್ಯಗಳು ಈ ಕುರಿತು ಕ್ರಮ ಕೈಗೊಳ್ಳುತ್ತಿವೆ. ತೆಲಂಗಾಣ, ಆಂಧ್ರದಲ್ಲಿ ತಿದ್ದುಪಡಿ ಆಗಿದೆ. ಕೆಲವೇ ದಿನಗಳಲ್ಲಿ ಜಾರಿಗೆ ಬರಲಿದೆ. ಮತ್ತು ತಮಿಳ್ನಾಡಿನಲ್ಲಿ ಶೇಕಡಾ 3ರಷ್ಟು ಒಳ ಮೀಸಲಾತಿ ಬಂದಿದೆ. ತೆಲಂಗಾಣದಲ್ಲಿ ಶೇಕಡಾ 9ರಷ್ಟು

### ಯತ್ನಾಳ್ ಹೊಸ ಪಕ್ಷ ಕಟ್ಟಲ್ಲ, ನಾವೂ ಬಿಜೆಪಿ ಬಿಡಲ್ಲ

# ನೂರಕ್ಕೆ ನೂರು ಯತ್ನಾಳ್ ಬಿಜೆಪಿಗೆ ವಾಪಸ್ ಬರುವುದು ಖಚಿತ: ಜಾರಕಿಹೊಳಿ



**ಬೆಳಗಾವಿ, ಏ.3–** ನಾವು ಯಾವುದೇ ಪರಿಸ್ಥಿತಿಯಲ್ಲಿ ಬಿಜೆಪಿ ಪಕ್ಷ ಬಿಡುವುದಿಲ್ಲ. ಅದೇ ರೀತಿ ಬಸನಗೌಡ ಪಾಟೀಲ ಯತ್ನಾಳ್ ಹೊಸ ಪಕ್ಷ ಕಟ್ಟಲ್ಲ, 100ಕ್ಕೆ ನೂರು ಮತ್ತೆ ಬಿಜೆಪಿಗೆ ಯತ್ನಾಳ್ ಬಿಜೆಪಿಗೆ ವಾಪಸ್ ಬರುತ್ತಾರೆ" ಎಂದು ಶಾಸಕ ರಮೇಶ್ ಜಾರಕಿಹೊಳಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಯತ್ನಾಳ್ ಹೊಸ ಪಕ್ಷದ ಬಗ್ಗೆ ಹೇಳಿದ್ದ ಉದ್ದೇಶವೇ ಬೇರೆ. ಮಾಧ್ಯಮದಲ್ಲಿ ಬಂದಿರುವುದೇ ಬೇರೆ. ಹಾಗಾಗಿ, ಬಿಜೆಪಿಯಲ್ಲಿ ಯತ್ನಾಳ್ ಮುಂದುವರೆಯುವ ವಿಶ್ವಾಸವಿದೆ. ಅವರು ಎಲ್ಲಿಯೂ ಹೋಗಲ್ಲ ಎಂದರು.

ಯತ್ನಾಳ್ ಉಚ್ಚಾಟನೆಯಾಗಿದ್ದು ದುರ್ದೈವ: ಹಿಂದುತ್ವಕ್ಕಾಗಿ ಹೊಸ ಪಕ್ಷ ಸ್ಥಾಪನೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಆರ್‌ಎಸ್‌ಎಸ್ ಇದೆಯಲ್ಲ ಅಷ್ಟೇ ಸಾಕು. ಬೇರೆ ಯಾವುದರ ಅವಶ್ಯಕತೆ ಇಲ್ಲ. ಮೊನ್ನೆ ಶಾಸಕರ ಸಭೆಯಲ್ಲಿ ಚರ್ಚೆ ಆಗಿದೆ. ಪಕ್ಷಕ್ಕೆ ಮುಜಗುರ ಆಗುವ ಹೇಳಿಕೆ ಕೊಡಬೇಡ ಅಂತಾ ಹೇಳಿದ್ದೇವೆ. ಯತ್ನಾಳ್ ನಮ್ಮ ಪಕ್ಷದ ದೊಡ್ಡ ನಾಯಕರಿದ್ದರು. ಉಚ್ಚಾಟನೆ ಆಗಿದ್ದು ದುರ್ದೈವ. ಪಕ್ಷದ ಹಿರಿಯರನ್ನು ಶೀಘ್ರವೇ ಭೇಟಿ ಮಾಡಿ ಯತ್ನಾಳ್ ಅವರ ಉಚ್ಚಾಟನೆ ವಾಪಸ್ ಪಡೆದುಕೊಳ್ಳುವಂತೆ ಮನವಿ ಮಾಡುತ್ತೇವೆ ಎಂದು ತಿಳಿಸಿದರು.

ಯತ್ನಾಳ್ ಬೆನ್ನಿಗೆ ಪಂಚಮಸಾಲಿ ಸಮಾಜ ನಿಲ್ಲುತ್ತಿಲ್ಲ ಎಂಬ ಮಾಧ್ಯಮಗಳ ಪ್ರಶ್ನೆಗೆ "ಅದು ನನಗೆ ಗೊತ್ತಿಲ್ಲ. ಹಿಂದೆ ಯತ್ನಾಳ್ ಬಗ್ಗೆ ಗೋಕಾಕ್ ಮತ್ತು ಸಂಕೇಶ್ವರದಲ್ಲಿ ಅವರು ಮಾತಾಡಿದ್ದ ವಿಡಿಯೋ ಕ್ಲಿಪ್ ತೆಗೆಯಿರಿ. ನಮ್ಮ ಅಣ್ಣಾ, ತಮ್ಮ, ಕಾಕಾ ಎಂದಿದ್ದರು. ಮುಂದೆ ಮುಖ್ಯಮಂತ್ರಿ ಮಾಡುತ್ತೇವೆ ಎಂದವರೇ ಈಗ ವಿರುದ್ಧ ಮಾತನಾಡುತ್ತಿದ್ದಾರೆ. ಒಂದು ಸಮಾಜ ಒಂದು ಪಕ್ಷಕ್ಕೆ ಸಿಮೀತ ಆಗಿದೆ ಅಂತಾ ಹೇಳುವುದು ತಪ್ಪಾಗುತ್ತದೆ. ರಾಜಕೀಯ ಬೇರೆ, ಸಮಾಜ ಸೇವೆ ಬೇರೆ ಎಂದು ಹೇಳಿದರು.

ನಾನು ಅವರ ಬಗ್ಗೆ ಮಾತನಾಡಲ್ಲ: ಯತ್ನಾಳ್ ಬಗ್ಗೆ ಲಕ್ಷ್ಮೀ ಹೆಬ್ಬಾಳ್ಕರ್ ಟೀಕೆಗೆ ಪ್ರತಿಕ್ರಿಯಿಸಿ, ಅವರ ಬಗ್ಗೆ ನಾನು ಮಾತನಾಡುವುದಿಲ್ಲ. ಹಿಂದಿನ ವಿಡಿಯೋ ಕ್ಲಿಪ್ ತೆಗೆಸಿ ನೋಡಿ. ಎದೆ ಬಡಿದುಕೊಂಡು ಯತ್ನಾಳರನ್ನು ಸಿಎಂ ಮಾಡುತ್ತೇವೆ, ಮೂರನೇ ಮಹಡಿಯಲ್ಲಿ ಕೂರಿಸುತ್ತೇವೆ ಎಂದಿದ್ದರು ಎಂದು ರಮೇಶ ಜಾರಕಿಹೊಳಿ ತಿರುಗೇಟು ನೀಡಿದರು.

ನೀವೇ ನನ್ನ ವಿಕೆಟ್ ಉರುಳಿಸಲು ಪ್ರಯತ್ನಿಸುತ್ತಿದ್ದಿರಿ: ದೀಪಾವಳಿಗೆ ನಿಮ್ಮನ್ನು ಬಿಜೆಪಿಯಿಂದ ಉಚ್ಚಾಟಿಸುವ ಬಗ್ಗೆ ರಾಜಕೀಯ ವಲಯದಲ್ಲಿ ಕೇಳಿಬರುತ್ತಿದೆ ಎಂಬ ಮಾಧ್ಯಮಗಳ ಪ್ರಶ್ನೆಗೆ, ಈ ರೀತಿ ಯಾರು ಹೇಳಿದ್ದಾರೆ. ಅವರ ಹೆಸರು ಹೇಳಿ. ನೀವೇ ನನ್ನ ವಿಕೆಟ್ ಉರುಳಿಸಲು ಪ್ರಯತ್ನಿಸುತ್ತಿದ್ದಿರಿ. ಅದು ಆಗುವುದಿಲ್ಲ ಎಂದರು.

ಕಾಂಗ್ರೆಸ್ ವಿರುದ್ಧ ಬಿಜೆಪಿ ಜನಾಕ್ರೋಶ ಪ್ರತಿಭಟನೆಯಲ್ಲಿ ಭಾಗಿಯಾಗುವ ಬಗ್ಗೆ ಕಾಲ ನಿರ್ಧರಿಸುತ್ತದೆ. ಇನ್ನು ಯತ್ನಾಳ್ ಅವರು ಲಿಂಗಾಯತ ಸ್ವಾಮೀಜಿಗಳನ್ನು ಭೇಟಿ ಆಗುತ್ತಿದ್ದಾರೆ. ನಾನು ಮತ್ತು ಕುಮಾರ ಬಂಗಾರಪ್ಪ ಎಸ್ ಸಿ, ಎಸ್ ಟಿ ಮತ್ತು ಒಬಿಸಿ ಸಮುದಾಯದ ಸ್ವಾಮೀಜಿಗಳನ್ನು ಭೇಟಿ ಆಗಲಿದ್ದೇವೆ ಎಂದು ಮಾಧ್ಯಮಗಳ ಪ್ರಶ್ನೆಗೆ ರಮೇಶ್ ಜಾರಕಿಹೊಳಿ ಉತ್ತರಿಸಿದರು.



ಈ ವರ್ಷದ ಮೊದಲ ಮಳೆಯ ನಂತರ ಗುರುವಾರ ಹಂಪಿಯಲ್ಲಿ ಕಂಗೊಳಿಸಿದ ವಿಜಯ ವಿಠಲ ದೇವಾಲಯ.

### ನ್ಯಾಯಾಧೀಶರ ಮನೆಗೇ ಕನ್ನ

## 8 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಲೂಟಿ




**ಬೀದರ್, ಏ.3–** ನಗರದ ಜನವಾಡ ರಸ್ತೆಯಲ್ಲಿನ ನ್ಯಾಯಾಂಗ ವಸತಿ ಗೃಹದಲ್ಲಿರುವ 2ನೇ ಹೆಚ್ಚುವರಿ ಸಿವಿಲ್ ಮತ್ತು 2ನೇ ಜೆಎಂಎಫ್ಸಿ ನ್ಯಾಯಾಲಯದ ನ್ಯಾ.ಎಂ.ಡಿ.ಶಾಯಿಜ್ ಚೌಟಾಯಿ ಅವರ ಮನೆಗೆ ನುಗ್ಗಿದ ಕಳ್ಳರು, 8 ಲಕ್ಷ ರೂ. ಮೌಲ್ಯದ ಚಿನ್ನಾಭರಣ ದೋಚಿದ ಘಟನೆ ನಡೆದಿದೆ. ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ನ್ಯಾಯಾಧೀಶರು ಮತ್ತು ಕುಟುಂಬ ಮಾ.29ರಂದು ಮನೆಗೆ ಬೀಗ ಹಾಕಿ ಸ್ವಗ್ರಾಮ ಕೊಪ್ಪಳಕ್ಕೆ ತೆರಳಿದ್ದರು. ಗಿಡಗಳಿಗೆ ನೀರು ಹಾಕಲು ಸೇವಕ ಮನೆಗೆ ಬಂದಾಗ ಘಟನೆ ಬೆಳಕಿಗೆ ಬಂದಿದೆ. ಕಳ್ಳತನ ನಡೆದಿರುವುದನ್ನು ತಿಳಿದ ತಕ್ಷಣ ತಡರಾತ್ರಿ ನಗರಕ್ಕೆ ಬಂದು ಪರಿಶೀಲಿಸಿದಾಗ ಮನೆ ಕಳ್ಳತನವಾಗಿದ್ದು ಗೊತ್ತಾಗಿದೆ. ಮನೆಯ ಸುತ್ತ ಅಳವಡಿಸಲಾದ ಸಿಸಿ ಟಿವಿ ದೃಶ್ಯ ಪರಿಶೀಲಿಸಿದಾಗ ನಾಲ್ವರು ಕಳ್ಳರು ಹಿಂಭಾಗದಿಂದ ಬಂದು ಮುಖ್ಯ ಬಾಗಿಲಿನ ಬೀಗ ಮುರಿದು ಬೆಲೆಬಾಳುವ ವಸ್ತುಗಳನ್ನು ದೋಚಿದ್ದಾರೆ. ನ್ಯಾಯಾಧೀಶರ ದೂರಿನ್ವಯ ನೂತನ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಲಿಂಗಾಯತ ಧರ್ಮ ಸನಾತನ ಧರ್ಮದ ಭಾಗವಲ್ಲ: ಬಸವರಾಜ್ ಧನ್ನೂರ



**ಬೀದರ್, ಏ.3–** ಲಿಂಗಾಯತ ಧರ್ಮ ಸನಾತನ ಧರ್ಮದ ಭಾಗವಲ್ಲ. ಲಿಂಗಾಯತ ಧರ್ಮ ಬಸವಣ್ಣನವರು ಸ್ಥಾಪಿಸಿದ ಪ್ರತ್ಯೇಕ ಧರ್ಮವಾಗಿದೆ ಎಂದು ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ್ ಧನ್ನೂರ್ ಅವರು ಹೇಳಿದರು.

ಬೀದರ ತಾಲ್ಲೂಕಿನ ಕೊಳಾರ್(ಕೆ) ಗ್ರಾಮ ದಲ್ಲಿ ರಾಷ್ಟ್ರೀಯ ಬಸವ ದಳದ ಗ್ರಾಮ ಘಟಕದ ವತಿಯಿಂದ ಆಯೋಜಿಸಿದ್ದ ಅಲ್ಲಮಪ್ರಭು ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸನಾತನ ಧರ್ಮದಲ್ಲಿ ಇರುವ ಅಸಮಾನತೆ, ಮೌಢ್ಯತೆ, ಕಂದಾಚಾರಗಳನ್ನು ಅಲ್ಲಗಳೆದು ಬಸವಣ್ಣನವರು ವೈಚಾರಿಕವಾದ ಹೊಸ ಲಿಂಗಾಯತ ಧರ್ಮ ಕಟ್ಟಿದರು. ಲಿಂಗಾಯತ ವಿನೂತನ, ನಿತ್ಯ ನೂತನ ಧರ್ಮವಾಗಿದೆ ಎಂದು ತಿಳಿಸಿದರು.

ಲಿಂಗಾಯತಕ್ಕೆ ಸನಾತನ ಧರ್ಮದೊಂದಿಗೆ ಜೋಡಿಸುವ ಪ್ರಯತ್ನಗಳು ನಡೆದಿವೆ. ಲಿಂಗಾಯತರು ಎಚ್ಚರ ವಹಿಸಬೇಕು. ಬಸವಣ್ಣನವರು ಲಿಂಗಾಯತ ಧರ್ಮ ಕೊಟ್ಟರೂ ಸ್ವತಃ ಎಲ್ಲೂ ಧರ್ಮ ಗುರುವೆಂದು ಹೇಳಿಕೊಂಡಿಲ್ಲ. ನಾನೊಬ್ಬ ಭಕ್ತ ಎಂದೇ ಹೇಳಿ ಔದಾರ್ಯ ಮೆರೆದಿದ್ದಾರೆ. ವಿಶ್ವದ ಮೊಟ್ಟ ಮೊದಲ ಸಂಸತ್ತಾದ 12ನೇ ಶತಮಾನದ ಬಸವಕಲ್ಯಾಣದ ಅನುಭವ ಮಂಟಪದ ಪ್ರಥಮ ಪೀಠಾಧ್ಯಕ್ಷ ಅಲ್ಲಮಪ್ರಭು ದೇವರು ತಮ್ಮ ವಚನದಲ್ಲಿ ಮಹಾ ಮಹಿಮ ಸಂಗನಬಸವಣ್ಣ ಎನಗೆಯೂ ಗುರು, ನಿನಗೆಯೂ ಗುರು, ಜಗವೆಲ್ಲಕ್ಕೆಯೂ ಗುರು ಎಂದು ಹೇಳಿದ್ದಾರೆ. ಬಸವಣ್ಣನವರನ್ನು ಗುರುವೆಂದು ಒಪ್ಪದವರು ಅಲ್ಲಮ ಪ್ರಭುದೇವರ ವಚನ ಓದಬೇಕು. ಆ ಮೂಲಕ ಧರ್ಮ ಗುರುವಿನ ಕುರಿತ ತಮ್ಮ ಗೊಂದಲ ನಿವಾರಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ರಾಜೇಂದ್ರಕುಮಾರ್ ಗಂದಗೆ ಅವರು ಮಾತನಾಡಿ, ಬಸವ ಭಕ್ತರೆಲ್ಲರೂ ಸೇರಿ ಗ್ರಾಮದಲ್ಲಿ ಮಾದರಿ ಬಸವ ಮಂಟಪ ನಿರ್ಮಿಸಿರುವುದು ಶ್ಲಾಘನೀಯ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಜಗದ್ಗುರು ಮಾತೆ ಮಹಾದೇವಿ ಅವರು ರಚಿಸಿದ ಸಾಮೂಹಿಕ ಪ್ರಾರ್ಥನೆ ಪುಸ್ತಕ ಬಿಡುಗಡೆ ಮಾಡಲಾಯಿತು.

ರಾಜ್ಯ ಜಾನಪದ ಅಕ್ಯಾಡೆಮಿ ಪ್ರಶಸ್ತಿ ಪುರಸ್ಕೃತ ಮಾರುತಿ ಚಾಂಬೋಳ್ ಅವರನ್ನು ಸನ್ಮಾನಿಸಲಾಯಿತು. ನಿಕಿತಾ ಪಾಪಡೆ ಹಾಗೂ ಸಿಂಚನಾ ಬಿರಾದಾರ್ ಅವರು ಪ್ರಾರ್ಥನೆ ನಡೆಸಿ ಕೊಟ್ಟರು. ಭಕ್ತಿಶ್ರೀ ತುಪ್ಪದ ವಚನ ಗಾಯನ ಮಾಡಿದರು. ಪಾರಮ್ಮ ಮಾರುತೆಪ್ಪ ಪಾಪಡೆ ಅವರು ಗುರು ಪೂಜೆಗೈದರು. ರಾಷ್ಟ್ರೀಯ ಬಸವ ದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ್ ಪಾಟೀಲ್ ಗಾದಗಿ ಅವರು ಷಟ್ ಸ್ಥಲ ಧ್ವಜಾರೋಹಣ ಮಾಡಿದರು.

## ರಾಯಚೂರು ಗ್ರೀನ್‌ಫೀಲ್ಡ್ ವಿಮಾನನಿಲ್ದಾಣಕ್ಕೆ ಪರಿಸರ ಇಲಾಖೆ ಹಸಿರು ನಿಶಾನೆ



**ರಾಯಚೂರು, ಏ.3–** ನಗರದಲ್ಲಿ ನಿರ್ಮಿಸಲಾಗುತ್ತಿರುವ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣಕ್ಕೆ ಕೇಂದ್ರ ಪರಿಸರ ಮಂತ್ರಾಲಯ ಅನುಮತಿ ನೀಡಿ ಆದೇಶ ಹೊರಡಿಸಿದೆ. ಕಲ್ಯಾಣ ಕರ್ನಾಟಕದ ಹೆಬ್ಬಾಗಿಲು ಆಗಿರುವ ರಾಯಚೂರು ಜಿಲ್ಲೆಯಲ್ಲಿ ವಿಮಾನ ನಿಲ್ದಾಣದ ಕನಸು ನನಸಾಗುವ ಕಾಲ ಮತ್ತಷ್ಟು ಸನ್ನಿಹಿತವಾಗಿದೆ ಎಂದು ಸಣ್ಣ ನೀರಾವರಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರಾದ ಎನ್ ಎಸ್ ಬೋಸರಾಜು ಅವರು ಸಂತಸ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ನೀಡಿರುವ ಅವರು, ರಾಯಚೂರು ನಗರದಲ್ಲಿ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣವನ್ನ ನಿರ್ಮಿಸಬೇಕು, ಈ ಮೂಲಕ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಇಂಬು ನೀಡಬೇಕು ಎನ್ನುವುದು ನಮ್ಮ ಸರಕಾರದ ಆಶಯವಾಗಿದೆ. ಈ ನಿಟ್ಟಿನಲ್ಲಿ ಹೊಸ ಸರಕಾರ ಅಧಿಕಾರಕ್ಕೆ ಬಂದ ನಂತರ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯವನ್ನು ಚುರುಕುಗೊಳಿಸಲಾಗಿತ್ತು. ನಮ್ಮ ಕಾಂಗ್ರೆಸ್ ಸರ್ಕಾರ ರಾಯಚೂರಿನಲ್ಲಿ ನೂತನ ಗ್ರೀನ್ ಫೀಲ್ಡ್ ಏರ್‌ಪೋರ್ಟ್ ಮಾಡಲು ಬಹಳ ಪ್ರಯತ್ನ ಮಾಡಿತ್ತು. ಅಲ್ಲದೇ, ಆಯವ್ಯಯದಲ್ಲೂ ಈ ಬಗ್ಗೆ ಪ್ರಸ್ತಾಪಿಸಲಾಗಿತ್ತು. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ವಿಶೇಷ ಕಾಳಜಿ ವಹಿಸಿ ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಮಾಡಿದ್ದರು. ರಾಯಚೂರು ನಗರ ದಲ್ಲಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಅಗತ್ಯವಿರುವ ಎಲ್ಲ ಸಹಕಾರವನ್ನು ಸರ್ಕಾರ ನೀಡುವುದಾಗಿಯೂ ಭರವಸೆ ನೀಡಿದ್ದರು. ಇದರ ಬೆನ್ನಲ್ಲೇ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ವತಿಯಿಂದ ಅಗತ್ಯ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಇದರ ಬಗ್ಗೆ ಕೈಗಾರಿಕೆ ಮತ್ತು ಮೂಲ ಸೌಕರ್ಯ ಸಚಿವ ಎಂ.ಬಿ ಪಾಟೀಲ್ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಕೂಡಾ ವಿಶೇಷ ಒತ್ತು ನೀಡಿದ್ದರು.

ರಾಯಚೂರು ಸಂಸದ ಜಿ.ಕುಮಾರ ನಾಯ್ಕ್ ಅವರು ಇತ್ತೀಚಿಗೆ ಕೇಂದ್ರ ವಿಮಾನಯಾನ ಸಚಿವ ರಾಮ್ ಮೋಹನ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿರುವ ಕೇಂದ್ರ ವಿಮಾನಯಾನ ಸಚಿವರು, ಅಗತ್ಯ ಅನುಮತಿಯನ್ನು ನೀಡಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣದಿಂದ ಕಲ್ಯಾಣ ಕರ್ನಾಟಕದ ಪ್ರಮುಖ ಜಿಲ್ಲೆಗೆ ಉತ್ತಮ ಸಂಪರ್ಕ ದೊರೆತು, ಸರ್ವತೋಮುಖ ಅಭಿವೃದ್ಧಿಗೆ ಅನುಕೂಲವಾಗಲಿದೆ. ತ್ವರಿತಗತಿಯಲ್ಲಿ ಕೇಂದ್ರ ಪರಿಸರ ಮಂತ್ರಾಲಯ ದಿಂದ ಅನುಮತಿ ದೊರೆತಿರುವುದು ಉತ್ತಮ ಬೆಳವಣಿಗೆಯಾಗಿದೆ. ಇದಕ್ಕೆ ಕೇಂದ್ರ ಸರ್ಕಾರ ಹಾಗೂ ಕೇಂದ್ರ ವಿಮಾನಯಾನ ಸಚಿವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

## ನಾಡೋಜ ಬೆಳಗಲ್ಲು ವೀರಣ್ಣನವರ ದ್ವಿತೀಯ ಪುಣ್ಯ ಸ್ಮರಣೆಯ ಅಂಗವಾಗಿ ಹಿರಿಯ ರಂಗಭೂಮಿ ಸಾಧಕರಿಗೆ ಸನ್ಮಾನ



**ಬಳ್ಳಾರಿ, ಏ.3–** ನಾಡೋಜ ಬೆಳಗಲ್ಲು ವೀರಣ್ಣನವರ ದ್ವಿತೀಯ ಪುಣ್ಯ ಸ್ಮರಣೆಯ ಅಂಗವಾಗಿ 'ಹಿರಿಯ ರಂಗಭೂಮಿ ಸಾಧಕರಿಗೆ ಸನ್ಮಾನ ಹಾಗೂ ಸಂಗನಕಲ್ಲು ಗ್ರಾಮದ ಆದರ್ಶ ವೃದ್ಧಾಶ್ರಮದ ನಿವಾಸಿಗಳಿಗೆ ಭೋಜನ ಸಂತರ್ಪಣೆ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಸನ್ಮಾನಿತರೆಲ್ಲರೂ 80 ವರ್ಷದ ಹಿರಿಯ ಜೀವಿಗಳಾಗಿದ್ದು, ಐವತ್ತು ವರ್ಷಗಳ ಕಾಲ ರಂಗಭೂಮಿಯಲ್ಲಿ ಸೇವೆ ಸಲ್ಲಿಸಿದ ಸಾಧಕರಾಗಿರುವುದು ವಿಶೇಷವಾಗಿದೆ. ಶ್ರೀಮತಿ ಸುಜಾತಮ್ಮ, ಶ್ರೀಮತಿ ಕೊಟ್ನೇಕಲ್ ರಂಗಮ್ಮ ಹಾಗೂ ಚನ್ನಬಸಪ್ಪನವರ ನಿವಾಸಗಳಿಗೆ ತೆರಳಿ ಅವರ ಕುಟುಂಬದ ನೇತೃತ್ವದಲ್ಲಿ ಸನ್ಮಾನಿಸಿದ್ದು ಹಿರಿಯ ಕಲಾವಿದರ ಮನಗಳಲ್ಲಿ ಸಂತಸ ಮೂಡಿಸಿತು. ಸನ್ಮಾನದ ನಂತರ ಹಿರಿಯರು ದಿ. ಬೆಳಗಲ್ಲು ವೀರಣ್ಣನವರ ಸಾಧನೆ ಹಾಗೂ ತಮ್ಮ ರಂಗಭೂಮಿಯ ಸುದೀರ್ಘ ಪಯಣದ ನೆನಪುಗಳನ್ನು ನೆನೆದರು.

ಸುಜಾತಮ್ಮನವರು ರಕ್ತರಾತ್ರಿ ನಾಟಕದ ಅಶ್ವತ್ಥಾಮನ ಸಂಭಾಷಣೆಯನ್ನು ಆವೇಶಭರಿತರಾಗಿ ಹೇಳಿದರು. ಬಯಲಾಟದ ದಕ್ಷಿಣಾದಿ ಹಾಡನ್ನು ಏರು ದನಿಯಲ್ಲಿ ಹಾಡಿ, ಇಂಥಾ ಹಾಡುಗಳು ಕಣ್ಮರೆಯಾಗುತ್ತಿರುವುದಕ್ಕೆ ವಿಷಾದ ವ್ಯಕ್ತಪಡಿಸಿದರು. ಕೊಟ್ನೇಕಲ್ ರಂಗಮ್ಮನವರು ವೃತ್ತಿ ನಾಟಕ ಕಂಪನಿಯ ನೋವು ನಲಿವುಗಳನ್ನು ಹಂಚಿಕೊಂಡರು. ಚನ್ನಬಸಪ್ಪನವರು ಮಾತನಾಡಿ ಸರ್ಕಾರದ ಪ್ರಶಸ್ತಿಗಳಿಗೆ ಆಯ್ಕೆ ಮಾಡುವಲ್ಲಿ ಹಿರಿಯರನ್ನು ಕಡೆಗಣಿಸಿರುವುದರ ಬಗ್ಗೆ ನೋವು ವ್ಯಕ್ತಪಡಿಸಿದರು.

## ಎಐಸಿಸಿ ಪ್ರಧಾನ ಕಚೇರಿಯಲ್ಲಿ ಆಯೋಜಿಸಿದ್ದ ಜಿಲ್ಲಾಧ್ಯಕ್ಷರ ಐತಿಹಾಸಿಕ ಸಭೆ ಯಶಸ್ವಿ–ಅಲ್ಲಂ ಪ್ರಶಾಂತ್



**ಬಳ್ಳಾರಿ, ಏ.3–** ದೆಹಲಿಯ ಎಐಸಿಸಿ ಪ್ರಧಾನ ಕಚೇರಿಯಲ್ಲಿ ದಿನಾಂಕ: 27–03–2025 ರಂದು ನಡೆದ ಮೊಟ್ಟಮೊದಲ ಸಭೆ ಹಾಗೂ ಅಖಿಲಾ ಭಾರತ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಮೊಟ್ಟಮೊದಲ ಬಾರಿಗೆ ಆಯೋಜಿಸಿದ್ದ ಜಿಲ್ಲಾಧ್ಯಕ್ಷರ ಐತಿಹಾಸಿಕ ಸಭೆಯನ್ನು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಖರ್ಗೆ ಅವರ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಅವರ ಸಮ್ಮುಖದಲ್ಲಿ ನಡೆಸಲಾಯಿತು.

ಜಿಲ್ಲಾ ಮಟ್ಟದಲ್ಲಿ ಕಾಂಗ್ರೆಸ್ ಸಂಘಟನೆ ಯನ್ನು ಬಲಪಡಿಸುವ ಬಗ್ಗೆ ತೀವ್ರ ಚರ್ಚೆ ನಡೆಯಿತು.

ಈ ವೇಳೆ, ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಮತ್ತು ದೇಶದ ಹಾಗೂ ರಾಜ್ಯದ ಎಲ್ಲಾ ಡಿಸಿಸಿ ಅಧ್ಯಕ್ಷರುಗಳು ಉಪಸ್ಥಿತರಿದ್ದರು ಎಂದು ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಯುವ ಅಧ್ಯಕ್ಷರಾದ ಅಲ್ಲಂ ಪ್ರಶಾಂತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀರಾಮನವಮಿ ಅಂಗವಾಗಿ ಶ್ರೀ ಸೀತಾರಾಮ ಕಲ್ಯಾಣ ಮಹೋತ್ಸವ

## ಬಳ್ಳಾರಿಯಲ್ಲಿ 5ನೇ ವಾರ್ಷಿಕೋತ್ಸವ

### ಆಯೋಜನೆ–ಬೋಯಪಾಟಿ ವಿಷ್ಣುವರ್ಧನ್



**ಬಳ್ಳಾರಿ, ಏ.3–** ಶ್ರೀ ಅಭಯ ಆಂಜನೇಯಸ್ವಾಮಿ ಸೇವಾ ಟ್ರಸ್ಟ್ (ರಿ), 4ನೇ ಕ್ರಾಸ್ (ಪಶ್ಚಿಮ), ವಿದ್ಯಾನಗರ, ಬಳ್ಳಾರಿಯಲ್ಲಿ ಶ್ರೀರಾಮನವಮಿ ಹಬ್ಬದ ಅಂಗವಾಗಿ ಶ್ರೀ ಸೀತಾರಾಮ ಕಲ್ಯಾಣ ಮಹೋತ್ಸವ ಮತ್ತು ರಥೋತ್ಸವ, 5ನೇ ವಾರ್ಷಿಕೋತ್ಸವವನ್ನು ದಿನಾಂಕ 06–04–2025 ಭಾನುವಾರ ಆಯೋಜಿಸಲಾಗಿದೆ.

ಸ್ವಸ್ತಿಶ್ರೀ ಶಾಲಿವಾಹನ ಶಕ 1947ನೇ ಶ್ರೀ ವಿಶ್ವಾವಸುನಾಮ ಸಂವತ್ಸರ ಚೈತ್ರಮಾಸ ಶುಕ್ಲಪಕ್ಷ ನವಮಿ ದಿನಾಂಕ: 06–04–2025 ಭಾನುವಾರ ಬೆಳಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 12.30ರ ವರೆಗೆ ಶ್ರೀ ಸೀತಾರಾಮ ಕಲ್ಯಾಣ ಮಹೋತ್ಸವ, ಮಧ್ಯಾಹ್ನ 1.00 ಗಂಟೆಯಿಂದ ಅನ್ನ ಸಂತರ್ಪಣಾ ಕಾರ್ಯಕ್ರಮ ಮತ್ತು ಸಂಜೆ 4.30 ಗಂಟೆಯಿಂದ ಶ್ರೀ ಸೀತಾ ರಾಮಾಂಜನೇಯಸ್ವಾಮಿಯ ರಥೋತ್ಸವವನ್ನು ಶ್ರೀ ಅಭಯ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುವುದು. ಕಾರಣ ಸಕಲ ಭಕ್ತಾಧಿಗಳು ದೇವಸ್ಥಾನಕ್ಕೆ ಸಪರಿವಾರ ಸಮೇತ ರಾಗಿ ಆಗಮಿಸಿ ತನು–ಮನ–ಧನದಿಂದ ಸೇವೆ ಸಲ್ಲಿಸಿ, ತೀರ್ಥ ಪ್ರಸಾದವನ್ನು ಸ್ವೀಕರಿಸಿ. ಶ್ರೀ ಸೀತಾ ರಾಮಾಂಜನೇಯ ಸ್ವಾಮಿರವರ ಕೃಪೆಗೆ ಪಾತ್ರರಾಗ ಬೇಕೆಂದುಅಭಯ ಆಂಜನೇಯ ಸ್ವಾಮಿ ಸೇವಾ ಟ್ರಸ್ಟ್ ಪದಾಧಿಕಾರಿಗಳು ಮತ್ತು ಬೋಯ ಪಾಟಿ ವಿಷ್ಣುವರ್ಧನ್ ಅವರು ಮನವಿ ಮಾಡಿದ್ದಾರೆ.

## ಲೋಕಾಯುಕ್ತ ಪೊಲೀಸ್ ಅಧಿಕಾರಿಗಳಿಂದ ಸಾರ್ವಜನಿಕ ಅಹವಾಲು ಸ್ವೀಕಾರ

**ವಿಜಯಪುರ, ಏ.3–**ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಜಿಲ್ಲೆಯ ಇಂಡಿ ತಾಲೂಕಿನ ಮಿನಿ ವಿಧಾನ ಸೌಧದ ತಹಶೀಲ್ದಾರ ಕಚೇರಿಯಲ್ಲಿ ಏ.09ರ ಬೆಳಿಗ್ಗೆ 10ರಿಂದ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಲೋಕಾಯುಕ್ತ ಪೊಲೀಸ್ ಅಧೀಕ್ಷಕರು (ಮೊ:9364062528), ಪೊಲೀಸ್ ಉಪಾಧೀಕ್ಷಕರ (ಮೊ:9364062557), ಪೊಲೀಸ್ ಇನ್‌ಸ್ಪೆಕ್ಟರ್–1 (ಮೊ:9364062640), ಪೊಲೀಸ್ ಇನ್‌ಸ್ಪೆಕ್ಟರ್–2 (ಮೊ:9364062639) ಇವರು ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಅಹವಾಲು ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಭರ್ತಿ ಮಾಡಿದ ಮತ್ತು ನೋಟರಿಯಿಂದ ಅಫಿಡವಿಟ್ ಮಾಡಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಸರ್ಕಾರಿ ಕಚೇರಿಗಳಲ್ಲಿ ಅಧಿಕೃತವಾಗಿ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ಹಾಗೂ ಲಂಚದ ಬೇಡಿಕೆ ಇನ್ನಿತರೆ ತೊಂದರೆ ನೀಡುತ್ತಿರುವ ಅಧಿಕಾರಿ–ಸಿಬ್ಬಂದಿಗಳ ವಿರುದ್ಧ ಸಾರ್ವಜನಿಕರು ದೂರುಗಳನ್ನು ನೀಡ ಬಹುದಾಗಿದೆ.

ಸ್ಥಳದಲ್ಲಿ ಪರಿಹಾರ ಕಂಡುಕೊಳ್ಳಬಹುದಾದ ದೂರುಗಳನ್ನು ಅಲ್ಲಿನ ಸ್ಥಳೀಯ ಅಧಿಕಾರಿಗಳ ಸಹಯೋಗದಲ್ಲಿ ಇತ್ಯರ್ಥಪಡಿಸಲು ಪ್ರಯತ್ನಿಸಲಾಗುವುದು ಹಾಗೂ ಸರಕಾರಿ ಅಧಿಕಾರಿಗಳು ಅಕ್ರಮ ಆಸ್ತಿ ಸಂಪಾದನೆ, ಸರಕಾರಿ ಹಣದ ದುರುಪಯೋಗ, ಕಳಪೆ ಕಾಮಗಾರಿ ಹಾಗೂ ಇತರೆ ಯಾವುದೇ ರೀತಿಯ ದೂರುಗಳಿಗಾಗಿ ಕಚೇರಿ ದೂರವಾಣಿ: 08352–255333, 257786, 295074 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಲೋಕಾಯುಕ್ತ ಪೊಲೀಸ್ ಅಧಿಕ್ಷಕರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಕೌಶಲಾಭಿವೃದ್ಧಿ ಆಹ್ವಾನ

**ವಿಜಯಪುರ, ಏ.3–**ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯದ ಹಾಗೂ ಅರಣ್ಯ ಆಧಾರಿತ ಆದಿವಾಸಿ ಸಮುದಾಯದ ನಿರುದ್ಯೋಗಿ ಯುವಕ/ಯುವತಿಯರಿಗೆ ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆ ಬೆಂಗಳೂರು ರವರ ಪ್ರಾದೇಶಿಕ ಕೇಂದ್ರಗಳ ಆಯೋಜಿಸಿರುವ 2024–25ನೇ ಸಾಲಿನ ವಿವಿಧ ಕೌಶಲ್ಯಾಭಿವೃದ್ಧಿ (ತಾಂತ್ರಿಕ ನೈಪುಣ್ಯತೆ) ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಸೆಲ್ಫ್ ಎಂಪ್ಲೊಯಡ್ ಟ್ರೆನಿಂಗ್, ಅಸಿಸ್ಟೆಂಟ್ ಬ್ಯೂಟಿ ಥೆರಪಿಸ್ಟ್ ಹಾಗೂ ಡೊಮೆಸ್ಟಿಕ್ ಡಾಟಾ ಎಂಟ್ರಿ ಆಪ್ರೇಟರ್ ಗಳ 2 ತಿಂಗಳ ತರಬೇತಿ, ಪ್ಯಾಷನ್ ಡಿಸೈನರ್ ನ 1 ತಿಂಗಳ ತರಬೇತಿ ಆಗಿದ್ದು, ಆಸಕ್ತ ಜಿಲ್ಲೆಯ ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯದ ಅರ್ಹ ಅಭ್ಯರ್ಥಿಗಳು ಸಮಾಜ ಕಲ್ಯಾಣ ಇಲಾಖೆ, ವಿಜಯಪುರದ ಉಪನಿರ್ದೇಶಕರ ಕಚೇರಿ ಹಾಗೂ ವಿಜಯಪುರ, ಇಂಡಿ, ಬಸವನ ಬಾಗೇವಾಡಿ, ಸಿಂದಗಿ, ಮುದ್ದೇಬಿಹಾಳ ತಾಲೂಕಿನ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ನಮೂನೆ ಪಡೆದು, ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸಂಪರ್ಕಿಸ ಬಹುದಾಗಿದೆ ಪ್ರಕಟಣೆ ತಿಳಿಸಿದೆ.

### ಬಿ.ನಾಗೇಂದ್ರಗೆ ತಕ್ಷಣ ಸಚಿವ ಸ್ಥಾನ

## ಕಾಂಗ್ರೆಸ್ ಮುಖಂಡರು, ಅಭಿಮಾನಿಗಳಿಂದ ಒತ್ತಾಯ



**ಬಳ್ಳಾರಿ, ಏ.3–** ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಲ್ಲಿ ಅಖಂಡ ಬಳ್ಳಾರಿ ಜಿಲ್ಲೆಯ ಕಾಂಗ್ರೆಸ್ ನಾಯಕರಿಂದ, ಅಭಿಮಾನಿಗಳಿಂದ ಬಿ.ನಾಗೇಂದ್ರ ಅವರಿಗೆ ದೊಡ್ಡ ಖಾತೆಯ ಸಚಿವ ಸ್ಥಾನ ನೀಡುವಂತೆ ಒತ್ತಾಯ ಮಾಡಿದ್ದಾರೆ. ಪ್ರಾಣ ಸ್ನೇಹಿತ ಬಿ. ನಾಗೇಂದ್ರಗೆ ಕೊಟ್ಟ ಮಾತು ಉಳಿಸಿಕೊಳ್ಳಲು ಸಚಿವ ಜಮೀರ್ ಅಹಮದ್ ಖಾನ್ ಫುಲ್ ಆಕ್ಟಿವ್ ಆಗಿ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿದುಬಂದಿದೆ.

ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ನಲ್ಲಿ ಮತ್ತೆ ಅಧಿಕ ಬಹುಮತ ಪಡೆಯಲು ಜಿಲ್ಲೆಯ ಕಾಂಗ್ರೆಸ್ ಪಾಳಯದಲ್ಲಿ ಹುಮ್ಮಸ್ಸು ಕಾಣುತ್ತಿದೆ, ಮಾಡದ ತಪ್ಪಿಗೆ ಬಲಿಯಾಗಿದ್ದ ಮಾಜಿ ಸಚಿವ ಬಿ. ನಾಗೇಂದ್ರ ಅವರು ತಮ್ಮ ಸಚಿವ ಸ್ಥಾನ ಕಳೆದುಕೊಂಡು ಬಹಳ ನೋವು ಅನುಭವಿಸಿದ್ದ ನಾಗೇಂದ್ರ ಅವರಿಗೆ ಇದೀಗ ಮತ್ತೆ ಅದೃಷ್ಟದ ಬಾಗಿಲು ತೆರೆಯುವ ಸುಸಮಯ ಕೂಡಿಬಂದಿದೆ ಎಂದು ಬಲ್ಲ ಮೂಲಗಳಿಂದ ತಿಳಿದುಬಂದಿದೆ.

ಇನ್ನು ನಿರಂತರ ಚರ್ಚೆ ನಡೆಸಿರುವ ರಾಜ್ಯ ಹಾಗೂ ಕೇಂದ್ರ ಕಾಂಗ್ರೆಸ್ ನಾಯಕರು ಕೊನೆಗೂ ಒಂದು ತೀರ್ಮಾನಕ್ಕೆ ಬಂದು ಮಾಜಿ ಸಚಿವ ಬಿ. ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ನೀಡಿದರೆ ಮತ್ತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಲು ಸಹಾಯ ಆಗುತ್ತದೆ ಎನ್ನುವ ಲೆಕ್ಕಾಚಾರ ನಡೆದಿದೆ ಎಂದು ಕಾಂಗ್ರೆಸ್‌ನ ಮುಖಂಡರಿಂದ ತಿಳಿದು ಬಂದಿದೆ.

ನಾಗೇಂದ್ರ ಅವರಿಗೆ ಯಾವಾಗ ಸಚಿವ ಸ್ಥಾನ ನೀಡುತ್ತಾರೆ ಎಂದು ಅವರ ಅಭಿಮಾನಿಗಳು ಖಾತುರದಿಂದ ಕಾಯುತಿದ್ದಾರೆ.


04
ಏಪ್ರಿಲ್
2025
ಕಂದಾಯ ಸಚಿವರು ಹಾಗೂ ಬ್ಯಾಟರಾಯನಪುರ
ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ
ಕೃಷ್ಣಬೈರೇಗೌಡ
ಅವರಿಗೆ
ಜನ್ಮದಿನದ
ಶುಭಾಶಯಗಳು
ಶುಭಕೋರುವವರು:
ಅಭಿಮಾನಿಗಳು ಮತ್ತು ಹಿತೈಷಿಗಳು
ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ, ಬೆಂಗಳೂರು